VOLUME: 16 | 15 MARCH 2026 | ಭಾನುವಾರ | RS: 2 | PAGE: 06 ISSUE: 50 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಕರಾವಳಿ ಮೂಲದ ಖ್ಯಾತ ನಟ ಅನುಷ್ಕಾ ಶೆಟ್ಟಿ ಮದುವೆ ಕುರಿತಾಗಿ ಹೊಸ ಸಮಾಚಾರವೊಂದು ಕೇಳಿ ಬರುತ್ತಿದೆ. 44ರ ವಯಸ್ಸಿನ ಈ ಚೆಲುವೆ ಈವರೆಗೂ ಮದುವೆ ಆಗದೆ ಇರುವುದು ಸ್ವತಃ ಅವರ ಕುಟುಂಬಕ್ಕೆ ಬೇಸರ ತಂದಿತ್ತು. ಆದರೆ ಕೊನೆಗೂ ಮದುವೆ ಆಗಲು ಅನುಷ್ಕಾ ಒಪ್ಪಿಕೊಂಡಿದ್ದಾರೆ ಎಂಬ ಸುದ್ದಿ ಬಂದಿದೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಕಾಳಸಂತೆಯಲ್ಲಿ ಸಿಲಿಂಡರ್ ಮಾರಾಟ

ಬೆಂಗಳೂರು: ನಗರದಲ್ಲಿ ಕಳೆದ ಒಂದು ವಾರದಿಂದ ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರ್ ವಿತರಣೆಯಲ್ಲಿ ವಿಳಂಬವಾಗುತ್ತಿರುವುದು ಮತ್ತು ಕೆಲವೆಡೆ ಕಾಳಸಂತೆ ಮಾರಾಟಕ ಕುರಿತು ಗ್ರಾಹಕರಿಂದ ಆರೋಪಗಳು ಕೇಳಿ ಬರುತ್ತಿವೆ.

ಎಲ್‌ಪಿಜಿ ಬುಕ್ಕಿಂಗ್ ಮತ್ತು ವಿತರಣೆಯ ಕುರಿತು ನಡೆದಿರುವ ಸಮೀಕ್ಷೆಯಲ್ಲಿ 2,721 ಮಂದಿ ಭಾಗವಹಿಸಿದ್ದು, ಈ ಪೈಕಿ ಸುಮಾರು ಶೇ.39ರಷ್ಟು ಮಂದಿ ಡೀಲರ್‌ಗಳು ಸಿಲಿಂಡರ್ ಲಭ್ಯವಿಲ್ಲ ಅಥವಾ ಬುಕ್ಕಿಂಗ್ ವಿಳಂಬವಾಗುತ್ತಿದೆ ಎಂದು ತಿಳಿಸಿದ್ದಾರೆ ಎಂದು ಹೇಳಿದ್ದಾರೆ.

ಸುಮಾರು ಶೇ.16ರಷ್ಟು ಮಂದಿ ಸಾಮಾನ್ಯಕ್ಕಿಂತ ಹೆಚ್ಚು ಕಾಲ ವಿತರಣೆಗೆ ಕಾಯಬೇಕಾಯಿತು ಎಂದು ಹೇಳಿದ್ದಾರೆ. ಇನ್ನು 10 ಶೇಕಡಾ ಮಂದಿ ಡೀಲರ್‌ಗಳನ್ನು ಹಲವು ಬಾರಿ ಸಂಪರ್ಕಿಸಬೇಕಾಯಿತು ಎಂದು ತಿಳಿಸಿದ್ದಾರೆ.ಈ ನಡುವೆ 23 ಶೇಕಡಾ ಮಂದಿ ಬುಕ್ಕಿಂಗ್ ಮತ್ತು ವಿತರಣೆ ಸಾಮಾನ್ಯವಾಗಿಯೇ ನಡೆದಿದೆ ಎಂದು ಹೇಳಿದ್ದಾರೆ.

ಸುಮಾರು 12 ಶೇಕಡಾ ಮಂದಿ ಹೆಚ್ಚುವರಿ ದರ ನೀಡಿ ಕಾಳಸಂತೆ ಮೂಲಕ ಸಿಲಿಂಡರ್ ಖರೀದಿಸಬೇಕಾಯಿತು ಎಂದು ತಿಳಿಸಿದ್ದಾರೆ.

ಡೀಲರ್‌ಗಳಿಂದ ಸರಬರಾಜಿನ ಬಗ್ಗೆ 2,502 ಮಂದಿ ಪ್ರತಿಕ್ರಿಯಿಸಿದ್ದು, ಶೇ.37 ಮಂದಿ ಈಗಾಗಲೇ ಸರಬರಾಜಿನಲ್ಲಿ ಕೊರತೆ ಇದೆ ಎಂದು ಡೀಲರ್‌ಗಳು ಹೇಳಿದ್ದಾರೆ ಎಂದು ತಿಳಿಸಿದ್ದಾರೆ. ಮತ್ತೂ ಶೇ.33 ಮಂದಿ ವಿತರಣೆಯಲ್ಲಿ ವಿಳಂಬ ಸಂಭವಿಸಬಹುದು ಎಂದು ಎಚ್ಚರಿಕೆ ನೀಡಲಾಗಿದೆ ಎಂದು ಹೇಳಿದ್ದಾರೆ.



ಕೆಲವರು ಸಿಲಿಂಡರ್ ಪಡೆಯಲು ಹೆಚ್ಚುವರಿ ಹಣ ನೀಡಿರುವುದಾಗಿ ತಿಳಿಸಿದ್ದಾರೆ. ಸುಮಾರು ಶೇ.3 ಮಂದಿ ಪ್ರತಿ ಸಿಲಿಂಡರ್‌ಗೆ ರೂ.100 ಹೆಚ್ಚುವರಿ ನೀಡಿದರೆ, 10 ಶೇಕಡಾ ಮಂದಿ ರೂ.100ರಿಂದ ರೂ.300ರವರೆಗೆ ಹೆಚ್ಚುವರಿ ಹಣ ನೀಡಿದ್ದಾರೆ.

ಸುಮಾರು 14 ಶೇಕಡಾ ಮಂದಿ ರೂ.300ರಿಂದ ರೂ.500ರವರೆಗೆ ಹೆಚ್ಚುವರಿ ಹಣ ನೀಡಿರುವುದಾಗಿ ತಿಳಿಸಿದ್ದಾರೆ. ಇನ್ನು 16 ಶೇಕಡಾ ಮಂದಿ ಪ್ರತಿ ಸಿಲಿಂಡರ್‌ಗೆ ರೂ.500ಕ್ಕಿಂತ ಹೆಚ್ಚು ಹಣ ನೀಡಿರುವುದಾಗಿ ಹೇಳಿದ್ದಾರೆ.

ಇದೇ ವೇಳೆ ಸುಮಾರು 20 ಶೇಕಡಾ ಮಂದಿ ತಮ್ಮ ಮನೆ ಅಥವಾ ನೆರೆಹೊರೆಯಲ್ಲಿ ಕಾಳಸಂತೆ ಮಾರಾಟ ನಡೆದಿದೆಯೇ ಎಂಬುದರ ಬಗ್ಗೆ ಸ್ಪಷ್ಟ ಮಾಹಿತಿ ಇಲ್ಲ.

> ಕೆಲವರು ಸಿಲಿಂಡರ್ ಪಡೆಯಲು ಹೆಚ್ಚುವರಿ ಹಣ ನೀಡಿರುವುದಾಗಿ ತಿಳಿಸಿದ್ದಾರೆ. ಸುಮಾರು ಶೇ.3 ಮಂದಿ ಪ್ರತಿ ಸಿಲಿಂಡರ್‌ಗೆ ರೂ.100 ಹೆಚ್ಚುವರಿ ನೀಡಿದರೆ, 10 ಶೇಕಡಾ ಮಂದಿ ರೂ.100ರಿಂದ ರೂ.300ರವರೆಗೆ ಹೆಚ್ಚುವರಿ ಹಣ ನೀಡಿದ್ದಾರೆ. ಸುಮಾರು 14 ಶೇಕಡಾ ಮಂದಿ ರೂ.300ರಿಂದ ರೂ.500ರವರೆಗೆ ಹೆಚ್ಚುವರಿ ಹಣ ನೀಡಿರುವುದಾಗಿ ತಿಳಿಸಿದ್ದಾರೆ.

ಈ ಸಮೀಕ್ಷೆಯ ಫಲಿತಾಂಶ ದೇಶವ್ಯಾಪಿ ಸ್ಥಿತಿಯನ್ನು ಕೂಡ ಪ್ರತಿಬಿಂಬಿಸುತ್ತದೆ.

ದೇಶದ 309 ಜಿಲ್ಲೆಗಳಲ್ಲಿನ 57,000ಕ್ಕೂ ಹೆಚ್ಚು ಕುಟುಂಬಗಳು ಭಾಗವಹಿಸಿದ ಸಮೀಕ್ಷೆಯಲ್ಲಿ, ಕಳೆದ ಒಂದು ವಾರದಲ್ಲಿ 57 ಶೇಕಡಾ ಮಂದಿ ಎಲ್‌ಪಿಜಿ ವಿತರಣೆಯಲ್ಲಿ ವಿಳಂಬ ಅಥವಾ ಕಾಳಸಂತೆ ಮಾರಾಟ ನಡೆದಿದೆ ಎಂದು ತಿಳಿಸಿದ್ದಾರೆ.

ಅದರಲ್ಲೂ 36 ಶೇಕಡಾ ಮಂದಿ ಮಧ್ಯವರ್ತಿಗಳು ಪ್ರತಿ ಸಿಲಿಂಡರ್‌ಗೆ ರೂ.100ರಿಂದ ರೂ.500ರವರೆಗೆ ಹೆಚ್ಚುವರಿ ಹಣ ವಸೂಲಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಕೆಲವರು ಬೆಂಗಳೂರಿನಲ್ಲಿ ಒಂದು ಸಿಲಿಂಡರ್‌ಗೆ ರೂ.1,500ರಿಂದ ರೂ.2,800ರವರೆಗೆ ದರ ಕೇಳಲಾಗಿದೆ ಎಂದು ತಿಳಿಸಿದ್ದಾರೆ.

## ಹೆಚ್ಚುವರಿ ಜೈವಿಕ ಅನಿಲ ಘಟಕ ಸ್ಥಾಪನೆಗೆ ಕ್ರಮ

ಬೆಂಗಳೂರು: ಜಿಬಿಎ ವ್ಯಾಪ್ತಿಯಲ್ಲಿ ಮತ್ತಷ್ಟು ಜೈವಿಕ ಅನಿಲ ಘಟಕಗಳ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುವುದೆಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ರವರು ತಿಳಿಸಿದರು.

ಜಿಬಿಎ ವ್ಯಾಪ್ತಿಯ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಕೋರಮಂಗಲದಲ್ಲಿರುವ ಕಸ–ರಸ ಘಟಕಕ್ಕೆ ಇಂದು ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರದಲ್ಲಿ ಹಸಿ ಕಸದಿಂದ ಜೈವಿಕ ಅನಿಕ ಉತ್ಪತ್ತಿ ಮಾಡುವ ಸಲುವಾಗಿ ಸಮಗ್ರವಾಗಿ ಅಧ್ಯಯನ ನಡೆಸಿ, ಜಿಬಿಎ ನಗರ ಪಾಲಿಕೆಗಳಲ್ಲಿ ಜೈವಿಕ ಅನಿಲ ಘಟಕಗಳನ್ನು ಸ್ಥಾಪಿಸಲು ಕ್ರಮ ವಹಿಸಲಾಗುವುದೆಂದು ಹೇಳಿದರು.

ನಗರದಲ್ಲಿ ವೀಕೇಂದ್ರಿಕೃತ ಕೇಂದ್ರಗಳನ್ನು ಸ್ಥಾಪಿಸಬೇಕಾದರೆ ಆಯಾ ನಗರ ಪಾಲಿಕೆಗಳಲ್ಲಿ 2/3 ಎಕರೆ ಜಾಗ ಬೇಕಾಗುತ್ತದೆ. ಕಡಿಮೆ ಅವಧಿಯಲ್ಲಿ ಪ್ರಸ್ತುತ ಇರುವಂತಹ ಘಟಗಳನ್ನು ಉನ್ನತೀಕಣಗೊಳಿಸಿ ಅಲ್ಲಿ ಬಯೋ ಗ್ಯಾಸ್ ಉತ್ಪತ್ತಿ ಮಾಡಿ, ಸ್ಥಳೀಯ ಹೋಟೆಲ್ ಗಳಿಗೆ ವಿತರಣೆ ಮಾಡಲು ಕ್ರಮ ವಹಿಸಲಾಗುವುದೆಂದು ತಿಳಿಸಿದರು.

ಸ್ಥಳೀಯವಾಗಿ ಹಸಿ ಹಾಗೂ ಒಣ ತ್ಯಾಜ್ಯ ವಿಂಗಡಣೆಯಾದರೆ ಸಾಕಷ್ಟು ಅನುಕೂಲವಾಗಲಿದೆ. ಅದಕ್ಕೆ ನಾಗರೀಕರ ಸಹಕಾರ ಪ್ರಮುಖ ಪಾತ್ರ ವಹಿಸಲಿದ್ದು, ನಾಗರಿಕರು ತ್ಯಾಜ್ಯವನ್ನು ವಿಂಗಡಿಸಿ ಕೊಡಲು ಮನವಿ ಮಾಡಿದರು.

ಕಸ–ರಸ ಘಟಕದಲ್ಲಿ 10 ಟನ್ ನಿಂದ ಬಯೋ ಗ್ಯಾಸ್ ಉತ್ಪತ್ತಿಸಿ, ಹತ್ತಿರದ ಹೋಟೆಲ್ ಗೆ ವಿತರಣೆ ಮಾಡಲಾಗುತ್ತಿದ್ದು, ಆ ಪ್ರಮಾಣವನ್ನು ಮತ್ತಷ್ಟು ಹೆಚ್ಚಿಸಲು ಕ್ರಮವಹಿಸಲಾಗುತ್ತದೆ. ಈ ಸ್ಥಳದಲ್ಲಿರುವ ಹೈ ಟೆನ್ಷನ್ ಲೈನ್ ಲೈನ್ ಬದಲಾಯಿಸಿದರೆ, ಬೃಹತ್ ಪ್ರಮಾಣದಲ್ಲಿ ಬಯೋಗ್ಯಾಸ್ ಉತ್ಪತ್ತಿಸಬಹುದಾಗಿದ್ದು, ಆ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು.

## ಅಕ್ರಮ ರೀಫಿಲ್ಲಿಂಗ್: ಪ್ರಕರಣ ದಾಖಲು

ಬೆಂಗಳೂರು: ಗೃಹಬಳಕೆ ಸಿಲಿಂಡರ್ ಅನ್ನು ವಾಣಿಜ್ಯ ಉದ್ದೇಶಕ್ಕಾಗಿ ಬಳಸಿದ್ದಲ್ಲಿ ಸೂಕ್ತ ಕಾನೂನುಕ್ರಮ ಕೈಗೊಳ್ಳಲು ಮಾನ್ಯ ಸಚಿವರು ಸೂಚಿಸಿದ್ದು ಅದರಂತೆ ಗೃಹ ಬಳಕೆ ಸಿಲಿಂಡರ್ಗಳನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುತ್ತಿದ್ದ ಬೆಂಗಳೂರಿನ ಪೀಣ್ಯ ದಲ್ಲಿ 45, ಚಿಕ್ಕಜಾಲದಲ್ಲಿ 209 ಶಿವಮೊಗ್ಗ ಜಿಲ್ಲೆಯಲ್ಲಿ 3 ,ಯಾದಗಿರಿ ಜಿಲ್ಲೆಯಲ್ಲಿ 46 ದಾವಣಗರೆ 13 ಅಗತ್ಯ ವಸ್ತುಗಳ ಕಾಯ್ದೆ 1955 ರ ಕಾಯ್ದೆ ಅಡಿ ಪ್ರಕರಣವನ್ನು ದಾಖಲಿಸಿ ವಶಪಡಿಸಿಕೊಳ್ಳಲಾಗಿದೆ ಹಾಗೆಯೇ ಕೋಲಾರ ಜಿಲ್ಲೆಯ ಕೆಜಿಎಪ್ ನಲ್ಲಿ ಅಕ್ರಮ ರೀಪಿಲ್ಲಿಂಗ್ ನಡೆಸುತ್ತಿದ್ದ ಗ್ಯಾಸ್ ಏಜಂಸ್ಸಿ ಅಂಗಡಿಯ ಮೇಲೆ ಪ್ರಕರಣ ದಾಖಲಿಸಲಾಗಿದೆ.

ವಾಣಿಜ್ಯ ಬಳಕೆಯ ಸಿಲಿಂಡರ್ ಗಳ ಒಟ್ಟು ಶೇ 20% ಸಿಲಿಂಡರ್ ಗಳನ್ನು ಕೇಂದ್ರ ಸರ್ಕಾರದ ಮಾರ್ಗಸೂಚನೆಗಳಂತೆ ಆಸ್ಪತ್ರೆ, ಶಾಲಾ, ಶಿಕ್ಷಣ ಸಂಸ್ಥೆಗಳು ,ವಿಮಾನ ನಿಲ್ದಾನ,ರೈಲು ನಿಲ್ದಾಣ, ಬಸ್ ನಿಲ್ದಾಣಗಳ ಕ್ಯಾಂಟಿನಗಳಿಗೆ ಪ್ರಮುಖ ದೇವಸ್ಥಾನದ ಗಳಲ್ಲಿ ಪ್ರಸಾದ ವಿನಿಯೋಗ ಮಾಡಲು ಮತ್ತು ಸರ್ಕಾರಿ ಕಛೇರಿಗಳಲ್ಲಿ / ವೃದ್ದಾಶ್ರಮ ,ಪ್ರಮುಖ ಖಾಸಗಿ ವಲಯದ ಕಛೇರಿಗಳಿಗೆ ಆದ್ಯತೆ ಮೇರೆಗೆ ವಾಣಿಜ್ಯ ಬಳಕೆಯ ಸಿಲಿಂಡರ್ ಗಳನ್ನು ವಿತರಿಸಲು ಸೂಚಿಸಲಾಗಿದೆ.

ಇಂದು ರಾಜ್ಯದಾಂದ್ಯಯ 14.2 ಇಾಂ ಯ ಗೃಹ ಬಳಕೆಯ ಒಟ್ಟು 386363 ಸಿಲಿಂಡರ್ ಹಾಗೂ ವಾಣಿಜ್ಯ ಬಳಕೆಯ 6371 ಸಿಲಿಂಡರ್ ಗಳನ್ನು ವಿತರಣೆ ಮಾಡಲಾಗಿದೆ.



ಭಾರತೀಯ ನೌಕಾ ಪಡೆಯ ಬೆಂಗಾವಲಿನೊಂದಿಗೆ 40,000 ಮೆಟ್ರಿಕ್ ಟನ್‌ಗಳಿಗೂ ಹೆಚ್ಚು ದ್ರವೀಕೃತ ಪೆಟ್ರೋಲಿಯಂ ಅನಿಲವನ್ನು ಹೊತ್ತ ಭಾರತೀಯ ಶಿವಾಲಿಕ್ ಹಡಗು ಹಾರ್ಮುಜ್ ಜಲಸಂಧಿಯನ್ನು ಯಶಸ್ವಿಯಾಗಿ ದಾಟಿದೆ. ಇರಾನ್ ಬಂದ್ ಮಾಡಿರುವ ಹಾರ್ಮುಜ್ ಜಲಸಂಧಿಯಲ್ಲಿ ನೌಕಾಪಡೆಯ ಬೆಂಗಾವಲಿನಲ್ಲಿ ಶಿವಾಲಿಕ್ ಸಂಚರಿಸಿ ನಂತರ ಮುಕ್ತ ಸಮುದ್ರಕ್ಕೆ ಯಶಸ್ವಿಯಾಗಿ ಸಾಗಿದೆ ಎಂದು ವರದಿಯಾಗಿದೆ. ಈ ಹಡಗು ಎರಡು ದಿನಗಳ ಒಳಗಡೆ ಮುಂಬೈ ಅಥವಾ ಕಾಂಡ್ಲಾ ಬಂದರಿನಲ್ಲಿ ಡಾಕಿಂಗ್ ಆಗುವ ಸಾಧ್ಯತೆಯಿದೆ.

## 2 ದಿನದಲ್ಲಿ ಗ್ಯಾಸ್ ಸಮಸ್ಯೆಗೆ ಪರಿಹಾರ

ನವದೆಹಲಿ: ದೇಶದಲ್ಲಿ ಎಲ್‌ಪಿಜಿ ಸಂಗ್ರಹದಲ್ಲಿ ಯಾವುದೇ ಕೊರತೆಯಿಲ್ಲ. ಪಶ್ಚಿಮ ಏಷ್ಯಾದ ಸಂಘರ್ಷ ಹೆಚ್ಚುತ್ತಿರುವ ಮಧ್ಯೆ ದೇಶದಲ್ಲಿ ಕಚ್ಚಾ ತೈಲ, ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿಯ ಸಾಕಷ್ಟು ಪೂರೈಕೆ ಭಾರತದಲ್ಲಿ ಲಭ್ಯವಿದೆ. ಜನರು ವಿನಾಕಾರಣ ಆತಂಕಕ್ಕೊಳಗಾಗಿ ಬುಕಿಂಗ್ ಮಾಡುತ್ತಿದ್ದಾರೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಭಾರತವು ವಿಶ್ವದ ಎರಡನೇ ಅತಿದೊಡ್ಡ ದ್ರವೀಕೃತ ಪೆಟ್ರೋಲಿಯಂ ಅನಿಲ (ಎಲ್‌ಪಿಜಿ) ಖರೀದಿದಾರ ರಾಷ್ಟ್ರವಾಗಿದ್ದು, ಇದರಲ್ಲಿ ಶೇ. 90ರಷ್ಟು ಹಾರ್ಮುಜ್ ಜಲಸಂಧಿಯ ಮೂಲಕ ಹಾದುಬರುತ್ತದೆ.

ಪರ್ಷಿಯನ್ ಕೊಲ್ಲಿಯಲ್ಲಿ ಎಲ್ಲಾ ಭಾರತೀಯ ನಾವಿಕರು ಸುರಕ್ಷಿತರಾಗಿದ್ದಾರೆ. ಕಳೆದ 24 ಗಂಟೆಗಳಲ್ಲಿ ಯಾವುದೇ ಅಹಿತಕರ ಘಟನೆ ವರದಿಯಾಗಿಲ್ಲ. ಭಾರತೀಯ ಧ್ವಜ ಹೊಂದಿರುವ ಒಟ್ಟು 24 ಹಡಗುಗಳು ಇದ್ದವು. ಈ ಪೈಕಿ 'ಶಿವಾಲಿಕ್', 'ನಂದಾ ದೇವಿ' ಹಡಗುಗಳು ಸಾಗಿಸುತ್ತಿವೆ.

ಇವು ನಿನ್ನೆ ತಡರಾತ್ರಿ ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿವೆ. ಈ ಹಡಗುಗಳಲ್ಲಿ ಸುಮಾರು 92,700 ಮೆಟ್ರಿಕ್ ಟನ್ ಎಲ್‌ಪಿಜಿ ಸಾಗಿಸಲಾಗುತ್ತಿದೆ. ಇವು ಕ್ರಮವಾಗಿ ಗುಜರಾತ್‌ನ ಮುಂದ್ರಾ, ಕಾಂಡ್ಲಾ ಬಂದರು ತಲುಪಲಿವೆ. ಮಾರ್ಚ್ 16 ಮತ್ತು ಮಾರ್ಚ್ 17ರಂದು ಇವು ಭಾರತದ ಬಂದರು ತಲುಪುವ ನಿರೀಕ್ಷೆಯಿದೆ. ಪರ್ಷಿಯನ್ ಕೊಲ್ಲಿಯಲ್ಲಿ ಇನ್ನೂ ಭಾರತದ 22 ಹಡಗುಗಳು ಇವೆ. ಇವುಗಳಲ್ಲಿ 611 ಭಾರತೀಯ ನಾವಿಕರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಕೇಂದ್ರ ಸರ್ಕಾರದ ಹಡಗು ಸಾಗಣೆ ಸಚಿವಾಲಯದ ಅಧಿಕಾರಿ ರಾಜೇಶ್ ಕುಮಾರ್ ಸಿನ್ಹಾ ಹೇಳಿದ್ದಾರೆ.




> ಪರ್ಷಿಯನ್ ಕೊಲ್ಲಿಯಲ್ಲಿ ಎಲ್ಲಾ ಭಾರತೀಯ ನಾವಿಕರು ಸುರಕ್ಷಿತರಾಗಿದ್ದಾರೆ. ಕಳೆದ 24 ಗಂಟೆಗಳಲ್ಲಿ ಯಾವುದೇ ಅಹಿತಕರ ಘಟನೆ ವರದಿಯಾಗಿಲ್ಲ. ಭಾರತೀಯ ಧ್ವಜ ಹೊಂದಿರುವ ಒಟ್ಟು 24 ಹಡಗುಗಳು ಇದ್ದವು. ಈ ಪೈಕಿ 'ಶಿವಾಲಿಕ್', 'ನಂದಾ ದೇವಿ' ಹಡಗುಗಳು ಸಾಗಿಸುತ್ತಿವೆ. ಇವು ನಿನ್ನೆ ತಡರಾತ್ರಿ ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿವೆ.

ಶನಿವಾರ ಸುದ್ದಿಗೋಷ್ಠಿಯಲ್ಲಿ ಪೆಟ್ರೋಲಿಯಂ ಸಚಿವಾಲಯದ ಜಂಟಿ ಕಾರ್ಯದರ್ಶಿ (ಮಾರುಕಟ್ಟೆ ಮತ್ತು ತೈಲ ಸಂಸ್ಕರಣಾಗಾರ) ಸುಜಾತಾ ಶರ್ಮಾ ಕೂಡ ಮಾತನಾಡಿದ್ದು, "ಭಾರತದಲ್ಲಿ ಸಾಕಷ್ಟು ಪ್ರಮಾಣದ ಕಚ್ಚಾ ತೈಲ ಪೂರೈಕೆ ಇದೆ. ಸಂಸ್ಕರಣಾಗಾರಗಳು ಪೂರ್ಣ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ. ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಯಾವುದೇ ಇಂಧನದ ಕೊರತೆ ಕಂಡುಬಂದಿಲ್ಲ. ಸಾಕಷ್ಟು ಪೆಟ್ರೋಲ್ ಮತ್ತು ಡೀಸೆಲ್ ಲಭ್ಯವಿದೆ" ಎಂದು ಹೇಳಿದ್ದಾರೆ. ಭಾರತವು ತನ್ನ ಅಗತ್ಯಗಳನ್ನು ಪೂರೈಸಲು ದೇಶೀಯವಾಗಿ ಸಾಕಷ್ಟು ಪೆಟ್ರೋಲ್ ಮತ್ತು ಡೀಸೆಲ್ ಅನ್ನು ಉತ್ಪಾದಿಸುತ್ತದೆ ಎಂದು ತಿಳಿಸಿದ್ದಾರೆ.

## ಭೀತಿ ಸೃಷ್ಟಿಸುತ್ತಿರುವ ಕಾಂಗ್ರೆಸ್: ಮೋದಿ

ಸಿಲ್ಚಾರ್ (ಅಸ್ಸಾಂ): ಜಾಗತಿಕ ಸಂಘರ್ಷಗಳಿಂದಾಗುವ ಜನರ ಮೇಲಿನ ಪರಿಣಾಮಗಳನ್ನು ಕಡಿಮೆ ಮಾಡಲು ಕೇಂದ್ರವು ಕೆಲಸ ಮಾಡುತ್ತಿದೆ. ಆದರೆ, ದೇಶದಲ್ಲಿ ಭೀತಿಯನ್ನು ಸೃಷ್ಟಿಸಲು ಪ್ರಯತ್ನಿಸುವ ಮೂಲಕ ವಿರೋಧ ಪಕ್ಷ ಕಾಂಗ್ರೆಸ್ 'ಬೇಜವಾಬ್ದಾರಿಯಿಂದ' ವರ್ತಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶನಿವಾರ ಆರೋಪಿಸಿದರು.

ಅಸ್ಸಾಂನ ಸಿಲ್ಚಾರ್‌ನಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಮೋದಿ, ಕಾಂಗ್ರೆಸ್ ಈಶಾನ್ಯವನ್ನು ನಿರ್ಲಕ್ಷಿಸಿತು ಮತ್ತು ಸ್ವಾತಂತ್ರ್ಯದ ಸಮಯದಲ್ಲಿ ಗಡಿಗಳನ್ನು ರೂಪಿಸಲು ಅವಕಾಶ ಮಾಡಿಕೊಡುವ ಮೂಲಕ, ಬರಾಕ್ ಕಣಿವೆಯು ಸಮುದ್ರಕ್ಕೆ ನೇರ ಪ್ರವೇಶವನ್ನು ಕಳೆದುಕೊಂಡಿತು ಎಂದು ಆರೋಪಿಸಿದರು.

'ಜಗತ್ತು ಯುದ್ಧಗಳನ್ನು ಎದುರಿಸುತ್ತಿರುವಾಗ, ದೇಶದ ಜನರ ಮೇಲೆ ಅವುಗಳ ಪರಿಣಾಮವನ್ನು ಕಡಿಮೆ ಮಾಡುವುದು ನಮ್ಮ ಪ್ರಯತ್ನ. ಕಾಂಗ್ರೆಸ್ ಜವಾಬ್ದಾರಿಯುತ ರಾಜಕೀಯ ಪಕ್ಷದ ಪಾತ್ರವನ್ನು ನಿರ್ವಹಿಸಬೇಕಾಗಿತ್ತು. ಆದರೆ, ಅದು ಹಾಗೆ ಮಾಡುವಲ್ಲಿ ವಿಫಲವಾಗಿದೆ. ಅದು ಜನರಲ್ಲಿ ಭೀತಿಯನ್ನು ಸೃಷ್ಟಿಸಲು ಪ್ರಯತ್ನಿಸುತ್ತಿದೆ' ಎಂದು ದೂರಿದರು.7

'ಅವರಿಗೆ ಅಸ್ಸಾಂ ಅಥವಾ ರಾಷ್ಟ್ರದ ಬಗ್ಗೆ ಯಾವುದೇ ದೃಷ್ಟಿಕೋನವಿಲ್ಲ. ಆದರೆ, ಮೋದಿಯನ್ನು ನಿಂದಿಸುವುದು, ವದಂತಿಗಳನ್ನು ಹರಡುವುದು ಮತ್ತು ಜನರನ್ನು ದಾರಿ ತಪ್ಪಿಸುವುದು ಹೇಗೆ ಎಂಬುದು ಮಾತ್ರ ತಿಳಿದಿದೆ' ಎಂದರು. ಬರಾಕ್ ಕಣಿವೆ ಒಂದು ಕಾಲದಲ್ಲಿ ವ್ಯಾಪಾರ ಮತ್ತು ವಾಣಿಜ್ಯದ ಪ್ರಮುಖ ಕೇಂದ್ರವಾಗಿತ್ತು. ಕಾಂಗ್ರೆಸ್ ಈಶಾನ್ಯವನ್ನು ತೊರೆದಂತೆಯೇ, ಬರಾಕ್ ಕಣಿವೆಯನ್ನು ದುರ್ಬಲಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿತು. ಭಾರತ ಸ್ವತಂತ್ರಗೊಂಡಾಗ, ಬರಾಕ್ ಕಣಿವೆಯ ಸಮುದ್ರ ಪ್ರವೇಶವನ್ನು ಕಡಿತಗೊಳಿಸುವ ಗಡಿಯನ್ನು ಎಳೆಯಲು ಕಾಂಗ್ರೆಸ್ ಅವಕಾಶ ಮಾಡಿಕೊಟ್ಟಿತು'

## ಇರಾನ್‌ನಿಂದ ಕ್ಷಿಪಣಿದಾಳಿ

ಬೆಂಗಳೂರು: ಮಧ್ಯಪೂರ್ವದಲ್ಲಿ ಉದ್ವಿಗ್ನತೆ ತೀವ್ರಗೊಳ್ಳುತ್ತಿರುವ ನಡುವೆಯೇ ಸೌದಿ ಅರೇಬಿಯಾದಲ್ಲಿರುವ ಅಮೆರಿಕದ ಸೈನಿಕ ನೆಲೆಯಲ್ಲಿ ಇರಾನ್ ಕ್ಷಿಪಣಿ ದಾಳಿ ನಡೆಸಿದ್ದು. ಈ ದಾಳಿಯಲ್ಲಿ ಅಮೆರಿಕ ವಾಯುಪಡೆಯ ಐದು ಇಂಧನ ಟ್ಯಾಂಕರ್ ವಿಮಾನಗಳಿಗೆ ಹಾನಿಯಾಗಿದೆ ಎಂದು ವರದಿಗಳಿಂದ ತಿಳಿದುಬಂದಿದೆ.

ಅಮೆರಿಕದ ಇಬ್ಬರು ಅಧಿಕಾರಿಗಳ ಹೇಳಿಕೆಯನ್ನು ಉಲ್ಲೇಖಿಸಿ ದಿ ವಾಲ್ ಸ್ಟ್ರೀಟ್ ಜರ್ನಲ್ ಈ ಕುರಿತು ವರದಿ ಮಾಡಿದೆ. ವರದಿ ಪ್ರಕಾರ, ಸೌದಿ ಅರೇಬಿಯಾದಲ್ಲಿರುವ ಪ್ರಿನ್ಸ್ ಸುಲ್ತಾನ್ ಏರ್‌ಬೇಸ್ ನೆಲದಲ್ಲಿದ್ದ ಅಮೆರಿಕದ ವಾಯುಪಡೆಯ 5 ಟ್ಯಾಂಕರ್ ವಿಮಾನಗಳು ಇರಾನ್ ನಡೆಸಿದ ಕ್ಷಿಪಣಿ ದಾಳಿಯಿಂದ ಹಾನಿಗೊಳಗಾಗಿವೆ ಎಂದು ತಿಳಿದುಬಂದಿದೆ.

ವಿಮಾನಗಳು ಸಂಪೂರ್ಣವಾಗಿ ನಾಶವಾಗಿಲ್ಲ ಎನ್ನಲಾಗುತ್ತಿದ್ದು, ಹಾನಿಗೊಳಗಾದ ವಿಮಾನಗಳ ದುರಸ್ತಿ ಕಾರ್ಯ ನಡೆಯುತ್ತಿದೆ ಎಂದು ವರದಿಗಳು ತಿಳಿಸಿವೆ.

ಏತನ್ಮಧ್ಯೆ ಇರಾಕ್‌ನ ಪಶ್ಚಿಮ ಭಾಗದಲ್ಲಿ ಅಮೆರಿಕದ ಸೈನಿಕ ರಿಫ್ಯೂಯಲಿಂಗ್ ವಿಮಾನ ಪತನಗೊಂಡು ಅದರಲ್ಲಿದ್ದ ಆರು ಸಿಬ್ಬಂದಿ ಸಾವನ್ನಪ್ಪಿದ್ದಾರೆ ಎಂದು ಅಮೆರಿಕ ಸೇನೆ ದೃಢಪಡಿಸಿದೆ.

# ಅಡುಗೆ ಎಣ್ಣೆ ದರ ಏರಿಕೆ ಸಾಧ್ಯತೆ

ಬೆಂಗಳೂರು: ಇರಾನ್–ಇಸ್ರೇಲ್ ನಡುವಿನ ಸಂಘರ್ಷ ಈಗ ದೇಶದಲ್ಲಿ ಗ್ಯಾಸ್ ಎಮರ್ಜೆನ್ಸಿ ಸೃಷ್ಟಿ ಮಾಡಿದೆ. ಈಗಾಗಲೇ ಗೃಹ ಬಳಕೆ ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆಯಾಗಿದ್ದು, ಇದೀಗ ಅಡುಗೆ ಎಣ್ಣೆ ಬೆಲೆಯೂ ಏರಿಕೆ ಆಗಿದೆ.

ಗೃಹ ಬಳಕೆಯ 14.2 ಕೆಜಿ ಗ್ಯಾಸ್ ಸಿಲಿಂಡರ್ ಬೆಲೆಯಲ್ಲಿ 60 ರೂಪಾಯಿ ಏರಿಕೆ ಮಾಡುವ ಮೂಲಕ ಸಾಮಾನ್ಯ ವರ್ಗದ ಬೆನ್ನಮೇಲೆ ಮತ್ತೊಂದು ಭಾರ ಹೇರಲಾಗಿತ್ತು. ಈಗ ಅಡುಗೆ ಎಣ್ಣೆ ಬೆಲೆ ಕೂಡ ಏರಿಸಿ ಮತ್ತಷ್ಟು ಭಾರ ಸಾಮಾನ್ಯ ವರ್ಗದ ಕುಟುಂಬಗಳ ಮೇಲೆ ಹೇರಲಾಗಿದೆ.ಇರಾನ್ ಇಸ್ರೇಲ್ ಯುದ್ಧದ ಹಿನ್ನಲೆ ಅಡುಗೆ ಎಣ್ಣೆ ಪೂರೈಕೆಯಲ್ಲಿಯೂ ಸಹ ವ್ಯತ್ಯಾಸವಾಗಿದ್ದು, ಲೀಟರ್‌ಗೆ 8 ರಿಂದ 10 ರೂ. ಏರಿಕೆಯಾಗಿದೆ.

ಒಂದು ಲೀಟರ್ ಎಣ್ಣೆಗೆ 10 ರೂ. ಜಾಸ್ತಿ ಆಗಿದೆ. ಯುಗಾದಿ ಹಬ್ಬದ ಸಮಯದಲ್ಲಿ ಗ್ರಾಹಕರು ವ್ಯಾಪಾರಸ್ಥರೊಂದಿಗೆ ಜಗಳ ಮಾಡುವ ಸ್ಥಿತಿ ಉಂಟಾಗಿದೆ ಎಂದಿದ್ದಾರೆ. ಧಾರವಾಡದಲ್ಲಿಯೂ ಕುಕ್ಕಿಂಗ್ ಆಯಿಲ್ ದರ ಏರಿಕೆಯಾಗಿದ್ದು, ದರ ಏರಿಕೆ ನಿಯಂತ್ರಣಕ್ಕೆ ಅಡುಗೆ ಎಣ್ಣೆಯನ್ನು ಪಡಿತರ ಅಂಗಡಿಯಲ್ಲಿ ನೀಡಬೇಕು ಎಂದು ದಿನಸಿ ಅಂಗಡಿ ಮಾಲೀಕ ಜಾವಿದ್ ಅಥೋನಿ ಹೇಳಿದ್ದಾರೆ.

ಇತ್ತ ಕಲಬುರಗಿಯಲ್ಲಿ ಪ್ರತಿ ಅಡುಗೆ ಎಣ್ಣೆ ಪ್ಯಾಕೆಟ್ ಮೇಲೆ 10 ರಿಂದ 12 ರೂಪಾಯಿಗಳಷ್ಟು ದರ ಏರಿಕೆಯಾ ಗಿದ್ದು, ಒಂದು ವೇಳೆ ಯುದ್ಧ ಹೀಗೆ ಮುಂದುವರೆದರೆ ಪ್ರತಿ ಪ್ಯಾಕೆಟ್ ಮೇಲೆ ಇನ್ನು 10 ರೂಪಾಯಿ ಏರಿಕೆಯಾಗುವುದಾಗಿ ವ್ಯಾಪಾರಸ್ಥರು ಹೇಳುತ್ತಿದ್ದಾರೆ. ಈ ಮೂಲಕ ಇಷ್ಟು ದಿನ ಸಿಲಿಂಡರ್ ದರದ ಹೊಡೆತದಿಂದ ಸಂಕಷ್ಟದಲ್ಲಿದ್ದ ಜನ ಸಾಮಾನ್ಯರಿಗೆ ಇದೀಗ ಅಡುಗೆ ಎಣ್ಣೆಯ ಬೆಲೆ ಏರಿಕೆ ಬಿಸಿ ಸಹ ತಟ್ಟಿದೆ.

ಯಾದಗಿರಿಯಲ್ಲೂ ಅಡುಗೆ ಎಣ್ಣೆ ಮೇಲೆ ಯುದ್ಧದ ಎಫೆಕ್ಟ್ ಆಗಿದೆ. ಪಾಮ್ ಆಯಿಲ್ ಬೆಲೆ 10 ರೂ ಏರಿಕೆಯಾದ್ರೆ, ಸನ್ ಫ್ಲಾವರ್ ಆಯಿಲ್ ಬೆಲೆ 6 ರೂ ಏರಿಕೆಯಾಗಿದೆ. ಇದರಿಂದ ಜನರಿಗೆ ಬೆಲೆ ಏರಿಕೆ ಬಿಸಿ ತಟ್ಟಿದೆ.

15/03/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಫೋನ್‌ಪೇ ಪರಿಚಯಿಸಿದ 'ಆನ್-ದಿ-ಗೋ' ಕಾರ್ಡ್

ಬೆಂಗಳೂರು

ಡಿಜಿಟಲ್ ಪಾವತಿ ವೇದಿಕೆಯಾದ ಫೋನ್‌ಪೇ ಸಾರ್ವಜನಿಕ ಸಾರಿಗೆ ಪ್ರಯಾಣಿಕರಿಗೆ ಅನುಕೂಲವಾಗುವಂತೆ ರೂಪೇ ಆನ್-ದಿ-ಗೋ ರಾಷ್ಟ್ರೀಯ ಸಾಮಾನ್ಯ ಚಲನವಲನ ಕಾರ್ಡ್ ಅನ್ನು ಪರಿಚಯಿಸಿದೆ. ಭಾರತ ಸರ್ಕಾರದ ಒಂದು ರಾಷ್ಟ್ರ ಒಂದು ಕಾರ್ಡ್ ಯೋಜನೆಗೆ ಬಲ ನೀಡುವ ಉದ್ದೇಶದಿಂದ ಈ ಕಾರ್ಡ್ ಬಿಡುಗಡೆ ಮಾಡಲಾಗಿದೆ. ದೇಶದಾದ್ಯಂತ ಸಾರಿಗೆ ಪಾವತಿಗಳನ್ನು ಡಿಜಿಟಲೀಕರಣಗೊಳಿಸುವಲ್ಲಿ ಇದು ಪ್ರಮುಖ ಪಾತ್ರ ವಹಿಸುವ ನಿರೀಕ್ಷೆಯಿದೆ.
ಫೋನ್‌ಪೇ ಆನ್-ದಿ-ಗೋ ಕಾರ್ಡ್ ಅನ್ನು ಎಲ್ಲ ರೀತಿಯ ಸಾರಿಗೆ ಸೇವೆಗಳಿಗೆ ಬಳಸಬಹುದಾದ ಕಾರ್ಡ್ ಆಗಿ ವಿನ್ಯಾಸಗೊಳಿಸಲಾಗಿದೆ. ಮೆಟ್ರೋ, ಬಸ್, ರೈಲು, ಟೋಲ್ ಹಾಗೂ ಪಾರ್ಕಿಂಗ್ ಸೇರಿದಂತೆ ರಾಷ್ಟ್ರೀಯ ಸಾಮಾನ್ಯ ಚಲನವಲನ ಕಾರ್ಡ್ ಸಕ್ರಿಯಗೊಂಡಿರುವ ಎಲ್ಲಾ ಸೇವೆಗಳಲ್ಲಿ ಟ್ಯಾಪ್ ಮಾಡಿ ಪಾವತಿಸಿ ವಿಧಾನದಲ್ಲಿ ತ್ವರಿತವಾಗಿ ಹಣ ಪಾವತಿಸಬಹುದು.




ಈ ಕಾರ್ಡ್‌ನ ಪ್ರಮುಖ ವಿಶೇಷತೆ ಎಂದರೆ ಇಂಟರ್ನೆಟ್ ಅಥವಾ ನೆಟ್‌ವರ್ಕ್ ಸಂಪರ್ಕವಿಲ್ಲದೆಯೂ ಪಾವತಿ ಮಾಡಬಹುದಾಗಿದೆ. ಕಾರ್ಡ್‌ನ ಚಿಪ್‌ನಲ್ಲಿ ಹಣ ಸಂಗ್ರಹವಾಗುವ ಮುಂಗಡ ಮೌಲ್ಯ ವ್ಯವಸ್ಥೆಯನ್ನು ಬಳಸಿರುವುದರಿಂದ ಸಂಪೂರ್ಣವಾಗಿ ಆಫ್‌ಲೈನ್ ಸಂಪರ್ಕರಹಿತ ಪಾವತಿಗಳು ಸಾಧ್ಯವಾಗುತ್ತವೆ. ಬಳಕೆದಾರರು ಈ ಕಾರ್ಡ್‌ಗೆ ಗರಿಷ್ಠ ಎರಡು ಸಾವಿರ ರೂಪಾಯಿ ವರೆಗೆ ಬ್ಯಾಲೆನ್ಸ್ ಲೋಡ್ ಮಾಡಬಹುದು. ಆಫ್‌ಲೈನ್ ವಹಿವಾಟಿನ ಗರಿಷ್ಠ ಮಿತಿ ಐದು ನೂರು ರೂಪಾಯಿ ಆಗಿರುತ್ತದೆ. ಈ ಹೊಸ ಕಾರ್ಡ್ ಪರಿಚಯದಿಂದ ದೇಶದಾದ್ಯಂತ ಲಕ್ಷಾಂತರ ಪ್ರಯಾಣಿಕರ ದೈನಂದಿನ ಪ್ರಯಾಣ ಇನ್ನಷ್ಟು ಸುಲಭ ಹಾಗೂ ವೇಗವಾಗುವ ನಿರೀಕ್ಷೆಯಿದೆ.

# ರಾಜು ಸಮುದಾಯದ ಏಳಿಗಾಗಿ ಒಗ್ಗೂಡಿ: ರವಿ ಬೋಸರಾಜು ಕರೆ



ಬೆಂಗಳೂರು

ನಮ್ಮ "ರಾಜು" ಸಮುದಾಯದ ಆರ್ಥಿಕ, ಸಾಮಾಜಿಕ, ರಾಜಕೀಯ ಅಭಿವೃದ್ಧಿಗಾಗಿ ಎಲ್ಲರೂ ಒಗ್ಗೂಡಬೇಕಾದ ಅವಶ್ಯಕತೆ ಇದೆ ಎಂದು ರಾಜಕೀಯ ಮುಖಂಡ ರವಿ ಬೋಸರಾಜು ಹೇಳಿದರು.
ರಾಜು ಕ್ಷತ್ರೀಯ ಸಂಘವು ಯುಗಾದಿ ಹಬ್ಬದ ಪ್ರಯುಕ್ತ ಜಯನಗರದ ಚಾಮರಾಜು ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, "ನಮ್ಮ ಸಮುದಾಯವು ಹಿಂದುಳಿದ ವರ್ಗಗಳಿಗೆ ಸೇರಲಿದೆ. ರಾಜ್ಯದಲ್ಲಿ 48 ಲಕ್ಷ ಜನರು ಈ ಹಿಂದುಳಿದ ವರ್ಗದಲ್ಲಿದ್ದಾರೆ. ನಮ್ಮಲ್ಲೇ ಆರು ಸಂಘಟನೆಗಳಿವೆ. ನಾವು ಪಕ್ಷಬೇಧ ಮರೆತು, ಸಮುದಾಯದ ಏಳಿಗಾಗಿ ಒಂದೇ ಸಂಘಟನೆಯನ್ನು ಬಲಿಷ್ಟ ಪಡಿಸಿ ಮುನ್ನಡೆಸಿಕೊಂಡು ಹೋಗಬೇಕಿದೆ" ಎಂದರು.
"ನಮ್ಮ ಸಮುದಾಯ ಒಳ್ಳೆಯ ಇತಿಹಾಸವನ್ನು ಹೊಂದಿದೆ. ಶ್ರೀಕೃಷ್ಣ ದೇವರಾಯರು ನಮ್ಮ ಜನಾಂಗಕ್ಕೆ ಸೇರಿದರಾಗಿದ್ದಾರೆ. ಸರಕಾರದ ಸವಲತ್ತುಗಳನ್ನು ನಾವು ಪಡೆದುಕೊಳ್ಳಬೇಕಾದರೆ, ನಾವು ಒಗ್ಗೂಡಬೇಕಿದೆ. ನಮ್ಮ ಸಮುದಾಯದವರಲ್ಲಿ ಉನ್ನತ ವ್ಯಾಸಂಗ ಮಾಡಿಕೊಂಡು ಉತ್ತಮ ಸ್ಥಾನ-ಮಾನ ಪಡೆದುಕೊಂಡಿರುವುದನ್ನು ಕಂಡು ಖುಷಿಯಾಗುತ್ತಿದೆ" ಎಂದು ಹರ್ಷ ವ್ಯಕ್ತಪಡಿಸಿದರು.
ಅಖಿಲ ಭಾರತೀಯ ಕ್ಷತ್ರೀಯ ಒಕ್ಕೂಟದ ಅಧ್ಯಕ್ಷರಾದ ಪಿ.ವಿ.ಗಿರಿ ಮಾತನಾಡಿ, "ನಮ್ಮ ಸಮುದಾಯದಲ್ಲಿರುವ ಜನರ ಸಂಖ್ಯೆ ತೀರಾ ಕಡಿಮೆ ಇದೆ. ಇದರಲ್ಲೂ ನಾವು ಒಡಕು ತೋರಿಸಿಕೊಳ್ಳಬಾರದು. ಎಲ್ಲರೂ ಸಮುದಾಯದ ಒಳಿತಿಗಾಗಿ ಒಗ್ಗೂಡಬೇಕು. ನಮ್ಮ ಸಮುದಾಯದವರು ಅನೇಕ ಮಂದಿ ವೈದ್ಯರಾಗಿರುವುದು ನಮ್ಮ ಸಮುದಾಯಕ್ಕೆ ಹೆಮ್ಮೆಯ ವಿಚಾರವಾಗಿದೆ. ಬಡವರ ಸೇವೆ ಮಾಡುವ ಮೂಲಕ ಹಿಂದುಳಿದವರ ಏಳಿಗೆಗಾಗಿ ಶ್ರಮಿಸುವಂತಾಗಲಿ" ಎಂದು ಶುಭ ಹಾರೈಸಿದರು.
ರಾಜು ಕ್ಷತ್ರೀಯ ಸಂಘದ ಪ್ರಧಾನ ಕಾರ್ಯದರ್ಶಿ ಪಿ.ಚಂದ್ರಶೇಖರ ರಾಜು ಮಾತನಾಡಿ, "ಜೀವದಾನ ಅತಿ ಶ್ರೇಷ್ಠ ದಾನವಾಗಿದೆ. ಇದು ವೈದ್ಯರಿಂದ ಮಾತ್ರ ಸಾಧ್ಯ. ವೈದ್ಯರಾದ ನೀವು, ಆಸೆಗಳಿಗೆ ಒಳಗಾಗಿ ಕೇವಲ ಶ್ರೀಮಂತರಿಗೆ ಮಾತ್ರ ಗುಣಮಟ್ಟದ ಚಿಕಿತ್ಸೆ ನೀಡುವಂತೆ ಆಗಬಾರದು. ಬಡವರಿಗೂ ಗುಣಮಟ್ಟ ಚಿಕಿತ್ಸೆ ಕಲ್ಪಿಸಿಕೊಡಿ" ಎಂದು ಮನವಿ ಮಾಡಿದರು.
ಇದೇ ವೇಳೆ ಸಮುದಾಯದ 50ಕ್ಕೂ ಹೆಚ್ಚಿನ ವೈದ್ಯರನ್ನು ಗುರುತಿಸಿ ಗೌರವಿಸಲಾಯಿತು. ಸಂಘದ ಅಧ್ಯಕ್ಷ ಗಣೇಶ ರಾಜು, ಕಾರ್ಯಾಧ್ಯಕ್ಷ ಕೆ.ಬಾಬು ರಾಜು ಇತರರು ಇದ್ದರು.

# ನೊಂದವರ ಕಣ್ಣೊರೆಸುತ್ತಿದೆ ಧರ್ಮಸ್ಥಳದ ವಾತ್ಸಲ್ಯ ಯೋಜನೆ

ತಿಪಟೂರು

ಸಮಾಜದಲ್ಲಿ ನೊಂದವರನ್ನು ಗುರುತಿಸಿ ಅವರಿಗೆ ಸಾಂತ್ವನ ನೀಡುವ ಜೊತೆಗೆ, ಸೂರು ಇಲ್ಲದವರಿಗೆ ಮನೆ ನಿರ್ಮಿಸಿಕೊಡುವ ಮೂಲಕ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಮನುಷ್ಯತ್ವಕ್ಕೆ ಸಾಕ್ಷಿಯಾಗಿದೆ ಎಂದು ತುಮಕೂರು-1 ಜಿಲ್ಲಾ ನಿರ್ದೇಶಕ ಸತೀಶ್ ಸುವರ್ಣ ತಿಳಿಸಿದರು.
ರಂಗಾಪುರ ವಲಯದ ಕೆಂಕೆರೆ ಕಾರ್ಯಕ್ಷೇತ್ರದ ಗೌರಮ್ಮ ಎಂಬುವರಿಗೆ ವಾತ್ಸಲ್ಯ ಕಾರ್ಯಕ್ರಮದಡಿ ನಿರ್ಮಿಸಲಾಗಿದ್ದ ನೂತನ ಮನೆಯನ್ನು ಹಸ್ತಾಂತರಿಸಿ ಅವರು ಮಾತನಾಡಿದರು.
ಧರ್ಮಸ್ಥಳದ ಚತುರ್ವಿಧ ದಾನಗಳ ಸಾರ್ಥಕತೆ: ಶ್ರೀ ಕ್ಷೇತ್ರ ಧರ್ಮಸ್ಥಳಕ್ಕೆ 800 ವರ್ಷಗಳ ಸುದೀರ್ಘ ಇತಿಹಾಸವಿದೆ. ಇಲ್ಲಿ ಅನ್ನದಾನ, ವಿದ್ಯಾದಾನ, ಔಷಧ ದಾನ ಹಾಗೂ ಅಭಯದಾನ ಎಂಬ ಚತುರ್ವಿಧ ದಾನಗಳು ನಿರಂತರವಾಗಿ ನಡೆಯುತ್ತಿವೆ. "ಈಗಾಗಲೇ ರಾಜ್ಯದಾದ್ಯಂತ 700ಕ್ಕೂ ಅಧಿಕ ವಾತ್ಸಲ್ಯ ಮನೆಗಳನ್ನು ನಿರ್ಮಿಸಲಾಗಿದೆ. ಅರ್ಹರಿಗೆ ಪ್ರತಿ ತಿಂಗಳು ಮಾಶಾಸನ ನೀಡುವ ಜೊತೆಗೆ ವಾಸಿಸಲು ಸೂರು ಕಲ್ಪಿಸುತ್ತಿರುವುದು ನೊಂದವರ ಬಾಳಿನಲ್ಲಿ ಹೊಸ ಭರವಸೆ ಮೂಡಿಸಿದೆ," ಎಂದು ಸತೀಶ್ ಸುವರ್ಣ ಹೇಳಿದರು.



ಆಧುನಿಕ ಸಮಾಜದ ಮಾತೃಶಕ್ತಿ: ಹಳೆ ವಿದ್ಯಾರ್ಥಿ ಸಂಘದ ಅಧ್ಯಕ್ಷ ಶಶಿಧರ್ ಮಾತನಾಡಿ, "ಡಾ. ಡಿ. ವೀರೇಂದ್ರ ಹೆಗ್ಗಡೆ ಮತ್ತು ಹೇಮಾವತಿ ವಿ. ಹೆಗ್ಗಡೆಯವರು ನೊಂದವರ ಬಾಳಿಗೆ ಬೆಳಕಾಗುವ ಮೂಲಕ ಆಧುನಿಕ ಸಮಾಜದ ಮಾತೃಶಕ್ತಿಯಾಗಿ ಹೊರಹೊಮ್ಮಿದ್ದಾರೆ. ಇಂತಹ ಸೇವಾ ಕಾರ್ಯಗಳು ನಿರಂತರವಾಗಿ ನಡೆಯಲಿ," ಎಂದು ಆಶಿಸಿದರು.

# ಮಷಮ್ಮ ದೇವಿ ವಿಗ್ರಹ ಪ್ರತಿಷ್ಠಾಪನೆ



ಬೇತಮಂಗಲ

ಟಿ. ಗೊಲ್ಲಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಅಯ್ಯಪಲ್ಲಿ ಗ್ರಾಮದಲ್ಲಿ ಜೀರ್ಣೋದ್ಧಾರಗೊಂಡ ಮಷಮ್ಮ ದೇವಿಯ ಹಳೆಯ ದೇವಾಲಯದ ಪುನರ್ ಪ್ರತಿಷ್ಠಾಪನೆ ಹಾಗೂ ವಿಶೇಷ ಪೂಜಾ ಕಾರ್ಯಕ್ರಮಗಳು ಅದ್ದೂರಿಯಾಗಿ ನೆರವೇರಿದವು.
ಐದು ಗ್ರಾಮಗಳಲ್ಲಿ ದೇವಿಯ ಮೆರವಣಿಗೆ: ದೇವಸ್ಥಾನವನ್ನು ದುರಸ್ತಿಗೊಳಿಸಿ, ಹಳೆಯದಾಗಿದ್ದ ದೇವರ ಮೂರ್ತಿಗೆ ನೂತನ ಬಣ್ಣಗಳನ್ನು ಹಚ್ಚಿ ನವೀಕರಿಸಲಾಗಿತ್ತು. ಗುರುವಾರ ಸಂಜೆ ಈ ಸುಂದರ ವಿಗ್ರಹವನ್ನು ಐದು ಗ್ರಾಮಗಳ ಪ್ರಮುಖ ಬೀದಿಗಳಲ್ಲಿ ಮಂಗಳವಾದ್ಯಗಳೊಂದಿಗೆ ಮೆರವಣಿಗೆ ಮಾಡಲಾಯಿತು. ಗ್ರಾಮದ ಮುಖ್ಯ ದ್ವಾರದಲ್ಲಿ ತೋರಣಗಳನ್ನು ಕಟ್ಟಿ, ಊರಿನ ಸಂಪ್ರದಾಯದಂತೆ ದೇವಿಯನ್ನು ಭಕ್ತಿಯಿಂದ ಬರಮಾಡಿಕೊಳ್ಳಲಾಯಿತು. ದೇವಸ್ಥಾನವನ್ನು ವಿವಿಧ ಪುಷ್ಪಗಳು ಹಾಗೂ ವಿದ್ಯುತ್ ದೀಪಗಳಿಂದ ಅತ್ಯಾಕರ್ಷಕವಾಗಿ ಅಲಂಕರಿಸಲಾಗಿತ್ತು.
ಧಾರ್ಮಿಕ ವಿಧಿವಿಧಾನಗಳು: ಶುಕ್ರವಾರ ಮುಂಜಾನೆಯಿಂದಲೇ ದೇವಾಲಯದಲ್ಲಿ ಯಜ್ಞ-ಹೋಮಗಳು ಆರಂಭವಾದವು. ದೇವಿಗೆ ವಿಶೇಷ ಅಭಿಷೇಕ ಮತ್ತು ಅರ್ಚನೆಗಳನ್ನು ನೆರವೇರಿಸಲಾಯಿತು. ಮಧ್ಯಾಹ್ನ 12 ಗಂಟೆಗೆ ನಡೆದ ಮಹಾಮಂಗಳಾರತಿಯಲ್ಲಿ ನೂರಾರು ಭಕ್ತರು ಪಾಲ್ಗೊಂಡು ದೇವಿಯ ಕೃಪೆಗೆ ಪಾತ್ರರಾದರು. ಪೂಜೆಯ ನಂತರ ಭಕ್ತಾದಿಗಳಿಗೆ ತೀರ್ಥ ಪ್ರಸಾದ ವಿನಿಯೋಗ ಮಾಡಲಾಯಿತು.
ಈ ಶ್ರದ್ಧಾ ಭಕ್ತಿಯ ಪೂಜಾ ಕಾರ್ಯಕ್ರಮದಲ್ಲಿ ಊರಿನ ಹಿರಿಯರಾದ ಗುರುಮೂರ್ತಿ ರೆಡ್ಡಿ, ರಾಮಕೃಷ್ಣಪ್ಪ, ಚಂದ್ರಶೇಖರ್ ರೆಡ್ಡಿ, ಧನವಿಜೇಂದ್ರ ರೆಡ್ಡಿ, ವೆಂಕಟೇಶ್, ಅಂಬರೀಶ್, ಗೋವಿಂದಪ್ಪ, ಸುಂದರಪ್ಪ, ಪುಟ್ಟರಾಜ್, ಲವಕುಮಾರ್, ವಿವೇಕ್, ಕೇಶವ ರೆಡ್ಡಿ, ಸೌಂದರ್, ಕೋದಂಡ ರೆಡ್ಡಿ, ಆನಂದಪ್ಪ ಸೇರಿದಂತೆ ಗ್ರಾಮದ ಅನೇಕ ಮುಖಂಡರು ಹಾಗೂ ಮಹಿಳೆಯರು ಭಾಗವಹಿಸಿದ್ದರು.

# ಪಾವಗಡ- ಮಳವಳ್ಳಿ ತಂಗುದಾಣಗಳು ನಿರ್ಮಿಸುವಲ್ಲಿ ಕೋಟ್ಯಾಂತರ ರೂ ಅವ್ಯವಹಾರ!

ವಡ್ಡೇ ಶ್ರೀನಿವಾಸ್
ಪಾವಗಡ

ಮಳವಳ್ಳಿಯ ಕರ್ನಾಟಕ ರಾಜ್ಯ ಹೆದ್ದಾರಿ ಪ್ರಾಧಿಕಾರವು ರಸ್ತೆಯು ನಿರ್ಮಿಸುವಾಗ ಅಕ್ರಮ ಅವ್ಯವಹಾರ ಹಣದಾಸೆಗೋಸ್ಕರ ಹೆದ್ದಾರಿ ನಿಯಮಗಳು ಗಾಳಿಗೆ ತೂರಿ ಪ್ರಾಧಿಕಾರದ ಅಧಿಕಾರಿಗಳ ಸ್ವಲಾಭಕ್ಕಾಗಿ ತಂಗುದಾಣಗಳು ನಿರ್ಮಿಸಿರುವುದು ಸ್ಪಷ್ಟವಾಗಿ ಕಾಣುತ್ತದೆ.
ಪಾವಗಡ- ಮಳವಳ್ಳಿ ಹೆದ್ದಾರಿ ರಸ್ತೆಯಲ್ಲಿ ಸುಮಾರು ಮೂವತ್ತು ತಂಗುದಾಣಗಳು ನಿರ್ಮಿಸಿದ್ದು, ಅವುಗಳನ್ನು ಪ್ರಾಧಿಕಾರಿ ಅಧಿನಿಯಮಗಳು ಪ್ರಕಾರ ನಿರ್ಮಿಸಿರುವುದಿಲ್ಲ, ಗ್ರಾಮದ ಪ್ರತಿ ಗೇಟುಗಳಲ್ಲಿ ಕಳಪೆ ತಂಗುದಾಣಗಳು ಎದ್ದು ಕಾಣುತ್ತವೆ, ಆಯಾ ಊರಿನ ಗೇಟ್ ಗಳಲ್ಲಿ ಜನರಿಗೆ ಅನುಕೂಲವಾಗುವಂತ ತಂಗುದಾಣಗಳು ನಿರ್ಮಿಸಬೇಕಿತ್ತು ಆದರೆ ಆಯಾ ಗ್ರಾಮಗಳ ಜನರಿಗೆ ಸೌಲಭ್ಯಕ್ಕೆ ಸಿಗದ ರೀತಿಯಲ್ಲಿ ನಿರ್ಮಿಸಿ ಜನರ ಹಕ್ಕುಗಳನ್ನು ಕಸಿದು ಅಪರಾಧ ವೆಸಗಿರುತ್ತಾರೆ ಎಂದು ಮೇಲ್ನೋಟಕ್ಕೆ ಕಾಣಲಾಗುತ್ತದೆ.
ಕಳೆದ 10- 12ವರ್ಷಗಳ ಹಿಂದೆ ಕರ್ನಾಟಕ ಸರ್ಕಾರವು ಪಾವಗಡ ಮಳವಳ್ಳಿ ರಾಜ್ಯ ಹೆದ್ದಾರಿ ರಸ್ತೆಯನ್ನು ಸುಮಾರು ರೂ ಸಾವಿರಾರು ಕೋಟಿ ಟೆಂಡರ್ ಕರೆದು ರಾಜ್ಯದ ಹಲವು ಪ್ರಾಂತ್ಯಗಳ ಜನರ ದೂರದ ಪ್ರಯಾಣವು ಸುಗಮವಾಗಿ ಸಾಗಲು, ಸಾಮಾಗ್ರಿಗಳ ರಫ್ತು,ಆಮದು, ಸುಲುಭ ರೀತಿಯಾಗಲು, ಇಂತಹ ಬೃಹತ್ ರಸ್ತೆ ಕಾಮಗಾರಿಗಳು ಆಳುವ ಸರ್ಕಾರಗಳು ಹಮ್ಮಿಕೊಳ್ಳುವುದು ಉತ್ತಮ ಯೋಜನೆಗಳಾಗಿದ್ದು, ಆದರೆ ಪಾವಗಡ ಪಟ್ಟಣದಲ್ಲಿ ಮಾತ್ರ ಗುಜರಿ ಅಂಗಡಿ ತರಹದ ರೀತಿಯಲ್ಲಿ ಬಳಕೆ ಮಾಡಿಕೊಳ್ಳುತ್ತಿದ್ದರು ಕೆಶಿಪ್ ಜಿಲ್ಲಾ ಅಧಿಕಾರಿಗಳು ಮೌನ ವಹಿಸಿರುವುದು ನಿರ್ಲಕ್ಷ್ಯ ಆಡಳಿತದ ಕನ್ನಡಿಯಾಗಿದೆ.




ಜಿಲ್ಲೆಯ ಕೆಶಿಪ್ ಅಧಿಕಾರಿಗಳು ರಸ್ತೆ ನಿರ್ಮಿಸುವವ ವೇಳೆ ಗುತ್ತಿಗೆದಾರನಿಂದ ಕೈಚಳಕ ನಡಿಸಿ ರಸ್ತೆ ಮತ್ತು ತಂಗುದಾಣಗಳು ನಿಯಮಬಾಹಿರ, ಕಳಪೆ ಮಾಡಿ ಕೋಟ್ಯಂತರ ರೂ ಅವ್ಯವಹಾರ ನೆಡಿಸಿದ್ದಾರೆ ಎಂದು ನಿರ್ಮಿಸಿದ ಕಟ್ಟಡಗಳೇ ಉತ್ತರಿಸುತ್ತವೆ. ಆಂಧ್ರ ಗಡಿ ನಾಗಲಾಪುರ ಗೇಟಿನ ಕೆಶಿಪ್ 2 ನೇ ಯೋಜನೆಯ ಪ್ರಯಾಣಿಕರ ತಂಗುದಾಣವು ಖಾಸಗೀ ರೈತನ ಜಮೀನಿನಲ್ಲಿ ನಿರ್ಮಾಣ ಮಾಡಿದ್ದು ರೈತನು ಪರಿಹಾರ ಕೊಡದೆ, ನಿರ್ಮಿಸುವ ವೇಳೆ ಅಧಿಕಾರಿಗಳು ನಷ್ಟ ಪರಿಹಾರ ಕಲ್ಪಿಸುತ್ತೇವೆ ಎಂದು ಹೇಳಿದ್ದು, ನಿರ್ಮಿಸಿ 12 ವರ್ಷಗಳಾದರೂ ಕೆಶಿಪ್ 2ನೇ ಯೋಜನೆ ಅಧಿಕಾರಿಗಳು ಪರಿಹಾರ ಕೂಡಲಿಲ್ಲ, ಯಾರ ಬಳಿ ಹೋಗಿ ಕೇಳ್ಬೇಕೊ ಅರ್ಥವಾಗುತ್ತಿಲ್ಲ, ತಂಗುದಾನ ಯಾವೊಬ್ಬ ಪ್ರಯಾಣಿಕನಿಗೂ ಅನುಕೂಲವಾಗದ ರೀತಿಯಲ್ಲಿ ನಿರ್ಮಾಣ ಮಾಡಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು. ನಾಗಲಾಪುರ ಗೇಟಿಗೂ ಚಿಕ್ಕಹಳ್ಳಿ ದಿನ್ನೆಯ ತಂಗುದಾನಗಳಿಗೂ ಬಹಳ ಹತ್ತಿರವಿದ್ದು ಇವೆರಡು ಅವೈಜ್ಞಾನಿಕವಾಗಿ ನಿರ್ಮಿಸಿರುತ್ತಾರೆ, ಇಲ್ಲಿ ಎರಡು ತಂಗುದಾನಗಳು ನಿರ್ಮಿಸುವ ಅಗತ್ಯವೇ ಇಲ್ಲ,ಇಂತ ಯೋಜನೆಗಳು ರೂಪಿಸುವ ಇಂಜನಿಯರ್ ಗಳನ್ನು ಪ್ರಥಮವಾಗಿ ಅಮಾನತ್ತುಗೊಳಿಸಿ ಕ್ರಮ ಜರುಗಿಸಬೇಕಾಗಿದೆ.
ವಸತಿ ಶಾಲಾ ಶಿಕ್ಷಣ ಕ್ಷೇತ್ರವಾದ ದೊಡ್ಡಹಳ್ಳಿಯಲ್ಲಿ ಕೆಶಿಪ್ ರವರ ತಂಗುದಾಣವನ್ನು ಸರ್ಕಾರಿ ಪೌಡಶಾಲೆಯವರು ಅಕ್ರಮವಾಗಿ ಒತ್ತುವರಿ ಮಾಡಿ ತಂಗುದಾನವನ್ನು ಶಾಲಾ ಅವರಣದೊಳಗೆ ಕಲೆಹಾಕಿ ಏಕಾ ಏಕಿ ಆವರಣ ಗೋಡೆಯನ್ನು ನಿರ್ಮಿಸಿದರು ಜಿಲ್ಲೆಯ ಕೆಶಿಪ್ ಅಧಿಕಾರಿಗಳು ಮಾತ್ರ ಮೌನಕ್ಕೆ ಜಾರಿರುವುದು ದುರ್ದೈವ ಸಂಗತಿ ಒಂದು ಕಡೆಯಾದರೆ, ಚಿಕ್ಕಹಳ್ಳಿ ಗ್ರಾಮದ ಗೇಟಿನ ಕಳಪೆ ಕಾಮಗಾರಿಯಿಂದ ತಂಗುದಾಣ ಅಡಿಪಾಯ ಕುಸುದು ಮತ್ತು ಮತ್ತೊಂದು ಹಳ್ಳದಲ್ಲಿ ನಿರ್ಮಿಸಿ ಸರ್ಕಾರ ಹಣಕ್ಕೆ ಬೆಲೆಯೇ ಇಲ್ಲದಂತೆ ತಿಳಿಯಲಾಗುತ್ತದೆ.
ಪ್ರಮುಖ ಬಳ್ಳಾರಿ ಹೆದ್ದಾರಿ ರಸ್ತೆಯ ಗಂಗಸಾಗರ ಗೇಟ್‌ನಲ್ಲಿ, ಕೆಶಿಪ್ ರಸ್ತೆಗಿಂತ ಸರಿ ಸುಮಾರು 4-5 ಅಡಿ ಎತ್ತರದಲ್ಲಿ ತಂಗುದಾನ ನಿರ್ಮಿಸಿರುವುದು ಅವೈಜ್ಞಾನಿಕ ಕಾಮಗಾರಿಯಾಗಿರುತ್ತದೆ ಎಂದು ಸಾರ್ವಜನಿಕರು ಸಂಶಯ ವ್ಯಕ್ತಪಡಿಸುತ್ತಿದ್ದಾರೆ. ಹಾಗೆಯೇ ಸೂಲನಾಯಕನಹಳ್ಳಿ ಗೇಟ್ ಬಳಿ ಜಮೀನಿನ ಹಳ್ಳದಲ್ಲಿ ತಂಗುದಾಣ ಜನರ ಪ್ರಯೋಜನೆಗೆ ಬಾರದಂತೆ ನಿರ್ಮಿಸಿದ್ದು, ಸರ್ಕಾರದ ಮತ್ತು ಜನರ ತೆರಿಗೆ ಹಣ ಸಾಕಷ್ಟು ದುರುಪಯೋಗವಾಗಿರುವುದು, ಯೋಜನೆಯ ಬಳ್ಳಾರಿ ರಸ್ತೆಯಲ್ಲಿ ಸುಮಾರು 30 ತಂಗುದಾನಗಳು ಅವೈಜ್ಞಾನಿಕ ಕಳಪೆ ಕಾಮಗಾರಿಯಿಂದ ನಿರ್ಮಿಸಿದ ಎಲ್ಲಾ ಕೆಶಿಪ್ ಅಧಿಕಾರಿಗಳ ಮೇಲು ಕ್ರಮ ಜರುಗಿಸಿ ತಪ್ಪಿತಸ್ಥರಿಂದ ಹಣ ಹಿಂಪಡೆಯಬೇಕು ಎಂದು ಸಾರ್ವಜನಿಕರಲ್ಲಿ ವ್ಯಕ್ತವಾಗುತ್ತಿದೆ.

# 'ಎಐ ಏಜೆಂಟ್ಸ್ ಉದ್ಯಮದ ಯಶಸ್ಸಿಗೆ ಅಗತ್ಯ'

ಬೆಂಗಳೂರು

ವಿಶ್ವದ ಮೊದಲ ಸ್ಥಾನದಲ್ಲಿರುವ ಎಐ ಆಧಾರಿತ ಗ್ರಾಹಕ ಸಂಬಂಧ ನಿರ್ವಹಣಾ ಸಂಸ್ಥೆಯಾಗಿರುವ ಸೇಲ್ಸ್ ಫೋರ್ಸ್ ತನ್ನ ಇತ್ತೀಚಿನ ಸ್ಟೇಟ್ ಆಫ್ ಸೇಲ್ಸ್ ವರದಿ ಪ್ರಕಟಿಸಿದ್ದು, ಅದರ ಪ್ರಕಾರ ಭಾರತದ ಶೇ.91ರಷ್ಟು ಮಾರಾಟ ವೃತ್ತಿಪರರು ಎಐ ಏಜೆಂಟ್ಸ್ ಉದ್ಯಮದ ಯಶಸ್ಸನ್ನು ಮುನ್ನಡೆಸಲು ಅತ್ಯಂತ ಅಗತ್ಯವೆಂದು ಅಭಿಪ್ರಾಯಪಟ್ಟಿದ್ದಾರೆ. 2026ರ ಗುರಿಗಳನ್ನು ಸಾಧಿಸಲು ಹೊಸ ಕೋಟಾಗಳೊಂದಿಗೆ ಮಾರಾಟ ತಂಡಗಳು ಮುಂದಾಗುತ್ತಿರುವ ಸಂದರ್ಭದಲ್ಲಿ ಹೆಚ್ಚಿನ ಮಾರಾಟ ಸಾಧಿಸಲು ಅವರು ಎಐ ಏಜೆಂಟ್ಸ್ ಬಳಕೆಯತ್ತ ಮುಖ ಮಾಡುತ್ತಿರುವುದಾಗಿ ವರದಿ ತಿಳಿಸಿದೆ. ಈ ವರ್ಷ ಕಂಪನಿಗಳ ಬೆಳವಣಿಗೆಗೆ ಎಐ ಪ್ರಮುಖ ಪಾತ್ರ ವಹಿಸುವ ಸಾಧ್ಯತೆ ಇದೆ ಎಂದು ಸಮೀಕ್ಷೆ ಸೂಚಿಸಿದೆ.



ವರದಿ ಪ್ರಕಾರ, ಗ್ರಾಹಕರ ಬೇಡಿಕೆಗಳು ವೇಗವಾಗಿ ಬದಲಾಗುತ್ತಿರುವ ಹಿನ್ನೆಲೆಯಲ್ಲಿ ಅವುಗಳನ್ನು ಪೂರೈಸಲು ಮಾರಾಟ ತಂಡಗಳು ಸೀಮಿತ ಸಮಯ ಮತ್ತು ಸಂಪನ್ಮೂಲಗಳ ನಡುವೆ ಕಾರ್ಯನಿರ್ವಹಿಸುತ್ತಿವೆ.ಪೂರ್ಣ ಪ್ರಮಾಣದಲ್ಲಿ ಅಳವಡಿಕೆ ನಡೆದ ನಂತರ ಎಐ ಏಜೆಂಟ್ಸ್ ಸಂಶೋಧನೆಗೆ ಬೇಕಾಗುವ ಸಮಯವನ್ನು ಶೇ.45ರಷ್ಟು ಕಡಿಮೆ ಮಾಡುತ್ತದೆ ಮತ್ತು ಇಮೇಲ್ ರಚನೆಗೆ ಬೇಕಾಗುವ ಸಮಯವನ್ನು ಶೇ.38ರಷ್ಟು ಕಡಿಮೆ ಮಾಡುತ್ತದೆ ಎಂಬ ನಿರೀಕ್ಷೆಯಿದ್ದು, ಉತ್ಪಾದಕತೆಯಲ್ಲಿ ಉಂಟಾಗುತ್ತಿರುವ ಸಮಸ್ಯೆಗೆ ಕಾರಣ ಕೌಶಲ್ಯ ಕೊರತೆ ಅಲ್ಲ; ಬದಲಿಗೆ ಆಡಳಿತಾತ್ಮಕ ಅಡೆತಡೆಗಳೇ ಪ್ರಮುಖ ಕಾರಣವೆಂದು ಅಧ್ಯಯನ ಹೇಳಿದೆ. ಪೂರ್ಣ ಪ್ರಮಾಣದಲ್ಲಿ ಅಳವಡಿಕೆ ನಡೆದ ನಂತರ ಎಐ ಏಜೆಂಟ್ಸ್ ಸಂಶೋಧನೆಗೆ ಬೇಕಾಗುವ ಸಮಯವನ್ನು ಶೇ.45ರಷ್ಟು ಕಡಿಮೆ ಮಾಡುತ್ತದೆ ಮತ್ತು ಇಮೇಲ್ ರಚನೆಗೆ ಬೇಕಾಗುವ ಸಮಯವನ್ನು ಶೇ.38ರಷ್ಟು ಕಡಿಮೆ ಮಾಡುತ್ತದೆ ಎಂಬ ನಿರೀಕ್ಷೆಯಿದ್ದು, ಇದರಿಂದ ಮಾರಾಟ ತಂಡಗಳಿಗೆ ಹೆಚ್ಚು ಪರಿಣಾಮಕಾರಿ ಕೆಲಸಕ್ಕೆ ಸಮಯ ದೊರೆಯಲಿದೆ ಎಂದು ವರದಿ ತಿಳಿಸಿದೆ.

# 'ಗ್ಯಾಸ್ ಟ್ರಬಲ್ ಇಲ್ಲ'

ಬಂಗಾರಪೇಟೆ


ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ನಡೆಯುತ್ತಿರುವ ಯುದ್ಧದ ಹಿನ್ನೆಲೆಯಲ್ಲಿ ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂಬ ವದಂತಿಗಳು ಹರಡುತ್ತಿದ್ದು, ಸಾರ್ವಜನಿಕರು ಯಾವುದೇ ಕಾರಣಕ್ಕೂ ಆತಂಕ ಪಡುವ ಅಗತ್ಯವಿಲ್ಲ ಎಂದು ನಗರಸಭೆ ಪೌರಾಯುಕ್ತ ಸತ್ಯನಾರಾಯಣ ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜನರಲ್ಲಿ ಮನೆಮಾಡಿರುವ ಗೊಂದಲಗಳನ್ನು ನಿವಾರಿಸಲು ಈ ಕೆಳಗಿನ ಪ್ರಮುಖ ಅಂಶಗಳನ್ನು ತಿಳಿಸಿದ್ದಾರೆ. ಸಾಕಷ್ಟು ದಾಸ್ತಾನು ಲಭ್ಯ:



ಜಿಲ್ಲೆಯಲ್ಲಿ ಗೃಹ ಬಳಕೆಯ ಎಲ್.ಪಿ.ಜಿ ಗ್ಯಾಸ್ ದಾಸ್ತಾನು ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದೆ. ಪೂರೈಕೆಯಲ್ಲಿ ಯಾವುದೇ ಅಡಚಣೆ ಉಂಟಾಗಿಲ್ಲ. ಹಾಗಾಗಿ, ಸಾರ್ವಜನಿಕರು ಅನಗತ್ಯವಾಗಿ ಭಯಭೀತರಾಗಬಾರದು ಎಂದು ಅವರು ಮನವಿ ಮಾಡಿದ್ದಾರೆ.

# ಸಾಲದಿಂದ ಸರ್ಕಾರ ನಡೆಸಲು ಸಾಧ್ಯವೆ?

ತುಮಕೂರು



"ರಾಜ್ಯ ಸರ್ಕಾರ ಮಂಡಿಸಿರುವ 17ನೇ ಬಜೆಟ್ ಕೇವಲ ಸಾಲದ ದಾಖಲೆಯಾಗಿದೆಯೇ ಹೊರತು, ಅಭಿವೃದ್ಧಿಯ ದೂರದೃಷ್ಟಿ ಇದರಲ್ಲಿಲ್ಲ," ಎಂದು ತುಮಕೂರು ಗ್ರಾಮಾಂತರ ಶಾಸಕ ಬಿ. ಸುರೇಶ್‌ಗೌಡ ವಿಧಾನಸಭೆಯಲ್ಲಿ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.
ಬಜೆಟ್ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಭಾಷಣದಲ್ಲಿ ಅಮರ್ತ್ಯ ಸೇನ್ ಅವರ ಮಾತುಗಳನ್ನು ಉಲ್ಲೇಖಿಸಿದ್ದರೂ, ಆರ್ಥಿಕ ಶಿಸ್ತನ್ನು ಮಾತ್ರ ಸಂಪೂರ್ಣವಾಗಿ ಗಾಳಿಗೆ ತೂರಿದ್ದಾರೆ ಎಂದು ಟೀಕಿಸಿದರು.
ಸಾಲ ಮಾಡಬಾರದು ಎಂಬ ದಾರ್ಶನಿಕರ ಮಾತು ಮರೆಯಬೇಡಿ: "ಸರ್ಕಾರ ನಡೆಸುವುದು ಮತ್ತು ಸಂಸಾರ ನಡೆಸುವುದು ಎರಡೂ ಒಂದೇ. ಮನೆ ನಡೆಸಲು ಕೇವಲ ಸಾಲವನ್ನೇ ಅವಲಂಬಿಸಿದರೆ ಕೊನೆಗೆ ನೇಣಿನ ಹಗ್ಗವೇ ಗತಿಯಾಗುತ್ತದೆ," ಎಂದು ಸುರೇಶ್‌ಗೌಡರು ಎಚ್ಚರಿಸಿದರು. ಈ ಸಂದರ್ಭದಲ್ಲಿ ಸರ್ವಜ್ಞನ ವಚನವಾದ 'ಸಾಲವನು ಕೊಂಬಾಗ ಹಾಲೋಗರ ಉಂಡಂತೆ...' ಮತ್ತು ಬೆಂಜಮಿನ್ ಫ್ರಾಂಕ್ಲಿನ್ ಅವರ 'ಉಪವಾಸವಿದ್ದರೂ ಪರವಾಗಿಲ್ಲ, ಸಾಲ ಮಾಡಬೇಡಿ' ಎಂಬ ಮಾತುಗಳನ್ನು ಉಲ್ಲೇಖಿಸಿ ಸರ್ಕಾರದ ಆರ್ಥಿಕ ನೀತಿಯನ್ನು ಖಂಡಿಸಿದರು. ಉಚಿತ ಯೋಜನೆಗಳಿಗಾಗಿ ಮಾಡುತ್ತಿರುವ ಸಾಲದಿಂದ ಯಾವುದೇ ಶಾಶ್ವತ ಆಸ್ತಿ ನಿರ್ಮಾಣವಾಗುತ್ತಿಲ್ಲ ಎಂದು ಅವರು ವಿಷಾದಿಸಿದರು.
ಪಾಯಿಂಟ್ 6 ರ ಮಿತಿಯಲ್ಲಿ ಆರ್ಥಿಕತೆ!
ರಾಜ್ಯದ ಒಟ್ಟು ಸಾಲ 8,24,389 ಲಕ್ಷ ಕೋಟಿ ರೂಪಾಯಿಗಳಿಗೆ ಮುಟ್ಟಿದೆ. ಇದು ಜಿಎಸ್‌ಡಿಪಿಯ ಶೇ. 24.94 ರಷ್ಟಿದೆ. "ಸಾಲದ ಮಿತಿ ಶೇ. 25ಕ್ಕೆ ಇರಬೇಕು. ಆದರೆ ಈ ಸರ್ಕಾರ ಅದನ್ನು ಶೇ. 24.94ಕ್ಕೆ ತಂದು ನಿಲ್ಲಿಸಿದೆ. ಅಂದರೆ ಮುಂದಿನ ಬಜೆಟ್‌ನಲ್ಲಿ ಸಾಲ ಮಾಡಲು ಕೇವಲ ಶೇ. 0.06 ರಷ್ಟು ಮಾತ್ರ ಅವಕಾಶವಿದೆ. ಇದು ಯಾವ ರೀತಿಯ ಆರ್ಥಿಕ ಶಿಸ್ತು?" ಎಂದು ಪ್ರಶ್ನಿಸಿ ಸರ್ಕಾರವನ್ನು ಕೆಣಕಿದರು.
ಕೆಪಿಎಸ್‌ಸಿ ವಿಶ್ವಾಸಾರ್ಹತೆ ಬಗ್ಗೆ ಪ್ರಶ್ನೆ: ರಾಜ್ಯದಲ್ಲಿ 3 ಲಕ್ಷ ಹುದ್ದೆಗಳು ಖಾಲಿ ಇವೆ. ನೇಮಕಾತಿ ನಡೆಸುವ ಕೆಪಿಎಸ್‌ಸಿ ಸಂಸ್ಥೆ ತನ್ನ ವಿಶ್ವಾಸಾರ್ಹತೆಯನ್ನೇ ಕಳೆದುಕೊಂಡಿದೆ ಎಂದು ಶಾಸಕರು ದೂರಿದರು. "ಕೆಪಿಎಸ್‌ಸಿ ನಡೆಸುವ ಪ್ರತಿಯೊಂದು ಪರೀಕ್ಷೆಯಲ್ಲೂ ಭ್ರಷ್ಟಾಚಾರ ಮತ್ತು ಅಕ್ರಮದ ಆರೋಪ ಕೇಳಿಬರುತ್ತಿದೆ. ಯುಪಿಎಸ್‌ಸಿ ಮಾದರಿಯಲ್ಲಿ ಪಾರದರ್ಶಕ ನೇಮಕಾತಿ ನಡೆಯದಿದ್ದರೆ, ಅಡ್ಡದಾರಿ ಹಿಡಿದು ಬರುವವರು ರಾಜ್ಯಕ್ಕೆ ಯಾವ ರೀತಿಯ ಆಡಳಿತ ನೀಡಲು ಸಾಧ್ಯ?" ಎಂದು ಕಿಡಿಕಾರಿದರು.
ತುಮಕೂರು ವಿ.ವಿ.ಗೆ ಶಿವಕುಮಾರಸ್ವಾಮಿಗಳ ಹೆಸರಿಡಿ:
ಬಜೆಟ್‌ನಲ್ಲಿ ಬಸವಕಲ್ಯಾಣದ ವಚನ ವಿಶ್ವವಿದ್ಯಾಲಯಕ್ಕೆ ಜಾಗ ನೀಡಿರುವ ಪ್ರಸ್ತಾಪವನ್ನು ಸ್ವಾಗತಿಸಿದ ಶಾಸಕರು, ನಡೆದಾಡುವ ದೇವರು ಎಂದೇ ಖ್ಯಾತರಾದ ಡಾ. ಶಿವಕುಮಾರ ಮಹಾಸ್ವಾಮಿಗಳ ಹೆಸರನ್ನು ತುಮಕೂರು ವಿಶ್ವವಿದ್ಯಾಲಯಕ್ಕೆ ಇಡುವ ಮೂಲಕ ಅವರಿಗೆ ಗೌರವ ಸಲ್ಲಿಸಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

# 'ಶೂನ್ಯವೇಳೆಯಲ್ಲಿ ಸಾರ್ವಜನಿಕ ವಿಷಯ ಪ್ರಸ್ತಾಪಿಸಲು ಅನುಮತಿ ನೀಡಿ'

ಬೆಂಗಳೂರು

ಕರ್ನಾಟಕ ವಿಧಾನ ಪರಿಷತ್ ಸಭಾಪತಿಗಳಿಗೆ ಪತ್ರ ಬರೆದಿರುವ ವಿಧಾನ ಪರಿಷತ್ ಸದಸ್ಯ ರಮೇಶ್ ಬಾಬು ಅವರು, ಸಾರ್ವಜನಿಕ ಮಹತ್ವದ ವಿಷಯವನ್ನು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಅನುಮತಿ ಕೋರಿದ್ದಾರೆ.
ರಾಜ್ಯ ಸರ್ಕಾರ ಕನ್ನಡ ಭಾಷೆ ಕನ್ನಡ ನೆಲ ಮತ್ತು ಕನ್ನಡ ಜಲದ ಸಂರಕ್ಷಣೆಗೆ ಯಾವತ್ತೂ ತನ್ನ ಬದ್ಧತೆಯನ್ನು ತೋರಿಸಿಕೊಂಡು ಬರುತ್ತಿದೆ. ರಾಜ್ಯದಲ್ಲಿ ಕನ್ನಡದ ರಕ್ಷಣೆಗೆ ಕೆಲಸ ಮಾಡುವ ಸಂಘ ಸಂಸ್ಥೆಗಳಿಗೆ ಬೆಂಬಲಿಸುವ ಸ್ಪೂರ್ತಿ ನೀಡುವ, ಜೊತೆಯಲ್ಲಿ ಕೆಲಸ ಮಾಡುವ ಕಾರ್ಯವನ್ನು ರಾಜ್ಯ ಸರ್ಕಾರ ಮಾಡುತ್ತಿದೆ. ಚಳುವಳಿಗಾರರ ಹೋರಾಟದ ಪ್ರತಿಫಲದಿಂದ ಕರ್ನಾಟಕ ಏಕೀಕರಣದ ಮೂಲಕ ವಿಶಾಲ ಕರ್ನಾಟಕ ರಾಜ್ಯವನ್ನು ಸ್ಥಾಪನೆ ಮಾಡಲಾಗಿದೆ. ರಾಜ್ಯದ ನೆಲ, ಜಲ, ಭಾಷೆಗೆ ದುಡಿದಂತಹ ಮಹನೀಯರಿಗೆ ಪ್ರತಿ ವರ್ಷ ರಾಜ್ಯೋತ್ಸವ ಪ್ರಶಸ್ತಿಗಳನ್ನು ನೀಡುತ್ತಿದೆ. ಕನ್ನಡ ಭಾಷೆಯ ಉಳಿವಿಗೆ – ಗೆಲುವಿಗೆ ಮತ್ತು ಕನ್ನಡತನದ ಬೆಳವಣಿಗೆಗೆ ಶ್ರಮಿಸುತ್ತಿರುವ ಅನೇಕ ಮಹನೀಯರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡುವುದರ ಜೊತೆಗೆ ಕರ್ನಾಟಕದಲ್ಲಿ ನೆಲ ಜಲ ಭಾಷೆಯ ಸಂರಕ್ಷಣೆಗೆ ಹೋರಾಟ ಮಾಡುವ ಸಂಘ ಸಂಸ್ಥೆಗಳಿಗೆ ಆರ್ಥಿಕ ಶಕ್ತಿ ಮತ್ತು ಇತರ ಸಂಪನ್ಮೂಲಗಳನ್ನು ನೀಡುವ ಕೆಲಸವನ್ನು ರಾಜ್ಯ ಸರ್ಕಾರ ಮಾಡುತ್ತಿದೆ.



ವಾಟಳ್ ನಾಗರಾಜ್ ಅವರ ಸಹಿತವಾಗಿ ಅನೇಕ ಮಹನೀಯರಿಗೆ ಇಲ್ಲಿಯವರಿಗೆ ರಾಜ್ಯೋತ್ಸವ ಪ್ರಶಸ್ತಿಗಳನ್ನು ನೀಡಿಲ್ಲ.
ಅಲ್ಲದೇ ಕರ್ನಾಟಕಕ್ಕಾಗಿ ದುಡಿಯುತ್ತಿರುವ ಅನೇಕ ಸಂಘ ಸಂಸ್ಥೆಗಳಿಗೆ ನಿವೇಶನ ಸ್ಥಳ ಅಥವಾ ಜಮೀನು ಮಂಜೂರು ಮಾಡಿಲ್ಲ.
ರಾಜ್ಯದಲ್ಲಿ ನೆಲ, ಜಲ ಮತ್ತು ಭಾಷೆಯ ಸಂರಕ್ಷಣೆಗೆ ಹೋರಾಟ ಮಾಡಿದ ಕನ್ನಡ ಚಳುವಳಿಗಾರರ ಮೇಲೆ ಮತ್ತು ಕನ್ನಡ ಸಂಘ ಸಂಸ್ಥೆಯ ಪದಾಧಿಕಾರಿಗಳ ಮೇಲೆ ಅನೇಕ ಕ್ರಿಮಿನಲ್ ಪ್ರಕರಣಗಳನ್ನು ದಾಖಲು ಮಾಡಲಾಗಿದೆ. ಅಂತಹ ಪ್ರಕರಣಗಳನ್ನು ಕ್ಯಾಬಿನೆಟ್ ತೀರ್ಮಾನದ ಮೂಲಕ ರಾಜ್ಯ ಸರ್ಕಾರವು ವಾಪಸ್ ಪಡೆಯುವುದು ಸಕಾಲಿಕವಾಗಿದೆ. ಆದ್ದರಿಂದ ರಾಜ್ಯ ಸರ್ಕಾರವು ಕರ್ನಾಟಕದ ನೆಲ ಜಲ ಭಾಷೆಯ ಸಂರಕ್ಷಣೆಯ ಹಿನ್ನೆಲೆಯಲ್ಲಿ ರಾಜ್ಯಕ್ಕೆ ಕೊಡುಗೆ ನೀಡಿರುವ ಮಹನೀಯರನ್ನು ಗುರುತಿಸಿ ಅವರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಬೇಕು. ಪರವಾಗಿ ಹೋರಾಟ ಮಾಡುತ್ತಿರುವ ಸಂಘ ಸಂಸ್ಥೆಗಳಿಗೆ ನಿವೇಶನಗಳನ್ನು ಮತ್ತು ಜಮೀನುಗಳನ್ನು ನೀಡಬೇಕಾಗಿ ಸಾರ್ವಜನಿಕ ಹಿತ ದೃಷ್ಟಿಯಿಂದ ಮನವಿ ಮಾಡಿದ್ದಾರೆ.
ಈ ಕುರಿತು ಅನೇಕ ಮಾಧ್ಯಮಗಳಲ್ಲಿ ನಿರಂತರವಾಗಿ ವರದಿಗಳು ಬರುತ್ತಿದ್ದು, ರಾಜ್ಯ ಸರ್ಕಾರವು ಇದನ್ನು ಆದ್ಯತೆಯ ಮೇಲೆ ಪರಿಗಣಿಸಬೇಕು.
ಕಾರಣ ರಾಜ್ಯ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೂಲಕ ಇಂತಹ ಮಹನೀಯರಿಗೆ ಮತ್ತು ಸಂಘ ಸಂಸ್ಥೆಗಳಿಗೆ ರಾಜ್ಯ ಸರ್ಕಾರ ಗೌರವ ಸಲ್ಲಿಕೆ ಮಾಡಬೇಕೆಂದು ಸದನ ಮೂಲಕ ಶೂನ್ಯ ವೇಳೆಯಲ್ಲಿ ರಾಜ್ಯ ಸರ್ಕಾರವನ್ನು ಒತ್ತಾಯಿಸುವುದಾಗಿ ಅವರು ಹೇಳಿದ್ದಾರೆ.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಬೆಂಗಳೂರು ಮಹಾನಗರದ ಹಳೆಯ ಮತ್ತು ಧಾರ್ಮಿಕ ಕೇಂದ್ರಗಳಲ್ಲೊಂದಾದ ಸೀತಾಪತಿ ಅಗ್ರಹಾರದಲ್ಲಿ ನೆಲೆಸಿರುವ ಶ್ರೀ ಲಕ್ಷ್ಮೀ ಸತ್ಯನಾರಾಯಣ ದೇವರಿಗೆ ಶುಕ್ರವಾರ ವಿಶೇಷ ಪೂಜಾ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿತ್ತು. ಈ ಶುಭ ದಿನದ ಪ್ರಯುಕ್ತ ನೈಸರ್ಗಿಕ ಕನಕಾಂಬರ, ಸೇವಂತಿಗೆ ಹೂವುಗಳ ನಡುವೆ ಕಂಗೊಳಿಸುತ್ತಿದ್ದ ಸ್ವಾಮಿಯ ದರ್ಶನ ಪಡೆದ ಭಕ್ತರು ಪುನೀತರಾದರು.




ಬೆಂಗಳೂರು ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿ ಶುಕ್ರವಾರ ಬಿಜೆಪಿಯ ರಾಜ್ಯ ಕೋರ್ ಕಮಿಟಿ ಸಭೆಯು ಗಣ್ಯ ನಾಯಕರ ಉಪಸ್ಥಿತಿಯಲ್ಲಿ ಜರುಗಿತು. ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ನಡೆದ ಈ ಸಭೆಯಲ್ಲಿ ಮುಂಬರುವ ರಾಜಕೀಯ ವಿದ್ಯಮಾನಗಳ ಕುರಿತು ಗಹನ ಚರ್ಚೆ ನಡೆಸಲಾಯಿತು. ಈ ಸಭೆಯಲ್ಲಿ ಮಾಜಿ ಉಪಮುಖ್ಯಮಂತ್ರಿಗಳಾದ ಗೋವಿಂದ ಕಾರಜೋಳ, ಡಾ. ಸಿ.ಎನ್. ಅಶ್ವತ್ಥನಾರಾಯಣ್, ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ, ಮಾಜಿ ಸಚಿವ ಬಿ. ಶ್ರೀರಾಮುಲು ಸೇರಿದಂತೆ ಕೋರ್ ಕಮಿಟಿಯ ಸದಸ್ಯರು ಈ ವೇಳೆ ಹಾಜರಿದ್ದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರದಂದು ತಮ್ಮ ಸ್ವಕ್ಷೇತ್ರವಾದ ಮೈಸೂರು ವರುಣಾ ವ್ಯಾಪ್ತಿಯ ವರಕೋಡು ಗಡಿ ಗುರುಮಠದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಸಂಭ್ರಮಿಸಿದರು. ವರಕೋಡು ಗ್ರಾಮದಲ್ಲಿ ಅತ್ಯಂತ ಸಡಗರದಿಂದ ಆಯೋಜಿಸಲಾಗಿದ್ದ ಶ್ರೀ ಬೀರೇಶ್ವರಸ್ವಾಮಿ ದೇವಸ್ಥಾನದ ಸಂಪ್ರೋಕ್ಷಣೆ, ಪುನರ್ ಪ್ರತಿಷ್ಠಾಪನೆ, ಕುಂಭಾಭಿಷೇಕ ಹಾಗೂ ಮಹಾದ್ವಾರ ಪೂಜಾ ಮಹೋತ್ಸವ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಮಠದ ಪೀಠಾಧಿಪತಿಗಳು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ಮೂರು ಜಿಲ್ಲೆಗಳಿಗೆ ವರವಾಗಲಿದೆ ಏರ್‌ಪೋರ್ಟ್!



ಬೆಂಗಳೂರು

ಬಳ್ಳಾರಿ ಭಾಗದ ಜನರ ಬಹುದಿನಗಳ ಕನಸಾದ ವಿಮಾನ ನಿಲ್ದಾಣ ಯೋಜನೆಗೆ ಮರುಜೀವ ನೀಡಲು ಸರ್ಕಾರ ಮುಂದಾಗಿದ್ದು, ಕೇವಲ ಬಳ್ಳಾರಿಯಷ್ಟೇ ಅಲ್ಲದೆ ನೆರೆಯ ವಿಜಯನಗರ ಮತ್ತು ಕೊಪ್ಪಳ ಜಿಲ್ಲೆಗಳಿಗೂ ಅನುಕೂಲವಾಗುವಂತೆ ಹೊಸ ತಾಣವನ್ನು ಗುರುತಿಸಲಾಗಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ.

ಶುಕ್ರವಾರ ವಿಧಾನಸಭೆಯಲ್ಲಿ ಗಂಗಾವತಿ ಶಾಸಕ ಜನಾರ್ದನ ರೆಡ್ಡಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಈ ಮಹತ್ವದ ಯೋಜನೆಯ ಸಾಧಕ-ಬಾಧಕಗಳನ್ನು ಚರ್ಚಿಸಲು ಶೀಘ್ರದಲ್ಲೇ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಮೂರೂ ಜಿಲ್ಲೆಗಳ ಜನಪ್ರತಿನಿಧಿಗಳ ಸಭೆ ಕರೆಯಲಾಗುವುದು ಎಂದು ಪ್ರಕಟಿಸಿದರು.

ಹೊಸ ತಾಣದ ವಿಶೇಷತೆ: ಬಳ್ಳಾರಿಯಿಂದ ಸುಮಾರು 19 ಕಿ.ಮೀ. ದೂರದಲ್ಲಿ ಹೊಸ ಜಾಗವನ್ನು ಗುರುತಿಸಲಾಗಿದ್ದು, ಇದು ಪ್ರಮುಖ ಪ್ರವಾಸಿ ತಾಣಗಳಾದ ಹಂಪಿ (26 ಕಿ.ಮೀ.), ಹೊಸಪೇಟೆ (33 ಕಿ.ಮೀ.) ಮತ್ತು ಸಂಡೂರು (33 ಕಿ.ಮೀ.) ಭಾಗಗಳಿಗೆ ಅತ್ಯಂತ ಹತ್ತಿರವಾಗಲಿದೆ. ಕುರುಗೋಡು, ತೋರಣಗಲ್ಲು ಮತ್ತು ಸಿರಗುಪ್ಪದವರಿಗೂ ಈ ತಾಣವು ಆಯಕಟ್ಟಿನ ಜಾಗವಾಗಲಿದೆ. ಈ ಜಾಗದ ತಾಂತ್ರಿಕ ಸೂಕ್ತತೆಯನ್ನು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ (ಎಎಐ) ತೀರ್ಮಾನಿಸಲಿದೆ ಎಂದು ಸಚಿವರು ವಿವರಿಸಿದರು.

ಹಳೆಯ ತಪ್ಪುಗಳಿಂದ ಪಾಠ: "ಹಿಂದೆ ಹುಬ್ಬಳ್ಳಿ-ಬೆಳಗಾವಿ ಮತ್ತು ವಿಜಯಪುರದಲ್ಲಿ ವಿಮಾನ ನಿಲ್ದಾಣ ನಿರ್ಮಿಸುವಾಗ ದೂರದೃಷ್ಟಿಯ ಕೊರತೆಯಿಂದಾಗಿ ಕೆಲವು ತಪ್ಪುಗಳಾಗಿವೆ. ಬೆಳಗಾವಿ ಮತ್ತು ಹುಬ್ಬಳ್ಳಿ ಮಧ್ಯೆ ಕೇವಲ 70 ಕಿ.ಮೀ ಅಂತರವಿದೆ. ಇವೆರಡರ ಮಧ್ಯೆ ಒಂದೇ ಅಂತರಾಷ್ಟ್ರೀಯ ನಿಲ್ದಾಣ ಮಾಡಿದ್ದರೆ ಪ್ರಯಾಣಿಕರ ದಟ್ಟಣೆ ಹೆಚ್ಚಿರುತ್ತಿತ್ತು," ಎಂದು ಸಚಿವರು ವಾಸ್ತವ ಬಿಚ್ಚಿಟ್ಟರು. ವಿಜಯಪುರ ಏರ್‌ಪೋರ್ಟ್ ಕೂಡ ಆಲಮಟ್ಟಿ ಕಡೆಗೆ ನಿರ್ಮಿಸಿದ್ದರೆ ಬಾದಾಮಿ, ಐಹೊಳೆ ಪ್ರವಾಸಿಗರಿಗೆ ಅನುಕೂಲವಾಗುತ್ತಿತ್ತು ಎಂದರು.

ಉಡಾನ್ ಯೋಜನೆ ವಿಸ್ತರಣೆಗೆ ಪ್ರಸ್ತಾವನೆ: ಬೀದರ್ ಮತ್ತು ಕಲಬುರಗಿ ವಿಮಾನ ನಿಲ್ದಾಣಗಳು ಎದುರಿಸುತ್ತಿರುವ ಆರ್ಥಿಕ ಸಂಕಷ್ಟದ ಬಗ್ಗೆ ಪ್ರಸ್ತಾಪಿಸಿದ ಸಚಿವರು, ಕೇಂದ್ರದ 'ಉಡಾನ್' ಯೋಜನೆಯನ್ನು 5 ವರ್ಷಗಳವರೆಗೆ ವಿಸ್ತರಿಸಬೇಕು ಮತ್ತು ನಂತರದ ವೆಚ್ಚವನ್ನು ಕೇಂದ್ರ-ರಾಜ್ಯ ಸರ್ಕಾರಗಳು 50:50 ಅನುಪಾತದಲ್ಲಿ ಭರಿಸಬೇಕು ಎಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವರಿಗೆ ಪತ್ರ ಬರೆದಿರುವುದಾಗಿ ತಿಳಿಸಿದರು.

ಬಳ್ಳಾರಿಯಲ್ಲಿ ವಿಮಾನ ನಿಲ್ದಾಣಕ್ಕಾಗಿ ಕೆಐಎಡಿಬಿ ವತಿಯಿಂದ ಈಗಾಗಲೇ 800 ಮತ್ತು 1,200 ಎಕರೆಗಳ ಎರಡು ಹೊಸ ತಾಣಗಳನ್ನು ಪರಿಶೀಲಿಸಲಾಗಿದೆ. ಹಳೆಯ ತಾಣದಲ್ಲಿ ವಿಮಾನ ನಿಲ್ದಾಣ ಮಾಡಿದರೆ ರಸ್ತೆ ನಿರ್ಮಾಣಕ್ಕೆ ಕೋಟಿಗಟ್ಟಲೆ ಹಣ ವ್ಯಯಿಸಬೇಕಾಗುತ್ತದೆ, ಇದು ಪ್ರಾಯೋಗಿಕವಲ್ಲ ಎಂದು ಸ್ಪಷ್ಟಪಡಿಸಿದರು.

# ಜಿಬಿಎ ವ್ಯಾಪ್ತಿಯ 369 ವಾರ್ಡ್‌ಗಳ ಪುನರ್ ವಿಂಗಡಣೆ ಪೂರ್ಣ

ಬೆಂಗಳೂರು

ಜಿಬಿಎ ವ್ಯಾಪ್ತಿಯ 369 ವಾರ್ಡ್‌ಗಳ ಪುನರ್ ವಿಂಗಡಣೆಯ ಆಧಾರದ ಮೇಲೆ 50 ವಿಭಾಗ ಹಾಗೂ 150 ಉಪ-ವಿಭಾಗಳನ್ನು ರಚಿಸಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸುತ್ತೋಲೆ ಹೊರಡಿಸಿರುತ್ತಾರೆ.



ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024 ಅನ್ನು ರಚಿಸಿ, 15ನೇ ಮೇ 2025 ರಿಂದ ಜಾರಿಗೆ ತಂದಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನಿರಶನಗೊಂಡು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬಂದಿರುತ್ತದೆ.

ಜಿಬಿಎ ಪ್ರದೇಶದ ವ್ಯಾಪ್ತಿಯಲ್ಲಿ ನೂತನವಾಗಿ ಬೆಂಗಳೂರು ಕೇಂದ್ರ ನಗರ ಪಾಲಿಕೆ, ಬೆಂಗಳೂರು ಪೂರ್ವ ನಗರ ಪಾಲಿಕೆ, ಬೆಂಗಳೂರು ಪಶ್ಚಿಮ ನಗರ ಪಾಲಿಕೆ, ಬೆಂಗಳೂರು ಉತ್ತರ ನಗರ ಪಾಲಿಕೆ, ದಕ್ಷಿಣ ನಗರ ಪಾಲಿಕೆಗಳು ಅಸ್ತಿತ್ವಕ್ಕೆ ಬಂದಿವೆ. ನಗರ ಪಾಲಿಕೆಗಳಿಗೆ ಸಂಬಂಧಿಸಿದಂತೆ ವಾರ್ಡ್‌ಗಳ ಪುನರ್ ವಿಂಗಡಣೆಗಾಗಿ ವಾರ್ಡ್‌ಗಳ ಪುನರ್ ವಿಂಗಡಣಾ ಅಯೋಗವನ್ನು ರಚಿಸಲಾಗಿರುತ್ತದೆ.

ಆಡಳಿತಾತ್ಮಕ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ ವಿಭಾಗ, ಉಪ ವಿಭಾಗಗಳ ರಚನೆ:

ಜಿಬಿಎ ವ್ಯಾಪ್ತಿಯಲ್ಲಿ ನೂತನವಾಗಿ ಸ್ಥಾಪಿಸಲಾಗಿರುವ ನಗರ ಪಾಲಿಕೆಗಳಿಗೆ ಸಂಬಂಧಿಸಿದಂತೆ ಒಟ್ಟು 369 ವಾರ್ಡ್‌ಗಳನ್ನು ರಚಿಸಲಾಗಿದೆ. ಜಿಬಿಎ ಪ್ರದೇಶದ ವ್ಯಾಪ್ತಿಯಲ್ಲಿನ ಪಾಲಿಕೆಗಳ ಆಡಳಿತಾತ್ಮಕ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ ಕಂದಾಯ, ಕಾಮಗಾರಿ & ಆರೋಗ್ಯ ಇಲಾಖೆಗಳಿಗೆ ಸಂಬಂಧಿಸಿದಂತೆ 50 ವಿಭಾಗ ಹಾಗೂ 150 ಉಪ-ವಿಭಾಗಗಳನ್ನು ರಚಿಸಲಾಗಿದೆ.

# ಇಂದಿರಾ ಅಡುಗೆ ಕೋಣೆಗೆ ಎಲ್.ಪಿ.ಜಿ ಸಮಸ್ಯೆ ಆಗದಂತೆ ನೋಡಿಕೊಳ್ಳಿ: ರಾಜೇಂದ್ರ ಚೋಳನ್

ಬೆಂಗಳೂರು

ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ವಸಂತನಗರದಲ್ಲಿರುವ ಇಂದಿರಾ ಅಡುಗೆ ಕೋಣೆಗೆ ಎಲ್.ಪಿ.ಜಿ. ಸಮಸ್ಯೆ ಉಂಟಾಗದಂತೆ ನೋಡಿಕೊಳ್ಳುವಂತೆ ಆಯುಕ್ತರಾದ ರಾಜೇಂದ್ರ ಚೋಳನ್ ಅವರು ಗುತ್ತಿಗೆದಾರರಿಗೆ ಸೂಚನೆ ನೀಡಿದರು.



ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಇಂದು ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಇಂದಿರಾ ಅಡುಗೆ ಕೋಣೆಗೆ ಭೇಟಿ ನೀಡಿ, ಈ ಅಡುಗೆ ಕೋಣೆಯಿಂದ 14 ಇಂದಿರಾ ಕ್ಯಾಂಟೀನ್‌ಗಳಿಗೆ ಆಹಾರ ಪೂರೈಕೆ ಮಾಡಲಾಗುತ್ತಿದೆ. ಈ ಸಂಬಂಧ ಯಾವುದೇ ಕಾರಣಕ್ಕೂ ಆಹಾರ ಪೂರೈಕೆ ನಿಲ್ಲಿಸುವಂತಿಲ್ಲ. ಎಲ್.ಪಿ.ಜಿ. ವ್ಯವಸ್ಥೆಯನ್ನು ಸಮರ್ಪಕವಾಗಿ ಮಾಡಿಕೊಂಡು ಯಾವುದೇ ಸಮಸ್ಯೆ ಉಂಟಾಗದಂತೆ ಆಹಾರ ಪೂರೈಕೆಗೆ ಕ್ರಮ ವಹಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ನಿರ್ದೇಶನ ನೀಡಿದರು.

ಎಂ.ಜಿ ರಸ್ತೆ ಡಾಂಬರೀಕರಣ 15 ದಿನಗಳಲ್ಲಿ ಪೂರ್ಣಗೊಳಿಸಿ: ಎಂ.ಜಿ ರಸ್ತೆಯಲ್ಲಿ ಟ್ರಿನಿಟಿ ವೃತ್ತದಿಂದ ಮಹಾತ್ಮ ಗಾಂಧೀಜಿ ಉದ್ಯಾನವನದವರೆಗೆ 2.2 ಕಿ.ಮೀ (ಎರಡು ಭಾಗ ಸೇರಿ 4.4 ಕಿ.ಮೀ) ಡಾಂಬರೀಕರಣ ಕಾಮಗಾರಿ ಪ್ರಗತಿಯಲ್ಲಿದೆ. ಈಗಾಗಲೇ ಉದ್ಯಾನವನದಿಂದ ಬ್ರಿಗೇಡ್ ರಸ್ತೆಯವರೆಗೆ 1.2 ಕಿ.ಮೀ (ಎರಡೂ ಭಾಗ ಸೇರಿ 2.4 ಕಿ.ಮೀ) ಉದ್ದದ ರಸ್ತೆಗೆ ಒಂದು ಪದರದ ಡಾಂಬರು ಹಾಕಲಾಗಿದೆ. ವಾಹನಗಳ ಸಂಚಾರಕ್ಕೆ ಯಾವುದೇ ರೀತಿಯ ತೊಂದರೆ ಆಗದಂತೆ ರಾತ್ರಿ ವೇಳೆ ಡಾಂಬರೀಕರಣ ಕಾರ್ಯವನ್ನು ಹಂತ ಹಂತವಾಗಿ ನಡೆಸಲಾಗುತ್ತಿದೆ. ಹಗಲಿನಲ್ಲಿ ರಸ್ತೆ ಬದಿಯ ಸೈಡ್ ಡ್ರೇನ್‌ಗಳಲ್ಲಿ ಹೂಳೆತ್ತುವ ಕೆಲಸ ನಡೆಯುತ್ತಿದೆ. ರಸ್ತೆ ಕಾಮಗಾರಿಯನ್ನು ಸಂಪೂರ್ಣವಾಗಿ 15 ದಿನಗಳೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಹಾತ್ಮ ಗಾಂಧಿ ಉದ್ಯಾನವನಕ್ಕೆ ಅತ್ಯಾಧುನಿಕ ಸ್ಪರ್ಶ: ಮಹಾತ್ಮ ಗಾಂಧಿ ಉದ್ಯಾನವನವನ್ನು 4 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಉದ್ಯಾನವನಕ್ಕೆ ಅತ್ಯಾಧುನಿಕ ಸ್ಪರ್ಶ ನೀಡುವ ಮೂಲಕ ಅದನ್ನು ಪ್ರವಾಸಿಗರ ಆಕರ್ಷಕ ತಾಣವನ್ನಾಗಿ ರೂಪಿಸಲಾಗುತ್ತದೆ. ಜೊತೆಗೆ ಕಲಾವಿದರಿಗಾಗಿ ಮೀಸಲಾದ ವೇದಿಕೆ, ಕುಟೀರ (ಗ್ರಂಥಾಲಯ/ಸಂಗ್ರಹಾಲಯ) ಸೇರಿದಂತೆ ಇನ್ನಿತರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತದೆ. ಕಾಮಗಾರಿಗೆ ವೇಗ ನೀಡಿ ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.


ದ್ವಿತೀಯ ಹಂತದ ಘನತ್ಯಾಜ್ಯ ಸಂಸ್ಕರಣಾ ಘಟಕ: ಶಿವಾಜಿನಗರದ ಮಿಲ್ಲರ್ಸ್ ರಸ್ತೆಯಲ್ಲಿ ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದಿಂದ ದ್ವಿತೀಯ ಹಂತದ ಘನತ್ಯಾಜ್ಯ ಸಂಸ್ಕರಣಾ ಘಟಕದ ಕಾಮಗಾರಿ ಬಹುತೇಕ ಪೂರ್ಣಗೊಂಡಿದ್ದು, ಬಾಕಿ ಉಳಿದಿರುವ ಕಾಮಗಾರಿಯನ್ನು ಏಪ್ರಿಲ್ 15ರೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಾನ್ಸನ್ ಮಾರುಕಟ್ಟೆಗೆ ಡಿಪಿಆರ್ ಸಿದ್ಧಪಡಿಸಿ: ಶಿವಾಜಿನಗರ ವ್ಯಾಪ್ತಿಯಲ್ಲಿರುವ ಜಾನ್ಸನ್ ಮಾರುಕಟ್ಟೆ ಶಿಥಿಲಾವಸ್ಥೆಯಲ್ಲಿದ್ದು, ಸುಮಾರು 24,000 ಚ.ಮೀ ವ್ಯಾಪ್ತಿಯಲ್ಲಿ ವಿಸ್ತರಿಸಿದೆ. ಇರುವ ಕಟ್ಟಡವನ್ನು ನೆಲಸಮಗೊಳಿಸಿ ವಿನೂತನ ಮಾದರಿಯಲ್ಲಿ ಮಾರುಕಟ್ಟೆ ನಿರ್ಮಿಸುವ ಉದ್ದೇಶದಿಂದ ವಿವರವಾದ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಲು ಅಭಿಯಂತರರಿಗೆ ಸೂಚನೆ ನೀಡಿದರು.

ಈ ವೇಳೆ ಅಭಿವೃದ್ಧಿ ಅಪರ ಆಯುಕ್ತರಾದ ದಲ್ಜಿತ್ ಕುಮಾರ್, ಅಧೀಕ್ಷಕ ಅಭಿಯಂತರರಾದ ಪುನೀತ್, ಆರೋಗ್ಯ ಅಧಿಕಾರಿ ಶಿವಕುಮಾರ್, ಕಾರ್ಯಪಾಲಕ ಅಭಿಯಂತರರು, ಆರೋಗ್ಯಾಧಿಕಾರಿ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಿಜೆಪಿ ಹೈಕಮಾಂಡ್ ಅಂಗಳಕ್ಕೆ ಸಂಭಾವ್ಯ ಅಭ್ಯರ್ಥಿಗಳ ಪಟ್ಟಿ

ಬೆಂಗಳೂರು



ಇಂದಿನ ಕೋರ್ ಕಮಿಟಿ ಸಭೆಯಲ್ಲಿ ಮುಂದೆ ಬರುವ ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಅಭ್ಯರ್ಥಿಗಳ ಬಗ್ಗೆ ಚರ್ಚೆ ನಡೆದಿದೆ. ಆಕಾಂಕ್ಷಿಗಳ ಕುರಿತು ಚರ್ಚೆ ಆಗಿದೆ. ಕೋರ್ ಕಮಿಟಿಯಲ್ಲಿ ಚರ್ಚಿಸಿದ ಹೆಸರುಗಳನ್ನು ಪಕ್ಷದ ವರಿಷ್ಠರಿಗೆ ಕಳುಹಿಸಿಕೊಡುತ್ತೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ಒಗ್ಗಟ್ಟಿನ ಮಂತ್ರ ಪಠಿಸಿದ ನಾಯಕರು: ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, "ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರಗಳ ಆಕಾಂಕ್ಷಿಗಳ ಬಗ್ಗೆ ಸಭೆಯಲ್ಲಿ ಗಂಭೀರ ಚರ್ಚೆ ನಡೆದಿದೆ. ಕೋರ್ ಕಮಿಟಿಯಲ್ಲಿ ಚರ್ಚಿತವಾದ ಹೆಸರುಗಳನ್ನು ಇಂದೇ ಅಥವಾ ನಾಳೆ ದೆಹಲಿಯ ವರಿಷ್ಠರಿಗೆ ಕಳುಹಿಸಿಕೊಡುತ್ತೇವೆ," ಎಂದು ತಿಳಿಸಿದರು. ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್ ಅಗ್ರವಾಲ್ ಮತ್ತು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ನೇತೃತ್ವದಲ್ಲಿ ನಡೆದ ಈ ಸಭೆಯಲ್ಲಿ ಚುನಾವಣಾ ತಂತ್ರಗಾರಿಕೆಯ ಬಗ್ಗೆಯೂ ಚರ್ಚಿಸಲಾಯಿತು.

ಬಂಡಾಯ ಶಮನಕ್ಕೆ ಕಸರತ್ತು: ದಾವಣಗೆರೆ ದಕ್ಷಿಣ ಕ್ಷೇತ್ರದ ಅಸಮಾಧಾನಿತರ ಬಗ್ಗೆ ಪ್ರತಿಕ್ರಿಯಿಸಿದ ವಿಜಯೇಂದ್ರ, "ಅಸಮಾಧಾನಿತರಿಗೆ ಏನು ಹೇಳಬೇಕೋ ಅದನ್ನು ನಾಲ್ಕು ಗೋಡೆಗಳ ಮಧ್ಯೆ ಹೇಳಿದ್ದೇವೆ. ಎಲ್ಲರನ್ನೂ ಕೂರಿಸಿ ಮಾತನಾಡಿಸಲಾಗಿದ್ದು, ಹಳೆಯ ಕಹಿ ಘಟನೆಗಳನ್ನು ಮರೆತು ಪಕ್ಷದ ಹಿತದೃಷ್ಟಿಯಿಂದ ಒಂದಾಗಿ ಕೆಲಸ ಮಾಡುವಂತೆ ಸೂಚಿಸಲಾಗಿದೆ," ಎಂದರು. ಪ್ರಲ್ಹಾದ್ ಜೋಶಿ ಹಾಗೂ ಗೋವಿಂದ ಕಾರಜೋಳ ಅವರ ಸಮ್ಮುಖದಲ್ಲಿ ಆಕಾಂಕ್ಷಿಗಳೊಂದಿಗೆ ನಡೆಸಿದ ಸಭೆಯು ಸಕಾರಾತ್ಮಕವಾಗಿ ಅಂತ್ಯಗೊಂಡಿದ್ದು, ಎಲ್ಲವೂ ಸರಿಹೋಗುವ ವಿಶ್ವಾಸವಿದೆ ಎಂದು ಅವರು ನುಡಿದರು. ವಿಧಾನಪರಿಷತ್ ಚುನಾವಣೆಗೂ ಈಗಾಗಲೇ ಅಭ್ಯರ್ಥಿಗಳನ್ನು ಘೋಷಿಸಲಾಗಿದ್ದು, ವಿಧಾನಸಭೆ ಮತ್ತು ಪರಿಷತ್ ಎರಡೂ ಕಡೆ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಲು ಕಾರ್ಯಕರ್ತರು ಸಂಪೂರ್ಣ ಶ್ರಮ ಹಾಕಬೇಕು ಎಂಬ ನಿರ್ಣಯವನ್ನು ಸಭೆಯಲ್ಲಿ ತೆಗೆದುಕೊಳ್ಳಲಾಗಿದೆ.

# 'ವೃತ್ತಿ ಗೌರವಕ್ಕೆ ಚ್ಯುತಿ ಬಾರದಂತೆ ನಡೆದುಕೊಳ್ಳಿ'

ಕೋಲಾರ

ಬಿಎಡ್ ಮುಗಿಸಿ ಶಿಕ್ಷಕರಾಗಲಿರುವ ಪ್ರಶಿಕ್ಷಣಾರ್ಥಿಗಳು ತಮ್ಮ ಜೀವನದಲ್ಲಿ ವೃತ್ತಿ ಗೌರವಕ್ಕೆ ಚ್ಯುತಿ ಬಾರದಂತೆ ನಡೆದುಕೊಳ್ಳಿ, ಸಾವಿರಾರು ಮಕ್ಕಳಿಗೆ ಅಕ್ಷರದ ಬೆಳಕು ನೀಡಿ ಮುನ್ನಡೆಸಿ ಎಂದು ತಾಲ್ಲೂಕಿನ ಅರಾಭಿಕೊತ್ತನೂರು ಸರ್ಕಾರಿ ಪ್ರೌಢಶಾಲೆ ಪ್ರಭಾರ ಮುಖ್ಯಶಿಕ್ಷಕಿ ಸಿದ್ದೇಶ್ವರಿ ಕರೆ ನೀಡಿದರು.

ಶಾಲೆಯಲ್ಲಿ ನಗರದ ಸುಗುಣ ಬಿಇಡಿ ಕಾಲೇಜಿನ ಪ್ರಶಿಕ್ಷಣಾರ್ಥಿಗಳು ತಮ್ಮ 2 ತಿಂಗಳ ಬೋಧನಾ ತರಬೇತಿ ಮುಗಿಸಿದ ಸಂದರ್ಭದಲ್ಲಿ ಶಾಲೆಯ ಅಡುಗೆ ಮನೆಗೆ ಸಹಕಾರಿಯಾಗಲು ಕೊಡುಗೆಯಾಗಿ ನೀಡಿದ ಮಿಕ್ಸರ್ ಗ್ರೈಂಡರ್ ಸ್ವೀಕರಿಸಿ ಅವರು ಮಾತನಾಡುತ್ತಿದ್ದರು.

ಶಿಕ್ಷಕ ವೃತ್ತಿಗೆಅತ್ಯಂತ ಗೌರವವಿದೆ, ಸಮಾಜದ ಇನ್ಯಾವ ವೃತ್ತಿಯೂ ನಿಮ್ಮ ನಿವೃತ್ತಿ ನಂತರ ನಿಮ್ಮನ್ನು ಸ್ಮರಿಸುವುದಿಲ್ಲ ಆದರೆ ಬದುಕಿನ ಗುರಿ ತೋರುವ ಗುರು ಮಾತ್ರ ಎಂದಿಗೂ ನಮ್ಮ ಮನಸ್ಸಿನಲ್ಲಿ ಶಾಶ್ವತವಾಗಿ ನೆಲಸಿರುತ್ತಾರೆ ಎಂದು ಅಭಿಪ್ರಾಯಪಟ್ಟರು.

ಸುಗುಣಾ ಬಿಎಡ್ ಕಾಲೇಜಿನ ಪ್ರಶಿಕ್ಷಣಾರ್ಥಿಗಳು ತಮ್ಮ ಅನುಭವ ಹಂಚಿಕೊಂಡು, ನಮ್ಮ ಕಾಲೇಜಿನ ಪ್ರಶಿಕ್ಷಣಾರ್ಥಿಗಳಿಗೆ ಕಳೆದ ಐದಾರು ವರ್ಷಗಳಿಂದ ಅವಕಾಶ ಕಲ್ಪಿಸಿಕೊಡುವ ಮೂಲಕ ಅವರಿಗೆ ಬೋಧನೆಗೆ ಅಗತ್ಯವಾದ ಎಲ್ಲಾ ಸೌಲಭ್ಯ ಒದಗಿಸಿದ್ದಕ್ಕಾಗಿ ಶಾಲೆಗೆ ಧನ್ಯವಾದ ಸಲ್ಲಿಸಿದರು.

ಪ್ರಶಿಕ್ಷಣಾರ್ಥಿಗಳಾಗಿ ನಾವು ಇಲ್ಲಿ ಕಲಿದ ಬೋಧನಾ ವಿಧಾನ ಅವರು ಶಿಕ್ಷಕರಾದ ನಂತರ ಧೈರ್ಯನೀಡಲಿದೆ, ವೇದಿಕೆ ಭಯ ಹೋಗಲಾಡಿಸಿ ನಮ್ಮ ಶಿಕ್ಷಕ ವೃತ್ತಿಯನ್ನು ಅತ್ಯಂತ ಸಮರ್ಥವಾಗಿ ನಿಭಾಯಿಸುವ ಶಕ್ತಿ ತಂದುಕೊಟ್ಟಿದೆ ಎಂದರು.

ಹಿರಿಯ ಶಿಕ್ಷಕಿ ಎಂ.ಆರ್.ಗೋಪಾಲಕೃಷ್ಣ ಮಾತನಾಡಿ, ನೀವು ನಮ್ಮ ಶಾಲೆಯಲ್ಲಿ ಪಡೆದಿರುವ ತರಬೇತಿ ನಿಮ್ಮನ್ನು ಉತ್ತಮ ಶಿಕ್ಷಕರನ್ನಾಗಿಸಲು ಪ್ರೇರಣೆಯಾಗಲಿ, ಬೋಧನೆಯಲ್ಲಿ ನೀವು ಸ್ವಂತಿಕೆ ಕಾಯ್ದುಕೊಂಡು ನಿರಂತರ ಅಧ್ಯಯನದ ಮೂಲಕ ಮಕ್ಕಳ ಮನಸ್ಸಿನಲ್ಲಿ ಉಳಿಯುವ ರೀತಿ ನಿಮ್ಮ ಪಠ್ಯ ವಿಷಯದ ಕಲಿಕೆ ಇರಲಿ ಎಂದು ಆಶಿಸಿದರು.

# ವಿವಿಧ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆ

ತುಮಕೂರು

ಜಿಲ್ಲಾಡಳಿತದಿಂದ ಮಾರ್ಚ್ 23ರಂದು ಶ್ರೀ ದೇವರದಾಸಿಮಯ್ಯ ಜಯಂತಿ, ಮಾರ್ಚ್ 28ರಂದು ಶ್ರೀ ಅಗ್ನಿಬನ್ನಿರಾಯಸ್ವಾಮಿ ಜಯಂತಿ ಹಾಗೂ ಮಾರ್ಚ್ 31ರಂದು ಶ್ರೀ ಭಗವಾನ್ ಮಹಾವೀರ ಜಯಂತಿ ಆಚರಣೆ ಕುರಿತಂತೆ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ಪೂರ್ವಭಾವಿ ಸಭೆ ನಡೆಯಿತು.

ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ಅವರು ಸಮುದಾಯದ ಮುಖಂಡರೊಂದಿಗೆ ಚರ್ಚಿಸುತ್ತಾ, ಮಾರ್ಚ್ 23ರಂದು ಬೆಳಿಗ್ಗೆ 10.30 ಗಂಟೆಗೆ ಶ್ರೀ ದೇವರದಾಸಿಮಯ್ಯ ಜಯಂತಿಯನ್ನು ನಗರದ ಕನ್ನಡ ಭವನ ಅಥವಾ ಡಾ. ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ಆಚರಿಸಲು ನಿರ್ಧರಿಸಿದರು.

ಶ್ರೀ ಅಗ್ನಿಬನ್ನಿರಾಯಸ್ವಾಮಿ ಜಯಂತಿಯನ್ನು ಇದೇ 28ರಂದು ಸಂಜೆ 4.30 ಗಂಟೆಗೆ ನಗರದ ಅಗ್ರಹಾರದಲ್ಲಿರುವ ಶ್ರೀ ಕೋಟೆ ಕೊಲ್ಲಾಪುರದಮ್ಮ ಸಮುದಾಯ ಭವನದಲ್ಲಿ ವೇದಿಕೆ ಕಾರ್ಯಕ್ರಮವನ್ನು ನಡೆಸಲು ನಿರ್ಧರಿಸಲಾಯಿತು.

ಕಾರ್ಯಕ್ರಮದ ಪೂರ್ವದಲ್ಲಿ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗದಿಂದ ಶ್ರೀ ಅಗ್ನಿಬನ್ನಿರಾಯಸ್ವಾಮಿಯ ಮೆರವಣಿಗೆ ಹಮ್ಮಿಕೊಳ್ಳಲಾಗಿದ್ದು, ಚಿಕ್ಕಪೇಟೆ ವೃತ್ತ, ಗಾರ್ಡನ್ ರಸ್ತೆ, ಮಾರುತಿ ವೃತ್ತ ಮಾರ್ಗವಾಗಿ ಸಮುದಾಯ ಭವನದವರೆಗೆ ನಡೆಸಲು ತೀರ್ಮಾನಿಸಲಾಯಿತು. ಭಗವಾನ್ ಮಹಾವೀರ ಜಯಂತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಾರ್ಚ್ 31ರಂದು ಬೆಳಿಗ್ಗೆ 10-30 ಗಂಟೆಗೆ ಭಗವಾನ್ ಮಹಾವೀರರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಆಚರಿಸಲು ನಿರ್ಧರಿಸಲಾಯಿತು.

ಕಾರ್ಯಕ್ರಮದಲ್ಲಿ ಜೈನ ಸಮುದಾಯದ ಸದಸ್ಯರು ಸೇರಿದಂತೆ ಇತರ ಸಮುದಾಯಗಳ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕ್ರಮ ಕೈಗೊಳ್ಳಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು. ಜಯಂತಿ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಆಹ್ವಾನ ಪತ್ರಿಕೆಗಳನ್ನು ನಿಯಮಾನುಸಾರ ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು. ನುರಿತ ಉಪನ್ಯಾಸಕರಿಂದ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಮುದಾಯದಲ್ಲಿ ಗಣನೀಯ ಸೇವೆ ಸಲ್ಲಿಸಿದ ಐದು ಮಂದಿ ಸಾಧಕರನ್ನು ಗುರುತಿಸಿ ಸನ್ಮಾನಿಸಲು ಕ್ರಮವಹಿಸುವಂತೆ ಸೂಚನೆ ನೀಡಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು.ಮಿರ್ಜಿ ಸೇರಿದಂತೆ ಸಮುದಾಯದ ಮುಖಂಡರು ಹಾಜರಿದ್ದರು.

# ಅಧಿಕಾರಿಗಳ 'ಕಣ್ಣಾಮುಚ್ಚಾಲೆ' ಆಟಕ್ಕೆ ಸಾರ್ವಜನಿಕರ ಛೀಮಾರಿ

ಶ್ರೀನಿವಾಸಪುರ

ಪಟ್ಟಣದ ರಾಮಕೃಷ್ಣ ಬಡಾವಣೆಯಲ್ಲಿ ಸಾರ್ವಜನಿಕ ಚರಂಡಿಯನ್ನು ಅತಿಕ್ರಮಿಸಿ ನೂತನ ಮನೆಯ ಕಾಂಪೌಂಡ್ ಗೋಡೆ ನಿರ್ಮಿಸಿರುವುದಕ್ಕೆ ಸ್ಥಳೀಯ ನಿವಾಸಿಗಳಿಂದ ವ್ಯಾಪಕ ವಿರೋಧ ವ್ಯಕ್ತವಾಗಿದೆ. ಪುರಸಭೆ ಅಧಿಕಾರಿಗಳ ಮೂಗಿನ ನೇರಕ್ಕೇ ಅಕ್ರಮ ನಡೆಯುತ್ತಿದ್ದರೂ ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ತೀವ್ರ ಆಕ್ರೋಶ ಹೊರಹಾಕಿದ್ದಾರೆ.

ನಿಯಮ ಗಾಳಿಗೆ ತೂರಿದ ಉಪನ್ಯಾಸಕ: ಬಡಾವಣೆಯ ನಿವಾಸಿ ಹಾಗೂ ಉಪನ್ಯಾಸಕರಾದ ಮಂಜುನಾಥ್ ಎಂಬುವವರು ತಮ್ಮ ನೂತನ ಮನೆಯ ಕಾಂಪೌಂಡ್ ಗೋಡೆಯನ್ನು ನಿಯಮಬಾಹಿರವಾಗಿ ಚರಂಡಿಯ ಮೇಲೆಯೇ ನಿರ್ಮಿಸಿದ್ದಾರೆ ಎನ್ನಲಾಗಿದೆ. ಇದರಿಂದಾಗಿ ಚರಂಡಿಯ ನೀರು ಸರಾಗವಾಗಿ ಹರಿಯಲು ಅಡ್ಡಿಯಾಗುತ್ತಿದ್ದು, ಇಡೀ ಪ್ರದೇಶದಲ್ಲಿ ದುರ್ನಾತ ಬೀರುತ್ತಿದೆ ಎಂದು ಜನರು ದೂರಿದ್ದಾರೆ.

ತನಿಖೆಗೆ ಆಗ್ರಹ: ಸಾರ್ವಜನಿಕ ಸ್ವತ್ತಾದ ಚರಂಡಿ ಮೇಲೆ ಗೋಡೆ ನಿರ್ಮಿಸಲು ಅನುಮತಿ ನೀಡಿದವರು ಯಾರು? ಎಂಬ ಪ್ರಶ್ನೆ ಈಗ ಮೂಡಿದೆ. "ಅಕ್ರಮ ನಿರ್ಮಾಣಕ್ಕೆ ಕುಮ್ಮಕ್ಕು ನೀಡಿದ ಅಧಿಕಾರಿಗಳು ಮತ್ತು ಮನೆ ಮಾಲೀಕರ ವಿರುದ್ಧ ತಕ್ಷಣವೇ ಶಿಸ್ತುಕ್ರಮ ಕೈಗೊಳ್ಳಬೇಕು ಹಾಗೂ ಅತಿಕ್ರಮಣ ತೆರವುಗೊಳಿಸಿ ಸುಗಮ ನೀರಿನ ಹರಿವಿಗೆ ವ್ಯವಸ್ಥೆ ಮಾಡಬೇಕು," ಎಂದು ನಾಗರಿಕರು ಆಗ್ರಹಿಸಿದ್ದಾರೆ.

# ಒಡಿಶಾ ಶಾಸಕರನ್ನು ನಾನು ಕರೆಸಿಲ್ಲ: ಡಿಸಿಎಂ

ಬೆಂಗಳೂರು

"ನಾನು ಒಡಿಶಾ ಶಾಸಕರನ್ನು ಕರೆಸಿಲ್ಲ, ಅವರೇ ಬೆಂಗಳೂರಿಗೆ ಬಂದಿದ್ದಾರೆ. ಅಧಿವೇಶನ ಕಲಾಪ ಮುಗಿದ ಬಳಿಕ ನಾನು ಹೋಗಿ ಅವರನ್ನು ಭೇಟಿ ಮಾಡುತ್ತೇನೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಎಂದು ತಿಳಿಸಿದರು.

ಸದಾಶಿವನಗರ ನಿವಾಸದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶುಕ್ರವಾರ ಪ್ರತಿಕ್ರಿಯೆ ನೀಡಿದರು. ಒಡಿಶಾ ಶಾಸಕರು ರಾಮನಗರದ ರೆಸಾರ್ಟ್ ನಲ್ಲಿದ್ದು, ನೀವೇ ಅವರನ್ನು ಕರೆಸಿದ್ದೀರಿ ಎಂದು ಕೇಳಿದಾಗ ಅವರು ಈ ರೀತಿ ಉತ್ತರಿಸಿದರು.

"ಅವರು ಯಾವ ಕಾರಣಕ್ಕೆ ಬಂದಿದ್ದಾರೆ ಎಂದು ಗೊತ್ತಿಲ್ಲ. ಆ ರಾಜ್ಯದ ನಮ್ಮ ಪಿಸಿಸಿ ಅಧ್ಯಕ್ಷರು ಕರೆ ಮಾಡಿ ನಮ್ಮ ಶಾಸಕರು ಬರುತ್ತಿದ್ದಾರೆ ಎಂದು ಕೇಳಿದರು. ಪಕ್ಷದ ವಿಚಾರ ಇರಬೇಕು, ನಾನೇ ಹೋಗಿ ಭೇಟಿ ಮಾಡುವೆ ಎಂದು ಹೇಳಿದ್ದೇನೆ. ಅವರಿಗೆ ಮೈಸೂರು ನೋಡುವ ಆಸೆ ಇದೆ. ಅವರು ನಾವು ಬರುತ್ತೇವೆ ಎಂದು ತಿಳಿಸಿದಾಗ, ನಾನು ಬನ್ನಿ ಎಂದು ಹೇಳಿದೆ. ಆರಾಮಾಗಿ ಇರುವ ಜಾಗ ಬೇಕು ಎಂದು ಕೇಳಿದರು, ಹೀಗಾಗಿ ಅವರಿಗೆ ವ್ಯವಸ್ಥೆ ಮಾಡಿದ್ದೇವೆ" ಎಂದು ಹೇಳಿದರು.



ರಾಜ್ಯ ಸಭೆ ಚುನಾವಣೆಯಲ್ಲಿ ಅಡ್ಡಮತದಾನವಾಗದಂತೆ ತಡೆಯಲು ನಿಮಗೆ ಪಕ್ಷ ಟಾಸ್ಕ್ ನಿಡಿದೆಯೇ ಎಂದು ಕೇಳಿದಾಗ, "ಪಕ್ಷ ಹೇಳಿದ್ದನ್ನು ಮಾಡಬೇಕು. ಎಲ್ಲಾ ರಾಜ್ಯಗಳಲ್ಲೂ ಈ ರೀತಿ ನಡೆಯುತ್ತಿರುತ್ತದೆ. ಇದು ಹೊಸತೇನಲ್ಲ. ನನ್ನ ಭೇಟಿಗೆ ಸಮಯ ಕೇಳಿದರು. ನಾನು ಅಧಿವೇಶನ ನಡೆಯುತತಿದೆ. ಇಲ್ಲಿಗೆ ಬರಬೇಡಿ ಕಲಾಪ ಮುಗಿಸಿಕೊಂಡು ನಾನೇ ಬರುತ್ತೇನೆ ಎಂದು ಹೇಳಿರುವೆ" ಎಂದು ಹೇಳಿದೆ.

ಆಪರೇಷನ್ ಕಮಲ ತಪ್ಪಿಸಲು ಈ ಪ್ರಯತ್ನವೇ ಎಂದು ಕೇಳಿದಾಗ, "ನನಗೆ ಈ ಬಗ್ಗೆ ಗೊತ್ತಿಲ್ಲ. ಬೆಂಗಳೂರು ಸುರಕ್ಷಿತ ಹೀಗಾಗಿ ಅವರು ಇಲ್ಲಿಗೆ ಬಂದು ವೀಕ್ಷಣೆ ಮಾಡಬೇಕು ಎಂದು ಹೇಳಿದರು, ನಾನು ಅವರನ್ನು ಭೇಟಿಯಾಗಿಲ್ಲ. ಅವರು ನಮ್ಮ ಸಹೋದ್ಯೋಗಿಗಳು, ಅವರು ಬರುತ್ತಾರೆ ಎಂದಾಗ ಹಾಗೂ ಪಿಸಿಸಿ ಅಧ್ಯಕ್ಷರು ನನಗೆ ಈ ವಿಚಾರವಾಗಿ ಕೇಳಿದಾಗ, ನಾನು ಬನ್ನಿ ಎಂದು ಹೇಳಿರುವೆ. ಅವರನ್ನು ನೋಡಿಕೊಳ್ಳುವುದು ನಮ್ಮ ಕರ್ತವ್ಯ. ನಾನು ಇದನ್ನು ವಿಲಾಸ್ ರಾವ್ ದೇಶಮುಖ್ ಅವರ ಸರ್ಕಾರದಸಮಯದಿಂದಲೂ ಮಾಡಿಕೊಂಡು ಬರುತ್ತಿರುವೆ. ಅಹ್ಮದ್ ಪಟೇಲ್ ಅವರ ರಾಜ್ಯಸಭೆ ಚುನಾವಣೆ, ಮಧ್ಯಪ್ರದೇಶ ಸೇರಿದಂತೆ ಅನೇಕ ಬಾರಿ ಈ ಕೆಲಸ ಮಾಡಿದ್ದೇನೆ" ಎಂದರು.

ಪಕ್ಷಕ್ಕೆ ಈ ರೀತಿ ಟ್ರಬಲ್ ಆದಾಗೆಲ್ಲಾ ನೀವೇ ತಲೆ ಕೊಡುತ್ತೀರಿ, ನಿಮ್ಮ ಸಮಸ್ಯೆ ಬಗೆಹರಿಯುತ್ತಿಲ್ಲವಲ್ಲ ಎಂದು ಕೇಳಿದಾಗ, "ಕಾಲ ನಿರ್ಣಯ ಮಾಡುತ್ತದೆ" ಎಂದು ತಿಳಿಸಿದರು.

ಪಕ್ಷ ಈ ವಿಚಾರದಲ್ಲಿ ನಿಮಗೆ ಜವಾಬ್ದಾರಿ ನೀಡಿದೆಯೇ ಎಂದು ಕೇಳಿದಾಗ, "ಯಾವುದೇ ರೀತಿಯ ಜವಾಬ್ದಾರಿ ನೀಡಿಲ್ಲ. ನಮ್ಮ ಪಿಸಿಸಿ ಅಧ್ಯಕ್ಷರು ಶಾಸಕರು ಬರುತ್ತಿದ್ದಾರೆ ಎಂದು ಹೇಳಿದ್ದು, ನೀವು ನಮ್ಮ ಅತಿಥಿಗಳು ಬನ್ನಿ" ಎಂದು ತಿಳಿಸಿದರು.

ಸಚಿವ ಸಂಪುಟ ಪುನಾರಚನೆಗೆ ಒತ್ತಡ ಹೆಚ್ಚುತ್ತಿರುವ ಬಗ್ಗೆ ಕೇಳಿದಾಗ, "ಮಂತ್ರಿಯಾಗುವ ಆಸೆ ಇರುತ್ತದೆ. ನಾನು ಮೊದಲ ಬಾರಿಗೆ ಮಂತ್ರಿಯಾಗಿದ್ದೆ. ಈಗ ನಮಗೆ ವಯಸ್ಸಾಗಿದೆ. ಹಿರಿಯ ನಾಗರೀಕರಾಗಿದ್ದೇವೆ. ಅವರಿಗೂ ಆಸೆ ಇದೆ" ಎಂದರು. ಬಜೆಟ್ ಕುರಿತಾಗಿ ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಅವರ ಅಸಮಾಧಾನ ಹೇಳಿಕೆ ಬಗ್ಗೆ ಕೇಳಿದಾಗ, "ಅವರು ಜಿಲ್ಲಾ ನ್ಯಾಯಾಲಯ ಬೇಕು ಎಂದು ಕೇಳಿದ್ದರು, ನಾವು ಅದನ್ನು ನೀಡಿದ್ದೇವೆ. ಬೇಕಾದಷ್ಟು ಕೆಲಸವನ್ನು ನೀಡಿದ್ದೇವೆ. ಅವುಗಳನ್ನು ಘೋಷಣೆ ಮಾಡುತ್ತೇವೆ" ಎಂದು ತಿಳಿಸಿದರು.

# ‘ಅಡಿಗೆ ಅನಿಲ: ಸಮಸ್ಯೆಯಾಗದಂತೆ ಕ್ರಮ’

ಬೆಂಗಳೂರು

ಅಡಿಗೆ ಅನಿಲ ಸರಬರಾಜು ಕುರಿತು ಉಂಟಾಗಿರುವ ವಿಚಾರಗಳನ್ನು ಚರ್ಚಿಸಲು ಹಾಗೂ ಮುಂದಿನ ದಿನಗಳಲ್ಲಿ ಯಾವುದೇ ತೊಂದರೆ ಉಂಟಾಗದಂತೆ ಕ್ರಮ ಕೈಗೊಳ್ಳಲು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ ಅವರ ನೇತೃತ್ವದಲ್ಲಿ ವಿಧಾನಸೌಧದಲ್ಲಿ ಮಹತ್ವದ ಸಭೆ ನಡೆಯಿತು.

ಸಭೆಯಲ್ಲಿ ಇಂಡಿಯನ್ ಆಯಿಲ್ ಕಾರ್ಪೋರೇಷನ್, ಭಾರತ ಪೆಟ್ರೋಲಿಯಂ, ಹಿಂದೂಸ್ತಾನ್ ಪೆಟ್ರೋಲಿಯಂ ಹಾಗೂ



ಗೇಲ್ ಸಂಸ್ಥೆಗಳ ಅಧಿಕಾರಿಗಳು ಮತ್ತು ಹೊಟೇಲ್ ಮಾಲಿಕರ ಸಂಘದ ಅಧ್ಯಕ್ಷರು ಭಾಗವಹಿಸಿದ್ದರು.

ಅಡಿಗೆ ಅನಿಲ ಸರಬರಾಜು ವ್ಯವಸ್ಥೆಯನ್ನು ಸುಗಮಗೊಳಿಸುವುದು ಹಾಗೂ ಗ್ರಾಹಕರಿಗೆ ಯಾವುದೇ ತೊಂದರೆ ಆಗದಂತೆ ಕ್ರಮ ಕೈಗೊಳ್ಳುವ ಬಗ್ಗೆ ಸಭೆಯಲ್ಲಿ ಸಮಗ್ರ ಚರ್ಚೆ ನಡೆಯಿತು.

ಈ ಸಂದರ್ಭದಲ್ಲಿ ಸರ್ಕಾರದ ಕಾರ್ಯದರ್ಶಿ ಕನಗವಲ್ಲಿ, ಆಯುಕ್ತ ರವಿಕುಮಾರ್, ಸಚಿವರ ಆಪ್ತ ಕಾರ್ಯದರ್ಶಿ ಡಾ. ಹೆಚ್. ನಟರಾಜ್ ಉಪಸ್ಥಿತರಿದ್ದರು. ಜೊತೆಗೆ ಅನಿಲ ಕಂಪನಿಗಳ ಅಧಿಕಾರಿಗಳಾದ ನೀರಾ ಸಿಂಗ್, ಅರುಂದಿ ಗೊಯಲ್, ದಿವ್ಯ, ಮುರಳಿ ಚಾರ್, ಸುಬ್ರತ್ ಚಟರ್ಜಿ, ರಾಜೇಶ್ ಸಿಂಗ್, ಸಂಜಯ್ ಕುಮಾರ್ ಸಿಂಗ್, ಪ್ರಣಯ ದೇವನಾಗನ್, ರವಿಕುಮಾರ್ ತಂಡಲ್, ಪ್ರಸೂನ್ ಮಾಲಿ ಹಾಗೂ ನಿಗಮದ ಪ್ರಧಾನ ವ್ಯವಸ್ಥಾಪಕರಾದ ಮಂಜುನಾಥ್ ಸೇರಿದಂತೆ ಹಲವರು ಸಭೆಯಲ್ಲಿ ಭಾಗವಹಿಸಿದರು.

ಅಡಿಗೆ ಅನಿಲ ಪೂರೈಕೆಯಲ್ಲಿ ಯಾವುದೇ ಅಡಚಣೆ ಉಂಟಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ಸಭೆಯಲ್ಲಿ ತಿಳಿಸಿದ್ದಾರೆ.

# ‘ಭಿಕ್ಷಾಟನೆ ಮುಕ್ತ ಮಾಡಲು ಕ್ರಮ’

ಬೆಂಗಳೂರು

ಬೆಂಗಳೂರು ನಗರ ಒಳಗೊಂಡಂತೆ ಸಂಪೂರ್ಣ ರಾಜ್ಯದಲ್ಲಿ ಭಿಕ್ಷಾಟನೆ ಮುಕ್ತ ಮಾಡಲು ಕ್ರಮ ವಹಿಸಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ವಿಧಾನಪರಿಷತ್‌ನಲ್ಲಿ ತಿಳಿಸಿದರು.

ಪ್ರಶ್ನೋತ್ತರ ಅವಧಿಯಲ್ಲಿ ಶಾಸಕ ಕೆ.ಗೋವಿಂದರಾಜು ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಭಿಕ್ಷಾಟನೆ ಹಿಂದೆ ಮಾಫಿಯಾ ಇದ್ದರೆ ಅದನ್ನು ನಿರ್ಬಂಧಿಸಲು ಕಠಿಣ ಕ್ರಮ ಕೈಗೊಳ್ಳಲಾಗುವುದು. ನಮ ಹಾಗೂ ಪೊಲೀಸ್ ಇಲಾಖೆಯವರೊಡನೆ ಚರ್ಚಿಸಿ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.


ರಾಜ್ಯದಲ್ಲಿ ಕೇಂದ್ರ ಪರಿಹಾರ ಸಮಿತಿಯ ಅಧೀನದಲ್ಲಿ ಬೆಂಗಳೂರು ಸೇರಿದಂತೆ ಒಟ್ಟು 15 ನಿರಾಶ್ರಿತರ ಪರಿಹಾರ ಕೇಂದ್ರಗಳಿವೆ. 2025–26ನೇ ಸಾಲಿನಲ್ಲಿ 5,649 ಮಂದಿಯನ್ನು ಬಂಧಿಸಿ 5,402 ಮಂದಿಯನ್ನು ಬಿಡುಗಡೆ ಮಾಡಲಾಗಿದೆ. ಈ ಸಾಲಿನಲ್ಲಿ ಭಿಕ್ಷುಕರ ಪುನರ್ ವಸತಿಗಾಗಿ 69.07 ಕೋಟಿ ವೆಚ್ಚ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಬೆಂಗಳೂರು ನಗರಕ್ಕೆ ಹೊರರಾಜ್ಯದವರು ವಿವಿಧ ಕಾರಣಗಳಿಂದಾಗಿ ಹೆಚ್ಚು ಬರುವುದರಿಂದ ಭಿಕ್ಷುಕರು ಹೆಚ್ಚಾಗಲು ಕಾರಣವಾಗಿದೆ. ಬೆಂಗಳೂರನ್ನು ಭಿಕ್ಷಾಟನೆ ಮುಕ್ತ ನಗರವನ್ನಾಗಿ ಮಾಡಲು ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಕ್ರಮ ವಹಿಸಲಾಗಿದೆ. ಭಿಕ್ಷಾಟನೆ ವೃತ್ತಿಗೆ ಮತ್ತೆ ಮರಳಬಾರದೆಂದು ವಿವಿಧ ವೃತ್ತಿ ತರಬೇತಿಯನ್ನು ಪುನರ್ ವಸತಿ ಕೇಂದ್ರದಲ್ಲಿ ನೀಡಲಾಗುತ್ತಿದೆ ಎಂದು ಹೇಳಿದರು.

ಮಕ್ಕಳೊಂದಿಗೆ ಭಿಕ್ಷಾಟನೆ ಮಾಡುವುದನ್ನು ನಿರ್ಮೂಲನೆ ಮಾಡಲು ಭಿಕ್ಷಾಟನೆಯಲ್ಲಿ ಮಕ್ಕಳೊಂದಿಗೆ ತೊಡಗಿರುವ ಮಹಿಳೆಯರನ್ನು ಬಂಧಿಸಿ ಕಾನೂನು ರೀತಿ ಕ್ರಮ ಜರುಗಿಸಲಾಗುತ್ತಿದೆ. 2025–26ನೇ ಸಾಲಿನಲ್ಲಿ 936 ಮಂದಿ ವಿವಿಧ ತರಬೇತಿಗಳನ್ನು ಪಡೆದಿದ್ದಾರೆ. 1,026 ಮಂದಿಯನ್ನು ಮರಳಿ ಅವರ ಕುಟುಂಬಗಳಿಗೆ ವಾಪಸ್ ಕಳುಹಿಸಲಾಗಿದೆ ಎಂದರು.

ನಿರಾಶ್ರಿತರ ಒಳಿತಿಗಾಗಿ ಮಾನಸಿಕ ಆರೋಗ್ಯ ಕೇಂದ್ರ, ಡಾ.ಬಿ.ಆರ್.ಅಂಬೇಡ್ಕರ್ ತರಬೇತಿ ಕೇಂದ್ರ ಮತ್ತು ಸಿದ್ಧ ಉಡುಪು ಘಟಕವನ್ನು ಸ್ಥಾಪಿಸಲು ಕೇಂದ್ರ ಪರಿಹಾರ ಸಮಿತಿಗೆ ಸೂಚಿಸಲಾಗಿದೆ. ಅಲ್ಲದೆ ಸಾಮಾಜಿಕ ಭದ್ರತೆಗಾಗಿ ಆಧಾರ್‌ಕಾರ್ಡ್, ವೃದ್ಧಾಪ್ಯವೇತನ, ವಿಕಲಚೇತನ ವೇತನ, ವಿಧವಾ ವೇತನ ಒದಗಿಸಲು ಸಂಬಂಧಿತ ಇಲಾಖೆಗಳೊಂದಿಗೆ ಮಂಜೂರಾತಿಗಾಗಿ ಕ್ರಮ ವಹಿಸಲಾಗುತ್ತಿದೆ ಎಂದು ಅವರು ಹೇಳಿದರು.

# ಪತ್ರಕರ್ತರಿಗೆ ವೃತ್ತಿಧರ್ಮ ಬಹಳ ಮುಖ್ಯ: ಸಿಎಂ




ಬೆಂಗಳೂರು

ನಾವು ಯಾರ ಪರವಾಗಿ ಇದ್ದೇವೆ ಎನ್ನುವ ಸ್ಪಷ್ಟ ಅರಿವು ಮಾಧ್ಯಮದವರಿಗೆ ಇರಬೇಕು. ಸರ್ಕಾರ ಕಟ್ಟ ಕಡೆಯ ಮನುಷ್ಯರ ಪರವಾಗಿ ಇದೆಯಾ ಎನ್ನುವ ಬಗ್ಗೆ ಗಮನ ಹರಿಸಿ, ವೃತ್ತಿಧರ್ಮವನ್ನು ಬಹಳ ಮುಖ್ಯವಾಗಿ ಕಾಪಾಡಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಬ್ಯಾಂಕ್ವೆಟ್ ಹಾಲ್ ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಆಯ್ಕೆಯಾದ ಪತ್ರಕರ್ತರಿಗೆ "2025ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳನ್ನು" ವಿತರಿಸಿ, ಸನ್ಮಾನಿಸಿ ಮಾತನಾಡಿದರು.

ಪತ್ರಕರ್ತರೂ ಆಗಿದ್ದ ಮಹಾತ್ಮಗಾಂಧಿಯವರ ಮಾತಿನಂತೆ ಸರ್ವೋದಯ, ಅಂತ್ಯೋದಯದ ಪರವಾಗಿ ಪತ್ರಕರ್ತರು ಇರಬೇಕು. ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳಾದರೂ ಇನ್ನೂ ಅಸಮಾನತೆ ಕಾಣುತ್ತಿದ್ದೇವೆ. ಅಂಬೇಡ್ಕರ್ ಅವರೂ ಪತ್ರಕರ್ತರಾಗಿದ್ದರು.ಈ ಅಸಮಾನತೆ ಹೋಗದೆ ಹೋದರೆ ಸ್ವಾತಂತ್ರ್ಯಕ್ಕೆ ಅರ್ಥವಿಲ್ಲ ಎನ್ನುವ ಮಾತನ್ನು ಅಂಬೇಡ್ಕರ್ ಹೇಳಿದ್ದನ್ನು ಮುಖ್ಯಮಂತ್ರಿಗಳು ಉಲ್ಲೇಖಿಸಿದರು.

ನಾನು ನಿತ್ಯ ದಿನಪತ್ರಿಕೆಗಳನ್ನು ಓದಿದ ಬಳಿಕವೇ ಇತರೆ ಕಾರ್ಯಗಳಿಗೆ ಮುಂದಾಗುತ್ತೇನೆ. ಪತ್ರಿಕೆಗಳು ಇನ್ನೂ ಹೆಚ್ಚಿನ ವಿಶ್ವಾಸಾರ್ಹತೆಯನ್ನು ಉಳಿಸಿಕೊಂಡಿವೆ. ನಾನು ಟಿವಿ ನೋಡುವುದು ಕಡಿಮೆ ಎಂದರು.

ಈಗ ಊಹಾ ಪತ್ರಿಕೋದ್ಯಮದ ಹಾವಳಿ ಹೆಚ್ಚುತ್ತಿದೆ. ಸತ್ಯ ಬರೆಯುವ ಮತ್ತು ಸಂಶೋಧನೆ ನಡೆಸಿ ಬರೆಯುವ ಪತ್ರಕರ್ತರ ಸಂಖ್ಯೆ ಸುಳ್ಳು ಬರೆಯುವ ಪತ್ರಕರ್ತರ ಸಂಖ್ಯೆಗಿಂತ ಹೆಚ್ಚಾಗಬೇಕು ಎಂದು ಕರೆ ನೀಡಿದರು.

ಒಂದು ಗುಂಪು ಅಥವಾ ಒಂದು ಸಿದ್ಧಾಂತಕ್ಕೆ ಮಾರು ಹೋಗದೆ ವಾಸ್ತವಾಂಶಕ್ಕೆ ಕನ್ನಡಿ ಹಿಡಿಯಬೇಕು ಎಂದರು. ಹೊಸ ತಂತ್ರಜ್ಞಾನದ ಜೊತೆಗೆ ಮಾಧ್ಯಮ ರಂಗ ಮತ್ತು ಪತ್ರಕರ್ತರೂ ತಮ್ಮನ್ನು ತಾವು ಉನ್ನತೀಕರಿಸಿಕೊಳ್ಳಬೇಕು. ಹೊಸ ಸವಾಲುಗಳಿಗೆ ತಮ್ಮನ್ನು ತಾವು ಸಜ್ಜುಗೊಳಿಸಿಕೊಂಡು ಹದಗೊಳ್ಳಬೇಕು ಎಂದರು.

ಹಿರಿಯ ಸಾಹಿತಿ ಹಂಪನಾ, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್, ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೆಷಾ ಖಾನುಂ, ವಾರ್ತಾ ಇಲಾಖೆ ಆಯುಕ್ತರಾದ ಹೇಮಂತ್ ನಿಂಬಾಳ್ಕರ್, ನಾಟಕ ಅಕಾಡೆಮಿ ಅಧ್ಯಕ್ಷರಾದ ನಾಗರಾಜಮೂರ್ತಿ ಇದ್ದರು.

# ಚಿನ್ನ ಅಡಮಾನವಿಟ್ಟ ಸಾಲಗಾರರ ರಕ್ಷಣಾ ವಿಧೇಯಕ–2025 ಮಂಡನೆ

ಬೆಂಗಳೂರು

ಸಾರ್ವಜನಿಕ ಹಿತದೃಷ್ಟಿಯಿಂದ ಕಷ್ಟ ಸಂದರ್ಭದಲ್ಲಿ ಚಿನ್ನ ಅಡವಿಟ್ಟು ಸಾಲ ಪಡೆಯುವವರ ಹಿತರಕ್ಷಣೆ ಉದ್ದೇಶದ ಕರ್ನಾಟಕ ಚಿನ್ನ ಅಡಮಾನವಿಟ್ಟ ಸಾಲಗಾರರ ರಕ್ಷಣಾ ವಿಧೇಯಕ–2025 ಎಂಬ ಖಾಸಗಿ ಸದಸ್ಯರ ವಿಧೇಯಕವನ್ನು ಶಾಸಕ ರಮೇಶ್‌ಬಾಬು ವಿಧಾನಪರಿಷತ್‌ನಲ್ಲಿ ಮಂಡಿಸಿದರು.



ವಿಧೇಯಕ ಮಂಡಿಸಿ ಮಾತನಾಡಿದ ಶಾಸಕರು, ಖಾಸಗಿ ಹಣಕಾಸು ಸಂಸ್ಥೆಗಳು ಚಿನ್ನವನ್ನು ಅಡವಿಟ್ಟುಕೊಂಡು ಸಾಲ ನೀಡುವಾಗ ಮೋಸ ಮಾಡುವ ನಿದರ್ಶನವಿದೆ. ಚಿನ್ನದ ಮಾರುಕಟ್ಟೆ ಮೌಲ್ಯದಲ್ಲಿ ಅರ್ಧಕ್ಕಿಂತಲೂ ಕಡಿಮೆ ಕೊಡಲಾಗುತ್ತದೆ. ಸಾಲಗಾರರಿಗೆ ಸರಿಯಾದ ಮಾಹಿತಿ ದೊರೆಯದೆ ವಂಚನೆಗೊಳಗಾಗುತ್ತಾರೆ.

ಸಾಲ ಮರು ಪಾವತಿಸದ ಸಾಲಗಾರರ ಚಿನ್ನವನ್ನು ಮುಟ್ಟುಗೋಲು ಹಾಕಲಾಗುತ್ತದೆ. ಚಿನ್ನ ಅಡವಿಟ್ಟವರಿಗೆ ಮಾರುಕಟ್ಟೆ ಮೌಲ್ಯದ ಶೇ.25 ರಷ್ಟು ಸಿಗುತ್ತದೆ. ಅಡವಿಟ್ಟ ಚಿನ್ನ ಹರಾಜು ಹಾಕುವ ಪ್ರಕ್ರಿಯೆಯು ಪಾರದರ್ಶಕವಾಗಿರುವುದಿಲ್ಲ. ಬಡ್ಡಿ ವಿಧಿಸುವುದು ಸರಿಯಿರುವುದಿಲ್ಲ, ತೂಕದಲ್ಲಿ ಮೋಸವಾಗುತ್ತದೆ. ಸಾಲಗಾರರ ಶೋಷಣೆ ಮಾಡಲಾಗುತ್ತದೆ ಎಂದು ವಿವರಿಸಿದರು.

ಅಡಮಾನವಿಟ್ಟ ಚಿನ್ನ ಹರಾಜು ಹಾಕುವ ಮೊದಲು 180 ದಿನಗಳ ಕನಿಷ್ಠ ನೋಟಿಸಿನ ಅವಧಿಯನ್ನು ಖಚಿತಪಡಿಸಿಕೊಳ್ಳಬೇಕು. ಪಾರದರ್ಶಕ ಮೌಲ್ಯಮಾಪನ ಸೂಕ್ತವಾದ ಸಂವಹನ ಮತ್ತು ಬಿಡಿಸಿಕೊಳ್ಳುವಿಕೆಗೆ ಅವಕಾಶವನ್ನು ಕಡ್ಡಾಯಗೊಳಿಸುವ ಉದ್ದೇಶವನ್ನು ಈ ವಿಧೇಯಕ ಒಳಗೊಂಡಿದೆ. ಪರವಾನಗಿ ಪಡೆದವರಿಂದ ಮತ್ತು ಮೇಲ್ವಿಚಾರಣೆಯ ಕಾರ್ಯವಿಧಾನಗಳ ಮೂಲಕ ಹರಾಜು ಪ್ರಕ್ರಿಯೆಯನ್ನು ನಿಯಂತ್ರಿಸಬೇಕು.

ಸಾಲಗಾರರ ರಕ್ಷಣಾ ಮಾನದಂಡಗಳ ಉಲ್ಲಂಘನೆಗಾಗಿ ದಂಡ ವಿಧಿಸಬೇಕು. ಸಾಲ ನೀಡುವ ಕ್ಷೇತ್ರದಲ್ಲಿ ನ್ಯಾಯಯುತ ವಾಣಿಜ್ಯ ಪದ್ಧತಿಗಳನ್ನು ಖಚಿತಪಡಿಸಿಕೊಳ್ಳುವಾಗ ಖಾಸಗಿ ಹಣಕಾಸು ಸಂಸ್ಥೆಗಳಿಂದ ಮತ್ತು ಬ್ಯಾಂಕೇತರ ಹಣಕಾಸು ಕಂಪನಿಗಳಿಂದ ಆಗುವ ಶೋಷಣೆಯಿಂದ ಬಡ ಮತ್ತು ಮಧ್ಯಮ ವರ್ಗದ ಸಾಲಗಾರರ ಹಿತಾಸಕ್ತಿಗಳನ್ನು ರಕ್ಷಿಸುವ ಗುರಿಗಳನ್ನು ಈ ವಿಧೇಯಕ ಒಳಗೊಂಡಿದೆ ಎಂದರು.ಈ ವಿಧೇಯಕವನ್ನು ಮುಂದಿನ ಸಂದರ್ಭದಲ್ಲಿ ಚರ್ಚೆಗೆ ಪರಿಗಣಿಸುವುದಾಗಿ ಸಭಾಪತಿ ಬಸವರಾಜ ಹೊರಟ್ಟಿಯವರು ತಿಳಿಸಿದರು.

# ಹೋಟೆಲ್‌ನವರು ತಾಳ್ಮೆಯಿಂದಿರಿ: ಸಚಿವ ಕೆಎಚ್

ಬೆಂಗಳೂರು



ಆಸ್ಪತ್ರೆಗಳಿಗೆ, ವಿದ್ಯಾರ್ಥಿ ನಿಲಯಗಳಿಗೆ ವಾಣಿಜ್ಯ ಬಳಕೆಯ ಅನಿಲದ ಸಿಲಿಂಡರ್‌ಗಳನ್ನು ಒದಗಿಸಲಾಗುವುದು. ಹೋಟೆಲ್‌ನವರು ಇನ್ನೂ ಒಂದು ವಾರ ತಾಳೆಯಿಂದ ಇರಬೇಕಾಗುತ್ತದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ ವಿಧಾನಪರಿಷತ್‌ನಲ್ಲಿ ತಿಳಿಸಿದರು.

ಶೂನ್ಯ ವೇಳೆಯಲ್ಲಿ ಆಡಳಿತ ಪಕ್ಷದ ಸದಸ್ಯರಾದ ಐವಾನ್ ಡಿಸೋಜ ಹಾಗೂ ಎಂ.ನಾಗರಾಜ ಯಾದವ್ ಅವರು ಮಾಡಿದ ಪ್ರಸ್ತಾಪಕ್ಕೆ ಸಚಿವರು ಇಂದು ಸಂಬಂಧಪಟ್ಟ ಅಧಿಕಾರಿಗಳು ಹಾಗೂ ತೈಲ ಕಂಪನಿಗಳ ಅಧಿಕಾರಿಗಳ ಜೊತೆ ಸಭೆ ನಡೆಸಿ ಸಲಹೆ ಸೂಚನೆಗಳನ್ನು ನೀಡಲಾಗಿದೆ. ತಕ್ಷಣಕ್ಕೆ ವಾಣಿಜ್ಯ ಬಳಕೆ ಅನಿಲದ ಪೂರೈಕೆ ಸಮಸ್ಯೆಯಿದ್ದು, ಒಂದು ವಾರದ ಬಳಿಕ ಬಗೆಹರಿಯಲಿದೆ ಎಂದರು.

ಹೀಗಾಗಿ ಅಗತ್ಯವಿರುವಷ್ಟು ಅಡುಗೆ ತಯಾರು ಮಾಡಬೇಕು. ಉಳಿದಂತೆ ಎಲೆಕ್ಟ್ರಿಕ್ ಒಲೆ ಬಳಕೆ ಮಾಡಿಕೊಳ್ಳಬೇಕು ಎಂದರು. ಈಗಾಗಲೇ 2 ಹಡಗುಗಳು ಬಂದಿದ್ದು, ಇನ್ನೂ 10 ಹಡಗುಗಳು ಬರುತ್ತಿವೆ. ಕಾಳಸಂತೆಯಲ್ಲಿ ಅನಿಲದ ಸಿಲಿಂಡರ್‌ಗಳು ಮಾರಾಟವಾಗದಂತೆ ಎಚ್ಚರಿಕೆ ವಹಿಸಲು ಹಾಗೂ ತಕ್ಷಣ ಕ್ರಮ ಕೈಗೊಳ್ಳಲು ಇಲಾಖಾಧಿಕಾರಿಗಳಿಗೆ ಸೂಚಿಸಲಾಗಿದೆ.

ಸದ್ಯಕ್ಕೆ ವಾಣಿಜ್ಯ ಬಳಕೆಯ ಅನಿಲದ ಸಿಲಿಂಡರ್ ದಾಸ್ತಾನು ಇಲ್ಲ. ತುರ್ತು ಕಾರ್ಯಗಳಿಗೆ ವಾಣಿಜ್ಯ ಬಳಕೆ ಸಿಲಿಂಡರ್‌ಗಳನ್ನು ಒದಗಿಸುತ್ತೇವೆ. ಆಟೋ ರಿಕ್ಷಾಗಳಿಗೆ ಬೆಂಗಳೂರಿನಲ್ಲಿ ಗ್ಯಾಸ್ ಒದಗಿಸಲು ಹಾಗೂ ಮಂಗಳೂರಿನಲ್ಲೂ ಗ್ಯಾಸ್ ಸಮಸ್ಯೆ ಬಗೆಹರಿಸಲು ಸೂಚಿಸಲಾಗಿದೆ ಎಂದರು.

ಇದಕ್ಕೂ ಮುನ್ನ ಮಾತನಾಡಿದ ಐವಾನ್ ಡಿಸೋಜಾ ಗ್ಯಾಸ್ ಸಮಸ್ಯೆಯಿಂದಾಗಿ ಕಟ್ಟಿಗೆ ದರ ಹೆಚ್ಚಾಗಿದೆ. ಮಂಗಳೂರು ಭಾಗದಲ್ಲಿ ಗ್ಯಾಸ್ ಸಿಲಿಂಡರ್ ಸಮಸ್ಯೆ ತೀವ್ರವಾಗಿದೆ ಎಂದರು. ನಾಗರಾಜು ಮಾತನಾಡಿ, ಆಟೋಗಳು, ಹೋಟೆಲ್‌ಗಳು, ಹಾಸ್ಟೆಲ್‌ಗಳಿಗೆ ಗ್ಯಾಸ್ ಸಿಲಿಂಡರ್ ಸಿಗದೆ ಊಟದ ಮೆನುವಿನಲ್ಲಿ ಬದಲಾವಣೆಯಾಗಿದೆ.

ಹಲವು ಇಂದಿರಾ ಕ್ಯಾಂಟೀನ್‌ಗಳಿಗೆ ಬೀಗ ಬಿದ್ದಿದೆ. ವಾಣಿಜ್ಯ ಸಿಲಿಂಡರ್‌ಗಳ ಸಮಸ್ಯೆಯಾಗದಂತೆ ಹಾಗೂ ಕಾಳಸಂತೆಯಲ್ಲಿ ಮಾರಾಟವಾಗದಂತೆ ತಿಳಿಸಿದರು. ತೆರಿಗೆ ವಿಧಿಸುವ ವಿಚಾರ ಕೇಂದ್ರ ಸರ್ಕಾರಕ್ಕೆ ಸಂಬಂಧಿಸಿದೆ. ರಾಜ್ಯದಿಂದ ವಿಧಿಸಲಾಗುವ ತೆರಿಗೆ ಬಗ್ಗೆ ಮಾಹಿತಿ ಪಡೆದು ಹೇಳಲಾಗುವುದು.

# ವಿಜೃಂಭಣೆಯಿಂದ ನಡೆದ ಶನಿದೇವರ ಕುಂಭಾಭಿಷೇಕ, ರಥೋತ್ಸವ

ಬೆಂಗಳೂರು

ಮೈಸೂರು ಬ್ಯಾಂಕ್ ವೃತ್ತದಲ್ಲಿರುವ ಶ್ರೀ ಶನಿದೇವರ ದೇವಸ್ಥಾನದಲ್ಲಿ ಪ್ರತಿಷ್ಠಾಪಿಸಲಾದ 36 ಅಡಿ ಎತ್ತರದ ಬೃಹದಾಕಾರದ ಶನಿದೇವರ ಪ್ರತಿಮೆಯ ಲೋಕಾರ್ಪಣೆ, ಪ್ರಥಮ ಮಹಾ ಕುಂಭಾಭಿಷೇಕ ಹಾಗೂ ನೂತನ ರಥೋತ್ಸವ ಕಾರ್ಯಕ್ರಮಗಳು ಅತ್ಯಂತ ಶ್ರದ್ಧಾಭಕ್ತಿಯಿಂದ ಹಾಗೂ ವಿಜ್ರಂಭಣೆಯಿಂದ ನೆರವೇರಿದವು.



ರಾಜ್ಯದಲ್ಲೇ ಅತಿ ಎತ್ತರದ 36 ಅಡಿ ಎತ್ತರದ ಶನಿದೇವರ ಪ್ರತಿಮೆಯನ್ನು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಲೋಕಾರ್ಪಣೆ ಗೊಳಿಸಿದರು. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಕುಂಭಾಭಿಷೇಕಕ್ಕೆ ಚಾಲನೆ ನೀಡಿದರು.

ಬೃಹದಾಕಾರದ ಶನಿದೇವರ ಪ್ರತಿಮೆಯ ಮೇಲಿಂದ ಕುಂಭಗಳ ಮೂಲಕ ಜಲಾಭಿಷೇಕ ನೆರವೇರಿಸಿ ಪುಷ್ಪವೃಷ್ಟಿ ಮಾಡಿದಾಗ ಅಲ್ಲಿದ್ದ ಭಕ್ತಸ್ತೋಮ ರೋಮಾಂಚನದಿಂದ ಹರ್ಷೋದ್ಗಾರ ವ್ಯಕ್ತಪಡಿಸಿತು. ಕ್ರೇನ್ ಮೂಲಕ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಕುಂಭಾಭಿಷೇಕದ ಪ್ರಯುಕ್ತ ಶನಿದೇವರ ಮೂಲ ಮೂರ್ತಿಗೆ ವಿಶಿಷ್ಟ ಪುಷ್ಪಾಲಂಕಾರ ಮಾಡಲಾಗಿತ್ತು.




ಮಧ್ಯಾಹ್ನ ನಡೆದ ಮಹಾಮಂಗಳಾರತಿ ಬಳಿಕ ಸಹಸ್ರಾರು ಭಕ್ತರಿಗೆ ಅನ್ನಸಂತರ್ಪಣೆ ನಡೆಸಲಾಯಿತು. ಇದೇ ಸಂದರ್ಭದಲ್ಲಿ ನೂತನ ರಥವನ್ನು ಶನಿದೇವರಿಗೆ ಸಮರ್ಪಿಸಲಾಯಿತು. ಬುಧವಾರ ಬೆಳಿಗ್ಗೆ ಶನಿದೇವರ ರಥಾರೋಹಣ ನಡೆಯಿದ್ದು, ವೈಭವದ ರಥೋತ್ಸವ ನಡೆಯಿತು.

ಮರುದಿನ ಚಿಕ್ಕರಸಿನಕೆರೆಯ ಕಾಲಭೈರವಸ್ವಾಮಿಯ ಬಸವಣ್ಣ ಶ್ರೀ ಕ್ಷೇತ್ರಕ್ಕೆ ಆಗಮಿಸಿ ಪೂಜೆ ಪಡೆದು ಭಕ್ತರಿಗೆ ಆಶೀರ್ವಾದ ನೀಡಿತು.

ನೂತನ ಪ್ರತಿಮೆ ಅರ್ಪಣೆ, ಕುಂಭಾಭಿಷೇಕ ಹಾಗೂ ರಥೋತ್ಸವ ಕಾರ್ಯಕ್ರಮಗಳ ಪ್ರಯುಕ್ತ ಪ್ರತಿದಿನವೂ ಶನಿದೇವರ ಸನ್ನಿಧಿಯಲ್ಲಿ ವಿವಿಧ ಹೋಮ–ಹವನಗಳು, ವಿಶೇಷ ಅಭಿಷೇಕಗಳು, ಪುಷ್ಪಾಲಂಕಾರ, ವಿಶೇಷ ಪೂಜೆಗಳು ಹಾಗೂ ಸಹಸ್ರಾರು ಭಕ್ತರಿಗೆ ನಿತ್ಯ ಅನ್ನಸಂತರ್ಪಣೆ ನಡೆಯಿತು.

ಈ ಕಾರ್ಯಕ್ರಮದಲ್ಲಿ ಸಚಿವರಾದ ರಾಮಲಿಂಗಾರೆಡ್ಡಿ, ದಿನೇಶ್ ಗುಂಡೂರಾವ್, ಶಾಸಕ ರಿಜ್ವಾನ್ ಅರ್ಷದ್, ಬಿಜೆಪಿ ಮುಖಂಡ ಹಾಗೂ ಮಾಜಿ ಕಾರ್ಪೋರೇಟರ್ ಶಿವಕುಮಾರ್, ಸಪ್ತಗಿರಿಗೌಡ, ಬಿಬಿಎಂಪಿ ಮಾಜಿ ಸದಸ್ಯ ಯುವರಾಜ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ದೇವಸ್ಥಾನದ ಪ್ರಧಾನ ಅರ್ಚಕರಾದ ಗಣೇಶ್ ಅವರ ನೇತೃತ್ವದಲ್ಲಿ ಎಲ್ಲಾ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು. ಕಾರ್ಯಕ್ರಮದ ನಿರ್ವಹಣೆಯನ್ನು ಪ್ರವೀಣ ನಾರಾಯಣ ರಾವ್ ವಹಿಸಿಕೊಂಡಿದ್ದರು.

# ಮುಟ್ಟಿನ ರಜೆಗೆ ಒಪ್ಪದ ಸುಪ್ರೀಂ

ನವದೆಹಲಿ

ಋತುಚಕ್ರ ರಜೆ ಕಡ್ಡಾಯ ಕಾನೂನು ಮಹಿಳೆಯರ ವೃತ್ತಿಜೀವನದ ಮೇಲೆ ಪ್ರತಿಕೂಲ ಪರಿಣಾಮ ಬೀರಬಹುದು ಎಂದು ಸುಪ್ರೀಂ ಕೋರ್ಟ್ ಎಚ್ಚರಿಕೆ ನೀಡಿದೆ.

ಕಡ್ಡಾಯ ಋತುಚಕ್ರ ರಜೆ ಕುರಿತು ನಿಯಮಗಳನ್ನು ರೂಪಿಸಲು ರಾಜ್ಯಗಳಿಗೆ ನಿರ್ದೇಶನ ನೀಡುವಂತೆ ಕೋರಿ ಶೈಲೇಂದ್ರ ಮಣಿ ತ್ರಿಪಾಠಿ ಎಂಬವರ ಪರವಾಗಿ ಹಿರಿಯ ವಕೀಲ ಎಂ.ಆರ್.ಶಂಶಾದ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠ ಇಂದು ವಿಚಾರಣೆ ನಡೆಸಿತು.

ಋತುಚಕ್ರ ರಜೆ ಕಡ್ಡಾಯ ಕಾನೂನು ರೂಪಿಸುವ ಮೊದಲು ಉದ್ಯೋಗ ಮಾರುಕಟ್ಟೆಯ ಪ್ರಾಯೋಗಿಕ ವಾಸ್ತವಗಳನ್ನು ಪರಿಗಣಿಸುವ ಅಗತ್ಯವಿದೆ. ಜೊತೆಗೆ, ಈ ಕುರಿತು ಮಹಿಳೆಯರಲ್ಲಿ ಕೀಳರಿಮೆ ಭಾವನೆ ಉಂಟಾಗದಂತೆ ನೋಡಿಕೊಳ್ಳಬೇಕಿದೆ ಎಂದು ಕೋರ್ಟ್ ಒತ್ತಿ ಹೇಳಿದೆ.

ಕೆಲವು ನೈಸರ್ಗಿಕ ಸಮಸ್ಯೆಗಳಿಂದ ಮಹಿಳೆಯರು ಪುರುಷರೊಂದಿಗೆ ಸಮನಾಗಿರಲು ಸಾಧ್ಯವಿಲ್ಲ. ಜೊತೆಗೆ, ಒಂದು ನಿರ್ದಿಷ್ಟ ಸಮಯದಲ್ಲಿ ಕೆಲಸ ಮಾಡಲು ಸಾಧ್ಯವಿಲ್ಲ ಎಂಬ ಭಾವನೆಯನ್ನು ಇದು ಮೂಡಿಸಲಿದೆ ಎಂದು ಸಿಜೆಐ ಅಭಿಪ್ರಾಯಪಟ್ಟರು.


ಉದ್ಯೋಗ ಮಾರುಕಟ್ಟೆಯ ಪ್ರಾಯೋಗಿಕ ವಾಸ್ತವತೆಯನ್ನು ಪರಿಗಣಿಸಬೇಕು. ಮಾನವ ಸಂಪನ್ಮೂಲ ಕಡಿಮೆ ಇದ್ದರೆ, ಆಯ್ಕೆಯ ಸಾಧ್ಯತೆ ಕಡಿಮೆಯಾಗುತ್ತದೆ. ಈ ಎಲ್ಲ ಅಂಶಗಳನ್ನೂ ಪರಿಶೀಲಿಸಬೇಕು. ವ್ಯವಹಾರದ ದೃಷ್ಟಿಯಿಂದಲೂ ಇದನ್ನು ನೋಡಬೇಕಿದೆ ಎಂದು ನ್ಯಾಯಮೂರ್ತಿ ಬಾಗ್ಚಿ ತಿಳಿಸಿದರು.

# ಯುದ್ಧದಲ್ಲಿ ಸಿಲುಕಿರುವ ಕನ್ನಡಿಗರ ರಕ್ಷಣೆಗೆ ಕ್ರಮ: ಎಚ್‌ಕೆಪಿ

ಬೆಂಗಳೂರು

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದಿಂದಾಗಿ ಸಿಲುಕಿರುವ ಅಂತಾರಾಷ್ಟ್ರೀಯ ಪ್ರವಾಸಿಗರಿಗೆ ಅಗತ್ಯ ಸಹಾಯ ಮತ್ತು ಆತಿಥ್ಯ ನೀಡಲು ಕರ್ನಾಟಕ ಸರ್ಕಾರ ಪೂರ್ವಭಾವಿ ಕ್ರಮಗಳನ್ನು ಕೈಗೊಂಡಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ.

ನಗರದ ಅರಮನೆ ಮೈದಾನದ ತ್ರಿಪುರ ವಾಸಿನಿಯಲ್ಲಿ ಆರಂಭವಾದ ಮೂರು ದಿನಗಳ ಪ್ರಯಾಣ ಮತ್ತು ಪ್ರವಾಸೋದ್ಯಮ ಮೇಳದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಪಶ್ಚಿಮ ಏಷ್ಯಾ ಸಂಘರ್ಷವು ಭಾರತಕ್ಕೆ ನೇರ ಪರಿಣಾಮ ಬೀರುವುದಿಲ್ಲವಾದರೂ ಮಧ್ಯಪ್ರಾಚ್ಯ ದೇಶಗಳಿಂದ ಬಂದ ಕೆಲ ವಿದೇಶಿ ಪ್ರವಾಸಿಗರ ಪ್ರಯಾಣದಲ್ಲಿ ಅನಿಶ್ಚಿತತೆ ಉಂಟಾಗಿದೆ ಎಂದು ಹೇಳಿದರು. ವೀಸಾ ಮತ್ತು ಪ್ರಯಾಣ ನಿರ್ಬಂಧಗಳ ಕಾರಣದಿಂದ ಅನೇಕರು ತಾತ್ಕಾಲಿಕವಾಗಿ ತಮ್ಮ ದೇಶಗಳಿಗೆ ಮರಳಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಅವರ ವಾಸ್ತವ್ಯ ಸುಗಮವಾಗಿರಲು ವೀಸಾ ನಿರ್ವಹಣೆ



ಸೇರಿದಂತೆ ಅಗತ್ಯ ಸಹಾಯ ಒದಗಿಸಲಾಗುತ್ತಿದೆ ಎಂದು ಸಚಿವರು ಹೇಳಿದರು.

ರಾಜ್ಯದಲ್ಲಿ ಐತಿಹಾಸಿಕ ತಾಣಗಳ ಅಭಿವೃದ್ಧಿ ಮತ್ತು ಪುರಾತತ್ವ ಉತ್ಖನನ ಕಾರ್ಯಗಳಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಲಕುಂಡಿಯಲ್ಲಿ ಉತ್ಖನನದಲ್ಲಿ ದೊರೆತ ಐತಿಹಾಸಿಕ ವಸ್ತುಗಳನ್ನು ಪ್ರದರ್ಶಿಸಲು ವಿಶೇಷ ವಸ್ತುಸಂಗ್ರಹಾಲಯ ಸ್ಥಾಪಿಸುವ ಯೋಜನೆ ಇದೆ. ಈಗಾಗಲೇ ಸುಮಾರು 1,500 ಕಲಾಕೃತಿಗಳನ್ನು ಸಂಗ್ರಹಿಸಲಾಗಿದ್ದು, ಸುಮಾರು 3,500 ವಸ್ತುಗಳನ್ನು ಸಂಶೋಧಿಸಲಾಗಿದೆ ಎಂದು ಅವರು ತಿಳಿಸಿದರು. ಇತ್ತೀಚೆಗೆ ಒಂದು ಕುಟುಂಬವು ಸುಮಾರು 600 ವರ್ಷ ಹಳೆಯದಾದ ದೇವಿಯ ಆಭರಣವನ್ನು ದಾನ ಮಾಡಿದ್ದು, ಅದರ ಮೌಲ್ಯ ಸುಮಾರು 5 ಕೋಟಿ ರೂಪಾಯಿ ಎಂದು ತಜ್ಞರು ಅಂದಾಜಿಸಿದ್ದಾರೆ.

ಪರಿಸರ ಪ್ರವಾಸೋದ್ಯಮ, ಸಾಹಸ ಪ್ರವಾಸೋದ್ಯಮ, ಶಿಕ್ಷಣ ಪ್ರವಾಸೋದ್ಯಮ ಮತ್ತು ರೈತರ ಪ್ರವಾಸೋದ್ಯಮ ಸೇರಿದಂತೆ ವಿವಿಧ ರೀತಿಯ ಪ್ರವಾಸೋದ್ಯಮ ಚಟುವಟಿಕೆಗಳಿಗೆ ರಾಜ್ಯ ಸರ್ಕಾರ ಉತ್ತೇಜನ ನೀಡುತ್ತಿದೆ ಎಂದು ಸಚಿವರು ಹೇಳಿದರು.

ಪ್ರವಾಸೋದ್ಯಮ ಮೇಳಗಳು ರಾಜ್ಯದ ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಇಂತಹ ಮೇಳಗಳಲ್ಲಿ ವಿದೇಶಿ ಪ್ರವಾಸಿಗರು ಹಾಗೂ ಪ್ರವಾಸ ನಿರ್ವಾಹಕರು ಕರ್ನಾಟಕದ ಪ್ರವಾಸಿ ತಾಣಗಳ ಬಗ್ಗೆ ಸಮಗ್ರ ಮಾಹಿತಿ ಪಡೆಯುತ್ತಾರೆ ಎಂದು ಅವರು ಹೇಳಿದರು.

ಕರ್ನಾಟಕದಲ್ಲಿ ಹಂಪಿ, ಬೇಲೂರು, ಬಾದಾಮಿ, ಪಟ್ಟದಕಲ್ಲು ಮತ್ತು ಪಶ್ಚಿಮ ಘಟ್ಟಗಳಂತಹ ವಿಶ್ವ ಪರಂಪರೆಯ ತಾಣಗಳು ಸೇರಿದಂತೆ 25,000ಕ್ಕೂ ಹೆಚ್ಚು ಸ್ಮಾರಕಗಳು ಇದ್ದರೂ ಪ್ರವಾಸೋದ್ಯಮದಲ್ಲಿ ರಾಜ್ಯದ ಪಾಲು ಇನ್ನಷ್ಟು ಹೆಚ್ಚಬೇಕಿದೆ ಎಂದು ಅವರು ಅಭಿಪ್ರಾಯಪಟ್ಟರು.

ರಾಜ್ಯಕ್ಕೆ ಆಗಮಿಸುವ ಬಹುತೇಕ ಪ್ರವಾಸಿಗರು ಬೆಂಗಳೂರಿನ ಮೂಲಕವೇ ಪ್ರವೇಶಿಸುತ್ತಾರೆ. ಅಲ್ಲಿಂದ ರಾಜ್ಯದ ವಿವಿಧ ಪರಂಪರೆಯ ತಾಣಗಳು, ಹೋಟೆಲ್‌ಗಳು ಮತ್ತು ಪ್ರವಾಸಿ ಆಕರ್ಷಣೆಗಳ ಮಾಹಿತಿ ನೀಡಲಾಗುತ್ತದೆ. ಇದರಿಂದ ಹಂಪಿ, ಬಿಜಾಪುರ, ಬೀದರ್, ಶ್ರೀರಂಗಪಟ್ಟಣ, ಮೈಸೂರು ಹಾಗೂ ಹಳೇಬೀಡು ಮುಂತಾದ ತಾಣಗಳನ್ನು ಅನ್ವೇಷಿಸಲು ಪ್ರವಾಸಿಗರಿಗೆ ಉತ್ತೇಜನ ಸಿಗುತ್ತದೆ ಎಂದು ಸಚಿವರು ಹೇಳಿದರು.

ಈ ವೇಳೆ ಮಾತನಾಡಿದ ಪ್ರವಾಸೋದ್ಯಮ ಕಾರ್ಯದರ್ಶಿ ಡಾ. ತ್ರಿಲೋಕ್ ಚಂದ್ರ ಅವರು, ಮೂರು ದಿನಗಳ ಪ್ರವಾಸೋದ್ಯಮ ಮೇಳದಲ್ಲಿ ದೇಶದ ವಿವಿಧ ರಾಜ್ಯಗಳು ಹಾಗೂ ವಿದೇಶಗಳಿಂದ 150 ಕ್ಕೂ ಹೆಚ್ಚು ಸಂಸ್ಥೆಗಳು ಭಾಗವಹಿಸಿವೆ ಎಂದು ಹೇಳಿದರು. ಇದರಿಂದ ರಾಜ್ಯದ ಪ್ರವಾಸೋದ್ಯಮ ಉತ್ಪನ್ನಗಳಿಗೆ ವ್ಯಾಪಕ ಪ್ರಚಾರ ಸಿಗಲಿದೆ ಹಾಗೂ ಸ್ಥಳೀಯ ಆರ್ಥಿಕತೆಯೂ ಬಲವಾಗಲಿದೆ ಎಂದು ತಿಳಿಸಿದರು.

ಪ್ರಸ್ತುತ ಕರ್ನಾಟಕದಲ್ಲಿ ವರ್ಷಕ್ಕೆ ಸುಮಾರು 30 ಕೋಟಿ ದೇಶೀಯ ಪ್ರವಾಸಿಗರು ಭೇಟಿ ನೀಡುತ್ತಿದ್ದು, ದೇಶೀಯ ಪ್ರವಾಸಿಗರ ಆಗಮನದಲ್ಲಿ ರಾಜ್ಯ ಮೂರನೇ ಸ್ಥಾನದಲ್ಲಿದೆ ಎಂದು ಅವರು ಮಾಹಿತಿ ನೀಡಿದರು.

15/03/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಯುಗಾದಿ ಹಬ್ಬ: ವಿಶೇಷ ರೈಲುಗಳ ಸಂಚಾರ

ಬೆಂಗಳೂರು

ಮುಂಬರುವ ಯುಗಾದಿ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿಯಂತ್ರಿಸುವ ಸಲುವಾಗಿ ನೈಋತ್ಯ ರೈಲ್ವೆ ಕರ್ನಾಟಕದ ವಿವಿಧ ನಿಲ್ದಾಣಗಳ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲುಗಳನ್ನು ಓಡಿಸಲು ನಿರ್ಧರಿಸಿದೆ.

ಎಸ್‌ಎಂವಿಟಿ ಬೆಂಗಳೂರು–ಬೆಳಗಾವಿ ವಿಶೇಷ ರೈಲು:

ರೈಲು ಸಂಖ್ಯೆ 06503 ಇದೇ 18ರಂದು ಸಂಜೆ 7ಕ್ಕೆ ಎಸ್‌ಎಂವಿಟಿ ಬೆಂಗಳೂರಿನಿಂದ ಹೊರಟು, ಮರುದಿನ ಬೆಳಿಗ್ಗೆ 7.35ಕ್ಕೆ ಬೆಳಗಾವಿ ತಲುಪಲಿದೆ. ಮರಳಿ ರೈಲು ಸಂಖ್ಯೆ 06504 ಇದೇ 22ರಂದು ಸಂಜೆ 5.30ಕ್ಕೆ ಬೆಳಗಾವಿಯಿಂದ ಹೊರಟು, ಮರುದಿನ ಬೆಳಿಗ್ಗೆ 5ಕ್ಕೆ ಎಸ್‌ಎಂವಿಟಿ ಬೆಂಗಳೂರು ತಲುಪಲಿದೆ. ಈ ರೈಲು ಚಿಕ್ಕಬಾಣಾವರ, ತುಮಕೂರು, ಅರಸೀಕೆರೆ, ಬೀರೂರು, ದಾವಣಗೆರೆ, ಹರಿಹರ, ಹಾವೇರಿ, ಹುಬ್ಬಳ್ಳಿ, ಧಾರವಾಡ, ಅಳ್ನಾವರ, ಲೋಂಡಾ ಹಾಗೂ ಖಾನಾಪುರ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಿರಲಿದೆ. ಈ ರೈಲು ಒಟ್ಟು 19 ಬೋಗಿಗಳನ್ನು ಹೊಂದಿರುತ್ತದೆ.

ಯಶವಂತಪುರ–ವಿಜಯಪುರ ವಿಶೇಷ ರೈಲು:

ರೈಲು ಸಂಖ್ಯೆ 06277 ಮಾರ್ಚ್ 18ರಂದು ರಾತ್ರಿ 9.50ಕ್ಕೆ ಯಶವಂತಪುರದಿಂದ ಹೊರಟು, ಮರುದಿನ ಬೆಳಿಗ್ಗೆ 9.45ಕ್ಕೆ ವಿಜಯಪುರ ತಲುಪಲಿದೆ. ಮರಳಿ ರೈಲು ಸಂಖ್ಯೆ 06278 ಮಾರ್ಚ್ 22ರಂದು ಮಧ್ಯಾಹ್ನ 1.30ಕ್ಕೆ ವಿಜಯಪುರದಿಂದ ಹೊರಟು, ಮರುದಿನ ಮಧ್ಯರಾತ್ರಿ 12.30ಕ್ಕೆ ಯಶವಂತಪುರ ತಲುಪಲಿದೆ. ಈ ರೈಲು ತುಮಕೂರು, ಅರಸೀಕೆರೆ, ಬೀರೂರು, ದಾವಣಗೆರೆ, ಹರಿಹರ, ರಾಣೇಬೆನ್ನೂರು, ಹಾವೇರಿ, ಬದಾಮಿ, ಬಾಗಲಕೋಟೆ ಮತ್ತು ಆಲಮಟ್ಟಿ ನಿಲ್ದಾಣಗಳಲ್ಲಿ ನಿಲ್ಲಲಿದೆ.

ಹುಬ್ಬಳ್ಳಿ–ಯಶವಂತಪುರ ಒನ್‌ವೇ ವಿಶೇಷ ರೈಲು:

ರೈಲು ಸಂಖ್ಯೆ 07379 ಮಾರ್ಚ್ 18ರಂದು ಮಧ್ಯಾಹ್ನ 12ಕ್ಕೆ ಹುಬ್ಬಳ್ಳಿಯಿಂದ ಹೊರಟು, ರಾತ್ರಿ 8.15ಕ್ಕೆ ಯಶವಂತಪುರ ತಲುಪಲಿದೆ. ಈ ರೈಲು ಹಾವೇರಿ, ಹರಿಹರ, ದಾವಣಗೆರೆ, ಅರಸೀಕೆರೆ ಮತ್ತು ತುಮಕೂರು ನಿಲ್ದಾಣಗಳಲ್ಲಿ ನಿಲುಗಡೆ ಹೊಂದಿರಲಿದೆ.

ಯಶವಂತಪುರ–ಮಡಗಾಂವ್ ವಿಶೇಷ ರೈಲು:

ರೈಲು ಸಂಖ್ಯೆ 06267 ಮಾರ್ಚ್ 18ರಂದು ಮಧ್ಯಾಹ್ನ 12ಕ್ಕೆ ಯಶವಂತಪುರದಿಂದ ಹೊರಟು, ಮರುದಿನ ಬೆಳಿಗ್ಗೆ 6.45ಕ್ಕೆ ಮಡಗಾಂವ್ ತಲುಪಲಿದೆ. ಈ ರೈಲು ಕುಣಿಗಲ್, ಚನ್ನರಾಯಪಟ್ಟಣ, ಹಾಸನ, ಸಕಲೇಶಪುರ, ಸುಬ್ರಹ್ಮಣ್ಯ ರೋಡ್, ಕಬಕ ಪುತ್ತೂರು, ಬಂಟ್ವಾಳ, ಸುರತ್ಕಲ್, ಮುಲ್ಕಿ, ಉಡುಪಿ, ಬಾರ್ಕೂರು, ಕುಂದಾಪುರ, ಬೈಂದೂರು, ಭಟ್ಕಳ, ಮುರುಡೇಶ್ವರ, ಹೊನ್ನಾವರ, ಕುಮಟಾ, ಗೋಕರ್ಣ ರೋಡ್, ಅಂಕೋಲಾ ಮತ್ತು ಕಾರವಾರ ನಿಲ್ದಾಣಗಳಲ್ಲಿ ನಿಲ್ಲಲಿದೆ.

ಮರಳಿ ರೈಲು ಸಂಖ್ಯೆ 06268 ಮಾರ್ಚ್ 19ರಂದು ಬೆಳಿಗ್ಗೆ 11ಕ್ಕೆ ಮಡಗಾಂವ್‌ನಿಂದ ಹೊರಟು, ಮರುದಿನ ಬೆಳಿಗ್ಗೆ 5.20ಕ್ಕೆ ಬೆಂಗಳೂರು ಕಂಟೋನ್ಮೆಂಟ್ ತಲುಪಲಿದೆ. ಈ ರೈಲು ಮರಳುವಾಗ ಮೇಲಿನ ಎಲ್ಲಾ ನಿಲ್ದಾಣಗಳ ಜೊತೆಗೆ ಎಸ್‌ಎಂವಿಟಿ ಬೆಂಗಳೂರು ನಿಲ್ದಾಣದಲ್ಲೂ ನಿಲುಗಡೆ ಹೊಂದಿರಲಿದೆ.

ರೈಲುಗಳ ಸಂಖ್ಯೆ 06277/06278 ಮತ್ತು 07379 ಒಟ್ಟು 21 ಬೋಗಿಗಳನ್ನು ಹೊಂದಿರಲಿದ್ದು, ಇದರಲ್ಲಿ ಎಸಿ, ಸ್ಲೀಪರ್ ಮತ್ತು ಸಾಮಾನ್ಯ ಬೋಗಿಗಳು ಇರಲಿವೆ ಎಂದು ನೈಋತ್ಯ ರೈಲ್ವೆ ಪ್ರಕಟಣೆ ತಿಳಿಸಿದೆ.

## ಮಾವು ಬೆಳೆಗಾರರಿಗೆ ಸಲಹೆ

ಕೋಲಾರ

ಜಿಲ್ಲೆಯಲ್ಲಿನ ಮಾವು ಬೆಳೆಯ ಸ್ಥಿತಿಗತಿಗಳು, 2026ನೇ ಮಾರ್ಚ್ ತಿಂಗಳು ಬೇಸಿಗೆಯ ಪ್ರಾರಂಭದಲಿನ ಸುಡು ಬಿಸಿಲು, ಒಣ ಸನ್ನಿವೇಶ ಹಾಗೂ ಹವಾಮಾನ ವ್ಯಾಪರಿತ್ಯದ ಪರಿಣಾಮವಾಗಿ ಮಾವು ಅನೇಕ ವಿಷಮಪರಿಸ್ಥಿತಿಯನ್ನು ಎದುರಿಸುತ್ತಿದೆ.

ಮಾರ್ಚ್ ಮೊದಲನೇವಾರ ಮುಗಿದು ಎರಡನೇ ವಾರಕ್ಕೆ ಕಾಲಿಟ್ಟಾಗಲು ಅನೇಕ ಮಾವಿನ ಗಿಡಗಳು 2 ಅಥವಾ 3 ಹಂತದ ಹೂ ಬಿಡುವಿಕೆಯನ್ನು ತಪ್ಪಿಸುತ್ತವೆ. ವಾತಾವರಣದಲ್ಲಿ ಉಷ್ಣಾಂಶ ಏರಿದಂತೆಲ್ಲ ಹಾಗೂ ಒಣ ಸನ್ನಿವೇಶ ಸೃಷ್ಟಿಯಾದಂತೆಲ್ಲ. ಈಗಿರುವ ಹೂತೆನೆಗಳಲ್ಲಿ ಅಪಾರ ಸಂಖ್ಯೆಯ ಥ್ರೀಪ್ಸ್ ಹುಳುಗಳು ಹಾಗೂ ಜಿಗಿ ಹುಳುಗಳು ಹಾನಿಯನ್ನುಂಟು ಮಾಡುತ್ತಿರುವುದು ಈ ವ್ಯಾಪಕವಾಗಿ ಕಂಡುಬಂದಿದೆ. ಅಲ್ಲಲ್ಲಿ ಬಂದಿರುವ ಚಿಗುರೆಲೆಗಳೂ ಸಹ ಈ ಎರಡು ಕೀಟಗಳ ಸಂತತಿ ಹೆಚ್ಚಿಸಲು ಸಹಯಕಾರಿಯಾಗಿದೆ, ಏಕೆಂದರೆ ಚಿಗುರೆಲೆ ಹಾಗೂ ಹೂಗಳು ದೀಪ್ ಹಾಗೂ ಜಿಗಿಹುಳುಗಳಿಗೆ ಆಹಾರವಾಗಿರುತ್ತದೆ.

ಈ 2 ಹುಳುಗಳ ಹಾವಳಿಯಿಂದ ಹಾಗೂ ವಾತಾವರಣದಲ್ಲಿ ಹೆಚ್ಚಿದ ಉಷ್ಣತೆ ಹಾಗೂ ಒಣ ಸನ್ನಿವೇಶಗಳಿಂದ ಕಚ್ಚಿದ ಚಿಕ್ಕ ಕಾಯಿ–ಹುಳುಗಳು ಹೆಚ್ಚಿನ ಪ್ರಮಾಣದಲ್ಲಿ ಉದುರುತ್ತದೆ. ಎಲ್ಲಾ ತಳಿಗಳ ಮಾವಿನಲಿ. ಈ ಸಮಸ್ಯೆ ಕಂಡುಬಂದಿದೆ ಹಾಗೂ ಬಾದಾಮಿ ತಳಿಯಲ್ಲಿ ಹೆಚ್ಚಿನ ಹಾನಿ ಉಂಟಾಗಿರುವುದು ಸಾರ್ವತ್ರಿಕವಾಗಿದೆ.

ಕಾಯಿಗಳು ನಿಂಬೆಹಣ್ಣಿನ ಗಾತ್ರ ತಲುಪಿದಾಗ ಹಣ್ಣಿನ ನೋಣಗಳ ಸಂಭವನೀಯ ಸಂಭಾವನೆಯ ಹಾನಿಯಿಂದ ತಪ್ಪಿಸಲು ಮೋಹಕ ಬಲೆಗಳನ್ನು ಮಾವಿನ ತೋಟಗಳಲ್ಲಿ ನೇತು ಹಾಕಬೇಕು (10 ಮರಗಳಿಗೆ 1 ಅಥವಾ 2 ರಂತೆ) (ಎಕರೆಗೆ 10 ರಿಂದ 20 ಸಂಖ್ಯೆ) ಅಲ್ಲದೆ ಅಗತ್ಯವೆನಿಸಿದಲಿ, ಗಳನ್ನು ಕಾಯಿಗಳಿಗೆ ಹಾಕುವುದು ಹಾಗೂ ಹಳದಿ–ನೀಲಿ ಅಂಟು ಕಾರ್ಡ್‌ಗಳನ್ನು ಅಳವಡಿಸುವುದು. ಸಂಭವನೀಯ ಬೆಂಕಿ ಅನಾಹುತಗಳನ್ನು ತಪ್ಪಿಸಲು ತೋಟದ ಬದುಗಳಲಿ, ಬೇಲಿಗುಂಟೆ ಒಣಗಿದ ಎಲೆ, ಕಸ, ಕಡ್ಡಿಗಳನ್ನು ತೆಗೆದು ತೋಟಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕೆಂದು ತೋಟಗಾರಿಕೆ ಉಪ ನಿರ್ದೇಶಕರು ತಿಳಿಸಿದ್ದಾರೆ.

## 'ಇ-ಆಸ್ತಿ ತಂತ್ರಾಂಶದಲ್ಲಿ ಯಾವುದೇ ತೊಡಕಿಲ್ಲ'

ವಿಧಾನಸಭೆ

ಸದ್ಯದಲ್ಲೇ ರಾಜ್ಯದ ಎಲ್ಲಾ ಮಹಾ ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಏಕೀಕೃತ ಭೂ ನಿರ್ವಹಣಾ ವ್ಯವಸ್ಥೆ (ಯೂನಿಫೈಡ್ ಲ್ಯಾಂಡ್ ಮ್ಯಾನೇಜ್ ಮೆಂಟ್ ಸಿಸ್ಟಂ–ULMS) ಜಾರಿಗೆ ಬರಲಿದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.



ವಿಧಾನಸಭೆಯಲ್ಲಿ ಶುಕ್ರವಾರ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಜ್ಯೋತಿ ಗಣೇಶ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಭೂದಾಖಲೆಗಳು, ಸಮೀಕ್ಷೆ, ಭೂಪರಿವರ್ತನೆ, ಆಸ್ತಿ ತೆರಿಗೆ ಮತ್ತು ಇ–ಖಾತಾ ಸೇವೆಗಳನ್ನು ಒಂದೇ ಕಡೆ ಲಭ್ಯವಾಗುವಂತೆ ಮಾಡುವ ಪ್ಲಾಟ್ ಫಾರ್ಮ್ ಇದಾಗಿದೆ. ಪೈಲಟ್ ಯೋಜನೆಯಡಿ ಸದ್ಯದಲ್ಲಿಯೇ ಎಲ್ಲಾ ಮಹಾನಗರ ಪಾಲಿಕೆ ವ್ಯಾಪ್ತಿಗಳಲ್ಲಿ ಜಾರಿಗೆ ತರಲಾಗುತ್ತಿದೆ ಎಂದು ತಿಳಿಸಿದರು.

ಅನಧಿಕೃತ ಕಟ್ಟಡಗಳಿಗೆ, ಆಸ್ತಿಗಳಿಗೆ ಇ–ಖಾತಾ ಮಾಡಿಕೊಡಲೆಂದು ಇ–ಆಸ್ತಿ ತಂತ್ರಾಂಶವನ್ನು ಪರಿಚಯಿಸಲಾಗಿದೆ. ಕಟ್ಟಡ ಮತ್ತು ನಿವೇಶನಗಳು ಎಷ್ಟೇ ವಿಸ್ತೀರ್ಣದ್ದಾಗಿದ್ದರೂ ಇ–ಖಾತಾ ಮಾಡಿಕೊಡಲಾಗುತ್ತದೆ. ಅಲ್ಲದೇ, ನಾಗರಿಕರು ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಿ ಇ–ಖಾತೆಯನ್ನು ಪಡೆದುಕೊಳ್ಳಬಹುದಾಗಿದೆ ಎಂದರು.

ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಇ–ತಂತ್ರಾಂಶದಲ್ಲಿ ಯಾವುದೇ ದೋಷಗಳು ಕಂಡು ಬಂದಿಲ್ಲ. ಹಾಗೊಂದು ವೇಳೆ ಸಮಸ್ಯೆ ಎದುರಾದರೆ ಕೂಡಲೇ ಸರಿಪಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಇ–ತಂತ್ರಾಂಶದಲ್ಲಿ ನಾಗರಿಕರು ತಮ್ಮ ಆಸ್ತಿಯ ಸಂಪೂರ್ಣ ಮಾಹಿತಿಯನ್ನು ನಮೂದು ಮಾಡಲು ಅವಕಾಶವಿದೆ ಎಂದು ಅವರು ಸ್ಪಷ್ಟಪಡಿಸಿದರು.

## ಬೀದಿನಾಯಿಗಳ ಹಾವಳಿ ತಡೆಗೆ ಡಿಸಿ ಗಡುವು

ಕೋಲಾರ

ಜಿಲ್ಲೆಯಲ್ಲಿ ದಿನೇ ದಿನೇ ಹೆಚ್ಚುತ್ತಿರುವ ಬಿದಿನಾಯಿಗಳ ಹಾವಳಿಯನ್ನು ನಿಯಂತ್ರಿಸಲು ಹಮ್ಮಿಕೊಂಡಿರುವ ಯೋಜನೆಗಳ ಅನುಷ್ಠಾನದಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವ ಅಧಿಕಾರಿಗಳ ವಿರುದ್ಧ ಜಿಲ್ಲಾಧಿಕಾರಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಬೀದಿನಾಯಿಗಳಿಗೆ ಸಂತಾನಶಕ್ತಿ ಹರಣ ಚಿಕಿತ್ಸೆ ಮತ್ತು ರೇಬಿಸ್ ವಿರೋಧಿ ಲಸಿಕೆ ಹಾಕುವ ಪ್ರಕ್ರಿಯೆಯನ್ನು ತೀವ್ರಗತಿಯಲ್ಲಿ ಕೈಗೊಳ್ಳುವಂತೆ ಸೂಚಿಸಿದರು.

ಜಿಲ್ಲೆಯ ವಿವಿಧ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಗುರುತಿಸಲಾದ ನಾಯಿಗಳ ಸಂಖ್ಯೆ ಮತ್ತು ಕೈಗೊಳ್ಳಲಾದ ಕ್ರಮಗಳ ಮಾಹಿತಿಯನ್ನು ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡದ ನೋಡಲ್ ಅಧಿಕಾರಿಗಳನ್ನು ಜಿಲ್ಲಾಧಿಕಾರಿಗಳು ತರಾಟೆಗೆ ತೆಗೆದುಕೊಂಡರು. ಮಾಹಿತಿ ನೀಡುವಲ್ಲಿ ಬೇಜವಾಬ್ದಾರಿತನ ಪ್ರದರ್ಶಿಸುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸುವುದಾಗಿ ಎಚ್ಚರಿಸಿದರು.

ಸಂತಾನಶಕ್ತಿ ಹರಣ ಚಿಕಿತ್ಸೆ ನೀಡಲು ಅಗತ್ಯವಿರುವ ಮೂಲಭೂತ ಸೌಕರ್ಯಗಳು, ಶಸ್ತ್ರಚಿಕಿತ್ಸಾ ಕೊಠಡಿ ಮತ್ತು ಸಿಬ್ಬಂದಿಗಳ ನೇಮಕಾತಿಯ ಬಗ್ಗೆ ಚರ್ಚಿಸಲಾಯಿತು. ಕೆ.ಜಿ.ಎಫ್, ಮುಳಬಾಗಿಲು ಮತ್ತು ಕೋಲಾರ ಭಾಗಗಳಲ್ಲಿ ಶೀಘ್ರವೇ ಚಿಕಿತ್ಸಾ ಪ್ರಕ್ರಿಯೆ ಆರಂಭಿಸಲು ಟೆಂಡರ್ ಪಡೆದ ಸಂಸ್ಥೆಗಳಿಗೆ ಸೂಚನೆ ನೀಡಲಾಯಿತು.

ಶಸ್ತ್ರಚಿಕಿತ್ಸೆಯ ನಂತರ ನಾಯಿಗಳ ಆರೈಕೆ ಮಾಡಲು ಪ್ರತ್ಯೇಕ ಶೆಲ್ಟರ್‌ಗಳ ವ್ಯವಸ್ಥೆ ಮಾಡಬೇಕು. ಕನಿಷ್ಠ 20 ರಿಂದ 30 ನಾಯಿಗಳನ್ನು ಇರಿಸಿಕೊಳ್ಳುವಂತಹ ವ್ಯವಸ್ಥಿತ ಕೆನಲ್‌ಗಳನ್ನು (Kennels) ನಿರ್ಮಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.

ಸಾರ್ವಜನಿಕರಿಗೆ ತೊಂದರೆಯಾಗದಂತೆ ನಾಯಿಗಳಿಗೆ ಆಹಾರ ನೀಡಲು 'ಫೀಡಿಂಗ್ ಜೋನ್'ಗಳನ್ನು ಗುರುತಿಸಬೇಕು. ಈ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ನಾಮಫಲಕಗಳನ್ನು ಅಳವಡಿಸಲು ಸೂಚಿಸಲಾಯಿತು. ಮಾಲೂರು ಮತ್ತು ಬಂಗಾರಪೇಟೆ ಭಾಗಗಳಲ್ಲಿ ಈ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಶಸ್ತ್ರಚಿಕಿತ್ಸೆ ನಡೆಸಲು ತಜ್ಞ ಪಶುವೈದ್ಯರ ಕೊರತೆಯಿರುವುದು ಗಮನಕ್ಕೆ ಬಂದಿದ್ದು, ನಿವೃತ್ತ ವೈದ್ಯರನ್ನು ಅಥವಾ ಹೊರಗುತ್ತಿಗೆ ಆಧಾರದ ಮೇಲೆ ವೈದ್ಯರನ್ನು ನೇಮಿಸಿಕೊಂಡು ಕೆಲಸ ಆರಂಭಿಸುವಂತೆ ಸಲಹೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೆ. ರಮೇಶ್, ಉಪವಿಭಾಗಾಧಿಕಾರಿ ಜಂಬಗಿ ರೇಣುಕಾಪ್ರಸಾದ್ ದಿಲೀಪ್, ನಗರ ಯೋಜನೆ ಯೋಜನಾ ನಿರ್ದೇಶಕಿ ಅಂಬಿಕಾ, ತೋಟಗಾರಿಕೆ ಉಪನಿರ್ದೇಶಕ ಕುಮಾರಸ್ವಾಮಿ, ಆಹಾರ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ್, ಎಲ್ಲಾ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

## 25ಕ್ಕೆ ಕೋಲಾರದಲ್ಲಿ ಶ್ರೀರಾಮ ಶೋಭಾಯಾತ್ರೆ ವೈಭವ

ಕೋಲಾರ



ಶ್ರೀರಾಮನವಮಿ ಅಂಗವಾಗಿ ಶ್ರೀರಾಮ ಸೇನಾ ವತಿಯಿಂದ ಮಾರ್ಚ್ 25ರಿಂದ 27ರವರೆಗೆ ಮೂರು ದಿನಗಳ ಕಾಲ ಶ್ರೀರಾಮೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಸಂಘಟನೆಯ ರಾಜ್ಯ ದಕ್ಷಿಣ ಪ್ರಾಂತದ ಶ್ರೀನಿವಾಸಗುರುಜಿ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಶ್ರೀರಾಮೋತ್ಸವದ ಕರಪತ್ರವನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಕಳೆದ ಎಂಟು ವರ್ಷಗಳಿಂದ ಶ್ರೀರಾಮ ಸೇನಾ ವತಿಯಿಂದ ಶ್ರೀರಾಮೋತ್ಸವವನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದ್ದು, ಈ ವರ್ಷವೂ "ನಾವೆಲ್ಲಾ ಹಿಂದೂ  ನಾವೆಲ್ಲಾ ಒಂದು" ಎಂಬ ಘೋಷವಾಕ್ಯದೊಂದಿಗೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು. ಕಾರ್ಯಕ್ರಮ ಯಶಸ್ವಿಯಾಗಲು ಎಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

ಮಾರ್ಚ್ 25ರಂದು ಸಂಜೆ 4 ಗಂಟೆಗೆ ಗಾಂಧಿನವನದಲ್ಲಿ ಶ್ರೀರಾಮನ ವಿಗ್ರಹ ಪ್ರತಿಷ್ಠಾಪನೆ ನಡೆಯಲಿದೆ. ಬಳಿಕ ಭಕ್ತರಿಗೆ ಪ್ರಸಾದ ವಿತರಣೆ ಮಾಡಲಾಗುತ್ತದೆ.

ಮಾರ್ಚ್ 26ರಂದು ಸಂಜೆ 6 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಎಲ್.ಆರ್. ಡ್ಯಾನ್ಸ್ ಅಂಡ್ ಫಿಟ್ನೆಸ್ ಸ್ಟುಡಿಯೋ ವತಿಯಿಂದ ಅಖಿತ್ ರಾಜ್ (ಮಾಸ್ಟರ್) ನೇತೃತ್ವದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಮಾರ್ಚ್ 27ರಂದು ಬೆಳಗ್ಗೆ 9 ಗಂಟೆಗೆ ವಿಶೇಷ ಪೂಜೆ, ಮಹಾಮಂಗಳಾರತಿ ಹಾಗೂ ಪ್ರಸಾದ ವಿತರಣೆ ನಡೆಯಲಿದೆ. ಅದೇ ದಿನ ಸಂಜೆ 4 ಗಂಟೆಗೆ ನಗರದಲ್ಲಿ ಬೃಹತ್ ಶ್ರೀರಾಮ ಶೋಭಾಯಾತ್ರೆ ನಡೆಯಲಿದೆ.

ಶೋಭಾಯಾತ್ರೆ ಹಾಗೂ ವೇದಿಕೆ ಕಾರ್ಯಕ್ರಮದಲ್ಲಿ ಶ್ರೀರಾಮ ಸೇನಾ ರಾಷ್ಟ್ರಾಧ್ಯಕ್ಷ ಮತ್ತು ಸಂಸ್ಥಾಪಕ ಪ್ರಮೋದ್ ಮುತಾಲಿಕ್, ಮಾಜಿ ಕೇಂದ್ರ ಸಚಿವ ಹಾಗೂ ವಿಜಯಪುರ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ ಭಾಗವಹಿಸಲಿದ್ದಾರೆ.

ಶ್ರೀಮದ್ ನಾಗಲಾಪುರ ವೀರಧರ್ಮ ಸಿಂಹಾಸನ ಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ತೇಜೇಶಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಸಾನಿಧ್ಯ ವಹಿಸಿ ಆಶೀರ್ವಚನ ನೀಡಲಿದ್ದಾರೆ.

ಜಿಲ್ಲಾಧ್ಯಕ್ಷ ರಮೇಶ್ ರಾಜ್ ಮಾತನಾಡಿ, ಸೇವೆ, ಸುರಕ್ಷತೆ ಮತ್ತು ಸಂಸ್ಕಾರ ಎಂಬ ಧ್ಯೇಯದೊಂದಿಗೆ ಶ್ರೀರಾಮ ಸೇನಾ ಸಂಘಟನೆ ದೇಶಾದ್ಯಂತ ಕಾರ್ಯನಿರ್ವಹಿಸುತ್ತಿದ್ದು, ಹಿಂದೂ ಯುವಕರನ್ನು ಸಂಘಟಿಸಿ ಅವರಲ್ಲಿ ಸಂಸ್ಕಾರ ಮತ್ತು ಭಕ್ತಿಯನ್ನು ಬೆಳೆಸುವುದು ಸಂಘಟನೆಯ ಉದ್ದೇಶವಾಗಿದೆ ಎಂದರು.

ಹಿಂದಿನ ಎರಡು ಬಾರಿ ಪ್ರಮೋದ್ ಮುತಾಲಿಕ್ ಅವರ ಸಾರ್ವಜನಿಕ ಸಭೆಗೆ ಅಡಚಣೆ ಉಂಟಾಗಿ ಜಿಲ್ಲಾಡಳಿತದಿಂದ ಅನುಮತಿ ಸಿಗಲಿಲ್ಲ. ಈ ಬಾರಿ ಕೂಡ ಅನುಮತಿ ನೀಡದಿದ್ದರೆ ನ್ಯಾಯಾಲಯದ ಮೊರೆ ಹೋಗಿ ಅನುಮತಿ ಪಡೆಯುತ್ತೇವೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶ್ರೀರಾಮ ಸೇನಾ ಉಪಾಧ್ಯಕ್ಷ ವೆಂಕಟಸ್ವಾಮಿ, ಜಿಲ್ಲಾ ಕಾರ್ಯದರ್ಶಿ ರವಿ ಕುಮಾರ್, ನಗರ ಅಧ್ಯಕ್ಷ ಅರುಣ್, ನಾಗೇಂದ್ರ ಕುಮಾರ್ ಮತ್ತು ಸುಪ್ರೀತ್ ಉಪಸ್ಥಿತರಿದ್ದರು.

## ಗ್ಯಾಸ್ ಕೊರತೆಗೆ ಮುಕ್ತಿ ನೀಡುತ್ತಾ 'ಎಥೆನಾಲ್ ಸ್ಟೌವ್'?

ಬೆಂಗಳೂರು



ಜಾಗತಿಕ ಯುದ್ಧ ಮತ್ತು ಅನಿಶ್ಚಿತತೆಯಿಂದಾಗಿ ಅಡುಗೆ ಅನಿಲ (ಐಕಲು) ಪೂರೈಕೆಯಲ್ಲಿ ಉಂಟಾಗುತ್ತಿರುವ ಅಭಾವಕ್ಕೆ ರಾಮಬಾಣವಾಗಿ 'ಎಥೆನಾಲ್ ಸ್ಟೌವ್' (ಇಣುಚಿಟಿಕಿಟ ಖಣಕಿತಜ) ಬಳಕೆಯನ್ನು ಉತ್ತೇಜಿಸಬೇಕು ಎಂದು ಎಂಆರ್‌ಎನ್ ಉದ್ಯಮ ಸಮೂಹದ ಸಂಸ್ಥಾಪಕ ಹಾಗೂ ಮಾಜಿ ಸಚಿವ ಮುರುಗೇಶ್ ನಿರಾಣಿ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ.

ಈ ಕುರಿತು ಸರ್ಕಾರದ ಗಮನ ಸೆಳೆದಿರುವ ಅವರು, ಸ್ವದೇಶಿ ತಂತ್ರಜ್ಞಾನದ ಈ ಒಲೆಗಳು ಭವಿಷ್ಯದ ಇಂಧನ ಬಿಕ್ಕಟ್ಟಿಗೆ ಶಾಶ್ವತ ಪರಿಹಾರವಾಗಬಲ್ಲವು ಎಂದು ಅಭಿಪ್ರಾಯಪಟ್ಟಿದ್ದಾರೆ.

ಸುರಕ್ಷಿತ ಮತ್ತು ಜನಸ್ನೇಹಿ: "ಎಥೆನಾಲ್ ಸ್ಟೌವ್ ತಂತ್ರಜ್ಞಾನವು 2004ರಲ್ಲೇ ಅಭಿವೃದ್ಧಿಗೊಂಡಿದ್ದು, ಸೀಮೆಎಣ್ಣೆ ಒಲೆಗಳಷ್ಟೇ ಸರಳ ವಿನ್ಯಾಸ ಹೊಂದಿದೆ. ದೇಶದಲ್ಲಿ ಈಗಾಗಲೇ 24 ಲಕ್ಷಕ್ಕೂ ಅಧಿಕ ಕುಟುಂಬಗಳು ಇದನ್ನು ಯಶಸ್ವಿಯಾಗಿ ಬಳಸುತ್ತಿವೆ. ಅಡುಗೆ ಅನಿಲಕ್ಕೆ ಹೋಲಿಸಿದರೆ ಸ್ವಲ್ಪ ದುಬಾರಿ ಎನಿಸಿದರೂ, ಇದು ಯಾವುದೇ ಅನಾಹುತಕ್ಕೆ ಅವಕಾಶ ನೀಡದ ಅತ್ಯಂತ ಸುರಕ್ಷಿತ ಮತ್ತು ಪರಿಸರ ಸ್ನೇಹಿ ಇಂಧನವಾಗಿದೆ," ಎಂದು ನಿರಾಣಿ ವಿವರಿಸಿದ್ದಾರೆ.

ರೈತರ ಬಾಳಿಗೆ ಆಸರೆ: ಎಥೆನಾಲ್ ಉತ್ಪಾದನೆಗೆ ಕಬ್ಬು, ಮೆಕ್ಕೆಜೋಳ, ಕಳಪೆ ಗುಣಮಟ್ಟದ ಅಕ್ಕಿ ಹಾಗೂ ಕೃಷಿ ತ್ಯಾಜ್ಯಗಳನ್ನು ಬಳಸುವುದರಿಂದ, ಇದಕ್ಕೆ ಗೃಹಬಳಕೆಯ ಮನ್ನಣೆ ಸಿಕ್ಕರೆ ರೈತರ ಆದಾಯ ದುಪ್ಪಟ್ಟಾಗಲಿದೆ. ಇದು ಪ್ರಧಾನಿ ಮೋದಿಯವರ 'ಆತ್ಮನಿರ್ಭರ ಭಾರತ' ಸಂಕಲ್ಪಕ್ಕೆ ದೊಡ್ಡ ಬಲ ನೀಡಲಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಹಂತ ಹಂತವಾಗಿ ಜಾರಿ: ದೇಶದಲ್ಲಿ ಎಥೆನಾಲ್ ಉತ್ಪಾದನೆ ಹೇರಳವಾಗಿರುವ ಹಿನ್ನೆಲೆಯಲ್ಲಿ, ಮೊದಲ ಹಂತವಾಗಿ ಹೋಟೆಲ್‌ಗಳು, ವಸತಿ ನಿಲಯಗಳು ಮತ್ತು ಲಾಡ್ಜ್‌ಗಳಲ್ಲಿ ಎಥೆನಾಲ್ ಸ್ಟೌವ್ ಬಳಕೆಯನ್ನು ಸರ್ಕಾರ ಕಡ್ಡಾಯಗೊಳಿಸಬೇಕು. ಆ ಮೂಲಕ ಜನಸಾಮಾನ್ಯರಿಗೆ ಅಡುಗೆ ಅನಿಲಕ್ಕೆ ಪರ್ಯಾಯ ವ್ಯವಸ್ಥೆ ಕಲ್ಪಿಸಬಹುದು ಎಂದು ಅವರು ಸಲಹೆ ನೀಡಿದ್ದಾರೆ.

ವಿಶ್ವದ ಹಲವು ಮುಂದುವರಿದ ರಾಷ್ಟ್ರಗಳಲ್ಲಿ ಈ ಪದ್ಧತಿ ಈಗಾಗಲೇ ಯಶಸ್ವಿಯಾಗಿದ್ದು, ಭಾರತದಲ್ಲೂ ಈ ಕ್ರಾಂತಿಕಾರಿ ಬದಲಾವಣೆ ಜಾರಿಗೆ ಬರಲಿ ಎಂಬುದು ನಿರಾಣಿ ಅವರ ಆಶಯವಾಗಿದೆ.

## 'ಗ್ಯಾರಂಟಿ ರದ್ದು ಮಾಡಲು ತಾಕತ್ತಿದ್ದರೆ ಸದನದಲ್ಲಿ ನಿರ್ಣಯ ತನ್ನಿ'

ಬೆಂಗಳೂರು



"ಗ್ಯಾರಂಟಿ ಯೋಜನೆಗಳನ್ನು ಹಿಂಪಡೆಯಿರಿ, ಮರುಪರಿಶೀಲನೆ ಮಾಡಿ ಎಂದು ಬಿಜೆಪಿಯಿಂದ ಅಧಿಕೃತ ತೀರ್ಮಾನ ಮಾಡಿ ಸದನದಲ್ಲಿ ನಿರ್ಣಯ ಮಂಡಿಸಿ, ಆನಂತರ ಜನರ ಮುಂದೆ ಸದನದಲ್ಲಿ ಇದರ ಬಗ್ಗೆ ಚರ್ಚೆ ನಡೆಸೋಣ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಸವಾಲೆಸೆದರು.

ವಿಧಾನಸಭೆಯಲ್ಲಿ 2026–27ನೇ ಸಾಲಿನ ಬಜೆಟ್ ಕುರಿತು ಚರ್ಚೆ ವೇಳೆ ಬಿಜೆಪಿ ಶಾಸಕ ಸುರೇಶ್ ಗೌಡ ಅವರು ಗ್ಯಾರಂಟಿ ಯೋಜನೆಗಳನ್ನು ರದ್ದುಗೊಳಿಸಬೇಕು ಎಂದು ಹೇಳಿದಾಗ, ಶಿವಕುಮಾರ್ ಅವರು ತಿರುಗೇಟು ನೀಡಿದರು.

"ಸುರೇಶ್ ಅವರೇ ನೀವು ಹಿರಿಯ ನಾಯಕರಿದ್ದೀರಿ, ಮಾಜಿ ನಿಮ್ಮ ಜತೆ ಮಾಜಿ ಡಿಸಿಎಂ ಇದ್ದಾರೆ. ಈ ಅಭಿಪ್ರಾಯ ಕೇವಲ ನಿಮ್ಮ ವೈಯಕ್ತಿಕವಲ್ಲ. ಅದು ಪಕ್ಷದ ಅಭಿಪ್ರಾಯ. ನೀವು ಏನು ಹೇಳುವಿರೋ ಅದರ ಬಗ್ಗೆ ಚಿಂತನೆ ನಡೆಸೋಣ. ನೀವು ಹೇಳುತ್ತಿರುವುದು ಸರಿಯಿಲ್ಲ ಎಂದು ಹೇಳುತ್ತಿಲ್ಲ. ಈ ಬಜೆಟ್ ಅಧಿವೇಶನದ ಒಳಗೆಯೇ ನಿಮ್ಮ ತೀರ್ಮಾನ ತಿಳಿಸಿ" ಎಂದು ಹೇಳಿದರು.

ಕೋಳಿ ಕೇಳಿ ಖಾರ ಅರೆದಂತಿದೆ, ಗ್ಯಾರಂಟಿ ಕೊಡುವಾಗ ನಮ್ಮನ್ನು ನೀವು ಕೇಳಿದ್ರ ಎಂದು ಸುರೇಶ್ ಅವರು ಪ್ರತಿಕ್ರಿಯೆ ನೀಡಿದಾಗ, "ಯಡಿಯೂರಪ್ಪ ಅವರು ಒಂದು ಕಾಳು ಕಡಿಮೆ ಆದರೂ ಬಿಡುವುದಿಲ್ಲ ಎಂದು ಹೇಳಿದ್ದರು. ಆನಂತರ ಅದು ಕಡಿಮೆ ಆಯಿತು, ಇದು ಕಡಿಮೆ ಆಯಿತು ಎಂದವರು ನೀವು. ಅದಕ್ಕೆ ಆರು ತಿಂಗಳಲ್ಲಿ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದೆವು. ನಿಮ್ಮ ಮಾತನ್ನೂ ಕೇಳಿ ಗ್ಯಾರಂಟಿ ಯೋಜನೆಗಳನ್ನು ನೀಡಿದ್ದೇವೆ" ಎಂದು ತಿರುಗೇಟು ನೀಡಿದರು.

"ಇತ್ತೀಚೆಗೆ ಅಸ್ಸಾಂ ರಾಜ್ಯಕ್ಕೆ ಹೋಗಿದ್ದೆ. ಅಸ್ಸಾಂನಲ್ಲಿ ಬಿಜೆಪಿ ಕಾರ್ಯಕರ್ತರಿಗೆ ಮಾತ್ರ ನೀಡುತ್ತಿದ್ದಾರೆ. ಕಾಂಗ್ರೆಸ್ ಪಕ್ಷದವರಿಗೆ ಇಲ್ಲ. ಈಗ ಚಾಟ್ ಜಿಪಿಟಿಯಲ್ಲಿ ಹೌ ಟು ವಿನ್ ಗುಜರಾತ್ ಎಲೆಕ್ಷನ್ ಎಂದು ಹಾಕು, ಕರ್ನಾಟಕ ಮಾದರಿ ಅನುಸರಿಸಿ ಎಂದು ಬರಲಿಲ್ಲ ಎಂದರೆ ಕೇಳಿ. ಸರ್ಕಾರಿ ಅಧಿಕಾರಿಗಳಿಗೆ, ಉಳ್ಳವರಿಗೆ ಗ್ಯಾರಂಟಿ ಯೋಜನೆಗಳು ಬೇಕಿಲ್ಲ. ನಾವು ಒಂದು ತೀರ್ಮಾನ ಮಾಡಿದ್ದೇವೆ. ಅದೇ ರೀತಿ ನೀವು ಒಂದು ತೀರ್ಮಾನಕ್ಕೆ ಬನ್ನಿ" ಎಂದರು.

ಮರುಚಿಂತನೆ ಮಾಡಿ ಎಂದು ಮುಖ್ಯಮಂತ್ರಿಯವರಿಗೆ ಹೇಳಿದ್ದೇ ಎಂದು ಸುರೇಶ್ ಗೌಡ ಅವರು ಹೇಳಿದಾಗ, "ಪಕ್ಕದಲ್ಲಿ, ಡಿನ್ನರ್ ಮೀಟಿಂಗ್, ಡೇ ಲೈಟ್ ಮೀಟಿಂಗ್ ಅಲ್ಲಿ, ಬೇರೆ, ಬೇರೆ ಮೀಟಿಂಗ್ ಅಲ್ಲಿ ಹೇಳಿರುವುದು ಬೇಡ. ನಿಮ್ಮ ತೀರ್ಮಾನವನ್ನ ವಿಧಾನಸಭೆ, ಜನ, ದೇಶ ನೋಡಬೇಕು" ಎಂದರು.

ನನ್ನ ಬಗ್ಗೆ ಮಾತನಾಡದಿದ್ದರೆ ಬಿಜೆಪಿ ಸ್ನೇಹಿತರಿಗೆ ನಿದ್ದೆ, ಸ್ಫೂರ್ತಿ ಬರುವುದಿಲ್ಲ:

ಇದಕ್ಕೂ ಮುನ್ನ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಒಬ್ಬರ ಮುಖ ಮತ್ತೊಬ್ಬರು ನೋಡುವುದಿಲ್ಲ ಎಂದು ಹೇಳಿದಾಗ ಎದ್ದು ಮಾತನಾಡಿದ ಶಿವಕುಮಾರ್ ಅವರು, "ಬಿಜೆಪಿಯಲ್ಲಿರುವ ನನ್ನ ಕೆಲವು ಸ್ನೇಹಿತರಿಗೆ ನನ್ನನ್ನು ಸ್ಮರಿಸದಿದ್ದರೆ ಅವರಿಗೆ ಸಮಾಧಾನವಿಲ್ಲ, ನಿದ್ದೆ ಬರುವುದಿಲ್ಲ, ಸಂತೋಷ ಆಗುವುದಿಲ್ಲ, ಸ್ಫೂರ್ತಿ ಬರುವುದಿಲ್ಲ. ಹೀಗಾಗಿ ನನ್ನ ಸದಾ ನೆನಪಿಸಿಕೊಳ್ಳುತ್ತಿರುತ್ತಾರೆ. ಅವರಿಗೆ ಬಜೆಟ್ ವಿರುದ್ಧವಾಗಿ ಮಾತನಾಡಲು ಏನು ಇಲ್ಲದ ಕಾರಣ ನನ್ನ ವಿಚಾರ ಎತ್ತಿ ಮಾತನಾಡುತ್ತಾರೆ. ಮಾತನಾಡಲಿ, ಖುಷಿಪಡಲಿ. ಧೈರ್ಯವಿರುವ ಒಬ್ಬ ವ್ಯಕ್ತಿ ಬಹುಮತ ತರಬಲ್ಲ ಎದು ನಂಬಿರುವವನು ನಾನು" ಎಂದು ತಿಳಿಸಿದರು.

## 'ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಿ'




ತುಮಕೂರು

"ಕ್ರೀಡೆಗಳು ಕೇವಲ ದೈಹಿಕ ವ್ಯಾಯಾಮವಲ್ಲ, ಅವು ಯುವಜನರಲ್ಲಿ ಶಿಸ್ತು, ಸಮಯ ಪ್ರಜ್ಞೆ ಮತ್ತು ರಾಷ್ಟ್ರಭಕ್ತಿಯನ್ನು ಬೆಳೆಸುವ ಶಕ್ತಿಯುತ ಸಾಧನಗಳು," ಎಂದು ತುಮಕೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಎಂ. ವೆಂಕಟೇಶ್ವರಲು ತಿಳಿಸಿದರು.

ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಕೇಂದ್ರ ಯುವ ವ್ಯವಹಾರಗಳ ಸಚಿವಾಲಯ, ಮೈಭಾರತ್, ಜಿಲ್ಲಾಡಳಿತ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ 2025–26ನೇ ಸಾಲಿನ ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮೈದಾನ–ಗ್ರಂಥಾಲಯದ ಒಡನಾಟ ಇರಲಿ: ಯುವ ಜನತೆಗೆ ಕಿವಿಮಾತು ಹೇಳಿದ ಕುಲಪತಿಗಳು, "ಯುವಜನರು ಮೈದಾನ, ತರಗತಿ ಹಾಗೂ ಗ್ರಂಥಾಲಯ– ಈ ಮೂರು ಕಡೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಾಗ ಮಾತ್ರ ಉಜ್ವಲ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ. ಸೋಲಿಗೆ ಕುಗ್ಗದೆ, ಗೆಲುವಿಗೆ ಬೀಗದೆ ಎರಡನ್ನೂ ಸಮಾನವಾಗಿ ಸ್ವೀಕರಿಸುವ ಬದುಕಿನ ಪಾಠವನ್ನು ಕ್ರೀಡೆ ಕಲಿಸುತ್ತದೆ. ಕ್ರೀಡಾಪಟುಗಳು ಪಿ.ವಿ. ಸಿಂಧು ಅವರ ಸಾಧನೆಯನ್ನು ಮಾದರಿಯಾಗಿಟ್ಟುಕೊಳ್ಳಬೇಕು," ಎಂದರು.

ಡಿಜಿಟಲ್ ಲೋಕದಿಂದ ಹೊರಬನ್ನಿ: ಗೃಹ ಸಚಿವರ ವಿಶೇಷ ಕರ್ತವ್ಯ ಅಧಿಕಾರಿ ಡಾ. ಕೆ. ನಾಗಣ್ಣ ಮಾತನಾಡಿ, "ಇಂದಿನ ಯುವಕರು ಮೊಬೈಲ್ ಮತ್ತು ಡಿಜಿಟಲ್ ಲೋಕದಲ್ಲಿ ಮುಳುಗಿದ್ದಾರೆ. ಇದರಿಂದ ಹೊರಬಂದು ಕ್ರೀಡಾಂಗಣಕ್ಕೆ ಬರುವುದು ಇಂದಿನ ತುರ್ತು ಅಗತ್ಯವಾಗಿದೆ. ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಕ್ರೀಡೆ ರಾಮಬಾಣ," ಎಂದು ಅಭಿಪ್ರಾಯಪಟ್ಟರು.

ಚಟುವಟಿಕೆಗಳು ಮತ್ತು ವಿಜೇತರು: ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ 200ಕ್ಕೂ ಅಧಿಕ ಕ್ರೀಡಾಪಟುಗಳು ಭಾಗವಹಿಸಿದ್ದರು. ವಾಲಿಬಾಲ್, ಓಟದ ಸ್ಪರ್ಧೆ, ಉದ್ದ ಜಿಗಿತ, ಗುಂಡು ಎಸೆತ ಹಾಗೂ ಯುವತಿಯರಿಗಾಗಿ ಹಗ್ಗ ಜಗ್ಗಾಟ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ವಿಜೇತರಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪನಿರ್ದೇಶಕ ರೋಹಿತ್ ಗಂಗಾಧರ್ ಟ್ರೋಫಿ ಮತ್ತು ಪ್ರಮಾಣಪತ್ರ ವಿತರಿಸಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ತನಿಖಾ ಸಮಿತಿ ಅಧ್ಯಕ್ಷ ಸಂತೋಷ್, ಮೈಭಾರತ್ ಉಪನಿರ್ದೇಶಕಿ ಕೆ. ಶ್ರೀವಾಣಿ ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು. ಮೈಭಾರತ್ ಲೆಕ್ಕಾಧಿಕಾರಿ ಸುಂದರಮ್ಮ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

## ಮೈಸೂರು ಕುಡಿವ ನೀರು, ಒಳಚರಂಡಿ ವ್ಯವಸ್ಥೆಗೆ ೮೦೦ ಕೋಟಿ ರೂ: ಬೈರತಿ ಸುರೇಶ್

ವಿಧಾನಸಭೆ



ಸಾಂಸ್ಕೃತಿಕ ನಗರ ಮೈಸೂರಿನ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆ ಅಭಿವೃದ್ಧಿಗೆ ಈ ಬಾರಿ ಬಜೆಟ್ ನಲ್ಲಿ 750 ರಿಂದ 800 ಕೋಟಿ ರೂಪಾಯಿ ಮೀಸಲಿಡಲಾಗುತ್ತದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಜಿ.ಟಿ.ದೇವೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮೈಸೂರು ನಗರದ ವಿವಿಧ ಬಡಾವಣೆಗಳಲ್ಲಿ ಮಳೆನೀರು ಚರಂಡಿ ನಿರ್ಮಾಣ ಮಾಡಲಾಗಿದೆ. ಆದರೆ, ಕೆಲವು ಕಡೆ ಸಂಪರ್ಕ ಕಲ್ಪಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಈ ಕಾಮಗಾರಿ ಕೈಗೊಳ್ಳಲು 27 ಕೋಟಿ ವಿಶೇಷ ಅನುದಾನಕ್ಕಾಗಿ ಮೈಸೂರು ಮಹಾನಗರ ಪಾಲಿಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ, ಆರ್ಥಿಕ ಇಲಾಖೆ ಈ ಪ್ರಸ್ತಾವನೆಯನ್ನು ತಿರಸ್ಕರಿಸಿತ್ತು ಎಂದು ವಿವರಣೆ ನೀಡಿದರು.

ಇತ್ತೀಚೆಗೆ ಮಂಡಿಸಲಾದ ಬಜೆಟ್ ನಲ್ಲಿ ಮೈಸೂರಿನ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಗಾಗಿ 1500 ಕೋಟಿ ರೂಪಾಯಿಗಳನ್ನು ಮೀಸಲಿಡುವಂತೆ ಪ್ರಸ್ತಾವನೆ ಸಲ್ಲಿಸಲಾಗಿತ್ತು.

ಇದನ್ನು ಪುರಸ್ಕರಿಸಿರುವ ಮುಖ್ಯಮಂತ್ರಿಗಳು ಸುಮಾರು 750 ರಿಂದ 800 ಕೋಟಿ ರೂಪಾಯಿಗಳನ್ನು ಈ ಉದ್ದೇಶಕ್ಕಾಗಿ ಮೀಸಲಿಡಲಾಗುತ್ತಿದೆ ಎಂದು ಸಚಿವರು ಸದನಕ್ಕೆ ತಿಳಿಸಿದರು.

ಎಂಡಿಎದಿಂದ 300 ಕೋಟಿ:

ಮೈಸೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳ ಸರ್ವಾಂಗೀಣ ಅಭಿವೃದ್ಧಿಗೆಂದು ಮೈಸೂರು ಅಭಿವೃದ್ಧಿ ಪ್ರಾಧಿಕಾರವನ್ನು ರಚನೆ ಮಾಡಲಾಗಿದೆ. ಇದಕ್ಕೆ 200 ಕೋಟಿ ರೂಪಾಯಿಗಳನ್ನೂ ನೀಡಲಾಗಿದೆ. ಇದೇ ವೇಳೆ, ನಗರದ ರಸ್ತೆಗಳಿಗೆ ವೈಟ್ ಟಾಪಿಂಗ್ ಯೋಜನೆಗಳಿಗಾಗಿ 300 ಕೋಟಿ ರೂಪಾಯಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದು ಅವರು ಹೇಳಿದರು.

ಸಿಎ ನಿವೇಶನಗಳ ಮಾರಾಟ:

ವಿವಿಧ ಬಡಾವಣೆಗಳಲ್ಲಿ ಇರುವ ಸಿಎ ನಿವೇಶನಗಳನ್ನು ಮಾರಾಟ ಮಾಡುವಂತೆ ಜಿ.ಟಿ.ದೇವೇಗೌಡ ಅವರು ನೀಡಿದ ಸಲಹೆಗೆ ಸ್ಪಂದಿಸಿದ ಸಚಿವ ಬೈರತಿ ಸುರೇಶ್ ಅವರು, ಸಿಎ ನಿವೇಶನಗಳನ್ನು ಮಾರಾಟ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಇದರಿಂದ ಸುಮಾರು 4 ರಿಂದ 5 ಸಾವಿರ ಕೋಟಿ ರೂಪಾಯಿ ಆದಾಯವನ್ನು ನಿರೀಕ್ಷಿಸಲಾಗಿದೆ. ಈ ಹಣವನ್ನು ಮೈಸೂರು ಮತ್ತು ಹೊಸ ಬಡಾವಣೆಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಬಳಸಲು ರೂಪುರೇಶೆ ರೂಪಿಸಲಾಗುತ್ತದೆ ಎಂದು ಭರವಸೆ ನೀಡಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy